ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ


SP NEWS ಡಿಜಿಟಲ್ ನ್ಯೂಸ್ ಕಹಾನಿ

SURYA PRAGATHI Kannada daily
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue: 174 ಸಂಚಿಕೆ: 174 | Date:01-08-2026 Saturday | RNI NO : KARKAN/2021/80805 | L2/RNP-1285/TMR/2025-27 | Page: 4 ಪುಟ : 4 | Price: 1.00 ಬೆಲೆ: 1.00 ರೂ

ತಮಿಳುನಾಡು ಸಿಎಂ, ಕರ್ನಾಟಕಕ್ಕೆ ಬರಲ್ಲ; ವಿಜಯ್ ಭೇಟಿ ಬಗ್ಗೆ ಡಿಕೆಶಿ ಮಹತ್ವದ ನಿರ್ಧಾರ





ತಮಿಳುನಾಡು ಸಿಎಂ ವಿಜಯ್ ಅವರೇ ನಮ್ಮ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದರು. ಭೇಟಿಗೆ ಅವಕಾಶ ಕೋರಿದರು. ಹೀಗಾಗಿ ನಾವು ಅಗಸ್ಟ್ 3ಕ್ಕೆ ಸಮಯ ನಿಗದಿ ಮಾಡಿದ್ದೆವು. ಆದರೆ ಈಗ ನಾನು ಸಿಎಂ ವಿಜಯ್‌ಗೆ ಈ ಒಂದು ವಿನಂತಿ ಮಾಡಿದ್ದೇನೆ ಎಂದು ಡಿಕೆಶಿ ತಿಳಿಸಿದ್ದಾರೆ.

ತಮಿಳುನಾಡಿಗೆ ಕಾವೇರಿ ನೀರು ಬಿಡುವ ಕುರಿತು ಕಾವೇರಿ ನೀರು ನಿಯಂತ್ರಣ ಸಮಿತಿ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿದ ಆದೇಶದ ಕುರಿತು ಮಾತಾಡಲು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ದಿಢೀರ್ ಸುದ್ದಿಗೋಷ್ಠಿ ಕರೆದಿದ್ದರು. ಇದೇ ವೇಳೆ ಮಾತಾಡಿದ ಡಿಕೆ ಶಿವಕುಮಾರ್ ಅವರು ರಾಜ್ಯಕ್ಕೆ ತಮಿಳುನಾಡು ಸಿಎಂ ಭೇಟಿಯನ್ನ ಮುಂದೂಡಿಕೆ ಮಾಡಿರೋದಾಗಿ ತಿಳಿಸಿದ್ದಾರೆ. ಇಂಥಹ ಸ್ಥಿತಿಯಲ್ಲಿ ಭೇಟಿ-ಚರ್ಚೆ ಉತ್ತಮ ಬೆಳವಣಿಗೆಯಲ್ಲ ಎಂದು ಡಿಕೆಶಿ ತಿಳಿಸಿದ್ದಾರೆ.

ಕರ್ನಾಟಕಕ್ಕೆ ಬರಲ್ಲ ವಿಜಯ್

ತಮಿಳುನಾಡು ಸಿಎಂ ವಿಜಯ್ ಅವರೇ ನಮ್ಮ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದರು. ಭೇಟಿಗೆ ಅವಕಾಶ ಕೋರಿದರು. ಹೀಗಾಗಿ ನಾವು ಅಗಸ್ಟ್ 3ಕ್ಕೆ ಸಮಯ ನಿಗದಿ ಮಾಡಿದ್ದೆವು. ಆದ್ರೆ ಈಗ ನಾನು ಸಿಎಂ ವಿಜಯ್‌ಗೆ ವಿನಂತಿ ಮಾಡಿದ್ದೇನೆ. ಇದು ಭೇಟಿಗೆ ಉತ್ತಮ ಸಮಯವಲ್ಲ ಹೀಗಾಗಿ ಮುಂದೂಡಿಕೆ ಮಾಡಲು ಮನವಿ ಮಾಡಿರೋದಾಗಿ ಡಿಕೆಶಿ ತಿಳಿಸಿದ್ದಾರೆ.

ವಿಜಯ್-ಡಿಕೆಶಿ ಸಭೆ ಮುಂದೂಡಿಕೆ

ಇಬ್ಬರು ನಾಯಕರ ಭೇಟಿಯಿಂದ ಎರಡು ರಾಜ್ಯಕ್ಕೆ ಅನುಕೂಲ ಆಗ್ಬೇಕು. ಅದರ ಹೊರತಾಗಿ ವ್ಯತಿರಿಕ್ತವಾಗಬಾರದು. ಈಗ ಇಲ್ಲಿನ ವಾತಾವರಣ ನೋಡಿ ಸಭೆ ಮುಂದೂಡುವಂತೆ ವಿನಂತಿಸಿದ್ದೇನೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಸರ್ವಪಕ್ಷ ಸಭೆಯಲ್ಲಿ ಅಂತಿಮ ನಿರ್ಧಾರ

ರಾಜ್ಯವನ್ನ ಕಾಪಾಡುವುದು ನನ್ನ ಹಾಗೂ ನಮ್ಮ ಸರ್ಕಾರದ ಕರ್ತವ್ಯ ಆಗಿದೆ. ಹೀಗಾಗಿ ಕಾವೇರಿ ನೀರಿನ ವಿಚಾರಕ್ಕೆ ಚರ್ಚೆ ನಡೆಸಬೇಕಿದೆ. ಭಾನುವಾರ ಸರ್ವಪಕ್ಷ ಸಭೆಗೆ ಆಹ್ವಾನ ನೀಡಿದ್ದು, ಚರ್ಚೆಯ ಬಳಿಕ ಅಂತಿಮ ನಿರ್ಧಾರ ತೆಗೆದು ಕೊಳ್ಳುವುದಾಗಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ರಾಜ್ಯದ ಪರ ನಾವು ವಾದ ಮಾಡಿದ್ದೇವೆ

ಆದೇಶ ಬಂದ ಮೇಲೆ ನಾವು ಅಫೀಲ್ ಹೋಗಿದ್ದೆವು. CWMAನಲ್ಲಿ ರಾಜ್ಯದ ಮೂವರು ವಾದ ಮಾಡಿದ್ರು ಸರಿಯಾಗಿ ವಾದಿಸಿಲ್ಲ ಅಂತ ವಿರೋಧ ಪಕ್ಷದವರು ಆರೋಪಿಸಿದ್ದಾರೆ. ಅವರಿಗೆ ನಾವು ಉತ್ತರ ನೀಡಬೇಕಿಲ್ಲ ಎಂದು ಡಿಕೆ ಶಿವಕುಮಾರ್ ಹೇಳಿದರು.

ಬಸವರಾಜ್ ಬೊಮ್ಮಾಯಿ ಇದ್ದಾಗ ಯಾರು ಅಡ್ವೈಸರ್ ಇದ್ದ ಅವರನ್ನೇ ನಾವು ಮುಂದುವರೆಸಿದ್ದೇವೆ ಅವರು ಸಹ ವಾದ ಮಾಡಿದ್ದಾರೆ. ಡ್ಯಾಮ್‌ಗೆ ಒಳಹರಿವು ನಿಮಗೆ ಬರ್ತಾ ಇದೆ ಹೀಗಾಗಿ ನೀರು ಬಿಡಿ ಎಂದಿದ್ದಾರೆ. ಹಾರಂಗಿ 95%, ಕಬಿನಿ 83%, ಕೆಆರ್ ಎಸ್ 36%, ಹೇಮಾವತಿ 67% ಭರ್ತಿ ಆಗಿದೆ. ನಮಗೆ ಒಟ್ಟೂ ಒಳಹರಿವು 2 ಟಿಎಂಸಿ ಇದೆ ಎಂದು ಡಿಕೆಶಿ ಮಾಹಿತಿ ನೀಡಿದರು.

ಕಾವೇರಿ ನೀರಿಗಾಗಿ ಕರ್ನಾಟಕ ಬಂದ್..? ಮಹತ್ವದ ನಿರ್ಧಾರ





ಸೂರ್ಯಪ್ರಗತಿನ್ಯೂಸ್.ಕಾಂ

ಹಲವು ಸಂಘಟನೆಗಳು ನಡೆಸಿದ ಸಭೆಯಲ್ಲಿ ಕರ್ನಾಟಕ ಬಂದ್ ಬಗ್ಗೆ ಮಹತ್ವದ ನಿರ್ಧಾರ



ತೆಗೆದುಕೊಂಡಿದ್ದು, ದಿನಾಂಕ ನಿಗಧಿಗೊಳಿಸಲಾಗಿದೆ. ದಿನದಿಂದ ದಿನಕ್ಕೆ ಕಾವೇರಿ ಹೋರಾಟದ ಕಿಚ್ಚು ಜೋರಾಗಿದ್ದು, ಕರ್ನಾಟಕ ಬಂದ್‌ಗೆ ಕನ್ನಡ ಪರ ಸಂಘಟನೆಗಳು ಕರೆ ನೀಡಿದೆ. ಹಲವು ಸಂಘಟನೆಗಳು ನಡೆಸಿದ ಸಭೆಂುಲ್ಲಿ ಕರ್ನಾಟಕ ಬಂದ್ ಬಗ್ಗೆ ಮಹತ್ವದ ನಿರ್ಧಾರ ತೆಗೆದುಕೊಂಡಿದ್ದು, ದಿನಾಂಕ ಫಿಕ್ಸ್ ಮಾಡಲಾಗಿದೆ. ಆಗಸ್ಟ್ 13 ರಂದು ಕರ್ನಾಟಕ ಬಂದ್‌ಗೆ ವಾಟಾಳ್ ನಾಗರಾಜ್ ಕರೆ ನೀಡಿದ್ದಾರೆ.

ಆ.13ರಂದು ಕರ್ನಾಟಕ ಸ್ತಬ್ಧ

ನಡೆಸಿದ ಸಭೆಂುಲ್ಲಿ ಕರವೇ ಪ್ರವೀಣ್ ಶೆಟ್ಟಿ, ಶಿವರಾಮೇಗೌಡ, ಸಾರಾ ಗೋವಿಂದು, ಕೆಆರ್ ಕುಮಾರ್, ರೈತ ಪರ ಸಂಘಟನೆಗಳು ಭಾಗಿಯಾಗಿದ್ರು, ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿದ ಹೋರಾಟಗಾರರು ಆಗಸ್ಟ್ 13ರಂದು ಕರ್ನಾಟಕ ಬಂದ್ ಮಾಡುವುದಾಗಿ ಘೋಷಿಸಿದ್ದು, ಈ ವೇಳೆ ಕೈ ಕೈ ಹಿಡಿದು ಒಗ್ಗಟ್ಟು ಪ್ರದರ್ಶಿಸಿದ ಕನ್ನಡ ಪರ ಸಂಘಟನೆಗಳು ಒಗ್ಗಟ್ಟು ಪ್ರದರ್ಶಿಸಿದೆ.

ಕನ್ನಡಿಗರೇನು ಕೇಂದ್ರದ ಗುಲಾಮರ?

ಕಣ್ಣು ಮುಚ್ಕೊಂಡು ತೀರ್ಪು ಕೊಡೋಕೆ ಬೇಕಾ ಕನ್ನಡಿಗರೇನು ಕೇಂದ್ರದ ಗುಲಾಮರ? ಭಾರತದ ಭೂಪಟದಲ್ಲಿ ಕರ್ನಾಟಕ ಇಲ್ವಾ? ಕರ್ನಾಟಕದ ಬಗ್ಗೆ ಇಷ್ಟೊಂದು ತಾತ್ಸರ ಏಕೆ? ಎಂದು ಸಾರಾ ಗೋವಿಂದು ಆಕ್ರೋಶ ಹೊರಹಾಕಿದರು.

ಕರ್ನಾಟಕ ಬಂದ್ ಬಗ್ಗೆ ಕರವೇ ಸ್ಪಷ್ಟನೆ

ಈ ನಿರ್ದೇಶನವನ್ನು ಕರ್ನಾಟಕ ಸರ್ಕಾರ ಯಾವುದೇ ಕಾರಣಕ್ಕೂ ಒಪ್ಪಿಕೊಳ್ಳಬಾರದು ಎಂದು ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಆಗ್ರಹಿಸಿದ್ದಾರೆ. ಇನ್ನು ಕರ್ನಾಟಕ ಬಂದ್ ಬಗ್ಗೆಯೂ ಕರವೇ ಅಧ್ಯಕ್ಷರು ಸ್ಪಷ್ಟನೆ ನೀಡಿದ್ದಾರೆ.

ಹೋರಾಟಗಾರರ ಕೊನೆಯ ಅಸ್ತ್ರ

ಕರ್ನಾಟಕ ಬಂದ್ ಮಾಡುವಲ್ಲಿ ಕರ್ನಾಟಕ ರಕ್ಷಣಾ ವೇದಿಕೆಗೆ ಯಾವುದೇ ಆಸಕ್ತಿಯಿಲ್ಲ. ಬಂದ್ ಎನ್ನುವುದು ಹೋರಾಟಗಾರರ ಕೊನೆಯ ಅಸ್ತ್ರ. ಜನ ಜೀವನಕ್ಕೆ ತೊಂದರೆಯಾಗುವ ಅಂತಹ ಹಂತಕ್ಕೆ ನಾವು ಈಗಲೇ ಹೋಗುವುದಿಲ್ಲ. ಜನರಿಗೆ ತೊಂದರೆ ಆಗದಂತೆ ವಿವಿಧ ಹೋರಾಟದ ಮಾರ್ಗಗಳನ್ನು ಕರ್ನಾಟಕ ರಕ್ಷಣಾ ವೇದಿಕೆ ಅನುಸರಿಸಲಿದು ಎಂದು ನಾರಾಯಣಗೌಡ ಹೇಳಿದ್ದಾರೆ.

ಗುಪ್ತವಾಗಿ ಬಂದ ಮಾಹಿತಿಯಿಂದ ಬಯಲಾಯ್ತು ಪೊಲೀಸ್ ಪುತ್ರನ ಕರಾಳ ಕಥೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು, : ಒಂದು ಕಡೆ ತಂದೆ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಬಳಕೆಯ ವಿರುದ್ಧ ಜಾಗೃತಿ ಮೂಡಿಸುತ್ತಿದ್ದರೆ, ಇನ್ನೊಂದೆಡೆ ಆತನ ಮಗನೇ ಗ್ಯಾಂಗ್ ಕಟ್ಟಿಕೊಂಡು ಹೈಡ್ರೋ ಗಾಂಜಾ ಮಾರಾಟ ಮಾಡುತ್ತಿದ್ದ ಆಘಾತಕಾರಿ ಘಟನೆ ತುಮಕೂರಿನಲ್ಲಿ ಬೆಳಕಿಗೆ ಬಂದಿದೆ. ಪೊಲೀಸರ ರಹಸ್ಯ 'ಕ್ಯೂಆರ್ ಕೋಡ್' ಯೋಜನೆಯಿಂದಾಗಿ ಪೊಲೀಸ್ ಸಿಬ್ಬಂದಿಯ ಪುತ್ರ ಸೇರಿ 9 ಮಂದಿ ಖೆಡ್ಡಾಕ್ಕೆ ಬಿದ್ದಿದ್ದಾರೆ.

ಕ್ಯೂಆರ್ ಕೋಡ್ ರಹಸ್ಯ

ತುಮಕೂರು ಉಪವಿಭಾಗದ ಡಿವೈಎಸ್‌ಪಿ ಚಂದ್ರಶೇಖರ್ ಅವರು ಮಾದಕ ದಂಧೆ ತಡೆಯಲು ಕ್ಯೂಆರ್ ಕೋಡ್ ಜಾಗೃತಿ



ಅಭಿಯಾನ ಆರಂಭಿಸಿದ್ದರು. ಸಾರ್ವಜನಿಕರು ಗುಪ್ತವಾಗಿ ಮಾಹಿತಿ ನೀಡಲು ಮತ್ತು ಮಾಹಿತಿ ನೀಡಿದವರ ವಿವರ ಗೌಪ್ಯವಾಗಿಡಲು ಈ ವ್ಯವಸ್ಥೆ ಮಾಡಲಾಗಿತ್ತು. ಜುಲೈ 10ರಂದು ಈ ಕ್ಯೂಆರ್ ಕೋಡ್ ಮೂಲಕ ಬಂದ ಗೌಪ್ಯ ಸುಳಿವನ್ನು ಬೆನ್ನಟ್ಟಿದ ತಿಲಕ್ ಪಾರ್ಕ್ ಪೊಲೀಸರಿಗೆ ಅಚ್ಚರಿಯ ಸತ್ಯ ಕಾದಿತ್ತು.

ಬಿಸಿಎ ವಿದ್ಯಾರ್ಥಿಯ ಕರಾಳ ದಂಧೆ

ತುಮಕೂರು ಎಸ್ಪಿ ಕಚೇರಿಯ ಹಿಂದಿನ ಪೊಲೀಸ್ ಕ್ವಾರ್ಟರ್ಸ್‌ನಲ್ಲಿ ವಾಸವಿದ್ದ ಪೊಲೀಸ್ ಸಿಬ್ಬಂದಿ ರಘುನಾಥ್ ಅವರ ಪುತ್ರ ದಿಶಾಂತ್ (21) ಎಂಬ ಬಿಸಿಎ ವಿದ್ಯಾರ್ಥಿಯೇ ಈ ಗ್ಯಾಂಗ್‌ನ ಮುಖ್ಯಸ್ಥ. ಬೆಂಗಳೂರಿನಿಂದ ವ್ಯವಸ್ಥಿತವಾಗಿ ಸಾಮಾನ್ಯ ಗಾಂಜಾ ಹಾಗೂ ದುಬಾರಿ 'ಹೈಡ್ರೋ ಗಾಂಜಾ' ತರಿಸಿಕೊಂಡು ತುಮಕೂರಿನಲ್ಲಿ ಮಾರಾಟ ಮಾಡುತ್ತಿದ್ದ. ಕಾರ್ಯಾಚರಣೆ ನಡೆಸಿದ ಪೊಲೀಸರು ದಿಶಾಂತ್ ಸೇರಿದಂತೆ ಬೆಂಗಳೂರಿನ ಮಂಜುನಾಥ್ (35), ತುಮಕೂರಿನ ಸತೀಶ್ (37), ಪ್ರಮೋದ್ (28), ದರ್ಶನ್ (31) ಮತ್ತು ಅಮೋಘ್ (31) ಎಂಬ ಆರು ಮಂದಿಯನ್ನು ಮೊದಲ ಹಂತದಲ್ಲಿ ಬಂಧಿಸಿದರು. ಇವರಿಂದ ಫಾರ್ಚ್ಯೂನರ್ ಕಾರು ಹಾಗೂ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ.

ತನಿಖೆ ಮುಂದುವರಿಸಿದ ಪೊಲೀಸರು ಮತ್ತಷ್ಟು ಸುಳಿವು ಆಧರಿಸಿ ಮತ್ತೆ ಮೂವರನ್ನು ಸೆರೆಹಿಡಿದಿದ್ದು, ಈವರೆಗೆ ಒಟ್ಟು 9 ಮಂದಿ ಜೈಲುಪಾಲಾಗಿದ್ದಾರೆ. ತಿಲಕ್ ಪಾರ್ಕ್ ಪೊಲೀಸರು ಪ್ರಕರಣದ ತನಿಖೆ ಚುರುಕುಗೊಳಿಸಿದ್ದು, ಉಳಿದ ಆರೋಪಿಗಳಿಗಾಗಿ ಬಲೆ ಬೀಸಿದ್ದಾರೆ.

ಬೈಕ್ ಗೆ ಲಾರಿ ಡಿಕ್ಕಿ ಮಹಿಳೆ ಧಾರುಣ ಸಾವು

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು ಇಂದ ಶಿರಾ ಮಾರ್ಗವಾಗಿ ರಸ್ತೆಯಲ್ಲಿ ಸಾಗುತ್ತಿದ್ದ ಬೈಕಿಗೆ ಮಂಗಳವಾರ ಹಿಂದಿನಿಂದ ಲಾರಿ ಗುದ್ದಿದ ಪರಿಣಾಮ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ವರದಿಯಾಗಿದೆ. ಈ ಘಟನೆಯು ತುಮಕೂರು ತಾಲೂಕು ಕೋರಾ ಹೋಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಸರ್ಕಲ್ ಡಾಬಾ ಮುಂಭಾಗದಲ್ಲಿ ನಡೆದಿದೆ.

ಹರಿಯಾಣ ಮೂಲದ ಊಖ-56-ಅ-3751 ಲಾರಿಯು ತುಮಕೂರಿನಿಂದ ಶಿರಾ ಮಾರ್ಗವಾಗಿ ಹೋಗುತ್ತಿದ್ದ ಹಿರೋ ಸ್ಪಲೆಂಡರ್ ಬೈಕ್ ಏಂ-06-ಊಖ-5981 ವಾಹನಹಕ್ಕೆ ವೇಗವಾಗಿ ಲಾರಿ ಚಾಲಕನ ನಿಯಂತ್ರಣ ತಪ್ಪಿ ಬೈಕಿಗೆ ಗುದ್ದಿದ ಪರಿಣಾಮ ಮಹಿಳೆ ರಸ್ತೆಗೆ ಬಿದ್ದಿದ್ದು ವೇಳೆಯಲ್ಲಿ ಆಕೆಯ ಮೇಲೆ ಲಾರಿ ಹರಿದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಪಘಾತವೆಸಗಿದ ಲಾರಿ ಚಾಲಕ ಸ್ಥಳದಿಂದ ಲಾರಿಯೊಂದಿಗೆ ಪರಾರಿಯಾಗಿದ್ದು ಅದನ್ನು ಗಮನಿಸಿದ ಪ್ರತ್ಯಕ್ಷ ದರ್ಶಿಗಳು ಲಾರಿಯನ್ನ ಹಿಡಿದು ಠಾಣೆಗೆ ಒಪ್ಪಿಸಿದ್ದಾರೆ ಎಂದು ಹೇಳಲಾಗಿದೆ.

ಈ ಘಟನೆಯಲ್ಲಿ ಮೃತಪಟ್ಟ ಮಹಿಳೆಯನ್ನ ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಕಡವಿಗೆರೆ ಗ್ರಾಮದ ಭಾಗ್ಯಮ್ಮ.ಕೆ ಎಂದು ಗುರುತಿಸಲಾಗಿದ್ದು ಬೈಕ್ ಚಲಾಯಿಸುತ್ತಿದ್ದು ಆಕೆಯ ಪತಿ ಶಂಕರಾನಂದ ಎನ್ನಲಾಗಿದ್ದು, ಭಾಗ್ಯಮ್ಮ ರವರ ಪತಿ ಶಂಕರಾನಂದ ರವರಿಗೆ ಸಣ್ಣಪುಟ್ಟ ಗಾಯಗಳಾಗಿ ಘಟನೆಯಲ್ಲಿ ಪಾರಾಗಿದ್ದಾರೆ. ಈ ಪ್ರಕರಣವು ತಡವಾಗಿ ಬೆಳಕಿಗೆ ಬಂದಿದ್ದು, ಸದರಿ ಘಟನೆಗೆ ಸಂಬಂಧಿಸಿದಂತೆ ಕೋರ ಪೊಲೀಸ್ ಠಾಣೆಯಲ್ಲಿ ಪ್ರಕರಣವು ಸಹ ದಾಖಲಾಗಿದೆ, ಲಾರಿಯನ್ನು ಕೋರಾ ಪೊಲೀಸರ ವಶದಲ್ಲಿದ್ದು ಪ್ರಕರಣವು ತನಿಖೆಯ ಹಂತದಲ್ಲಿದೆ.

ತಮಿಳುನಾಡಿಗೆ ನೀರು ಹರಿಸುವ ಆದೇಶಕ್ಕೆ ಸಂಘಟನೆಗಳ ಆಕ್ರೋಶ; ರಾಜ್ಯದ ಪರ ನಿಲ್ಲಲು ಸರ್ಕಾರಕ್ಕೆ ಒತ್ತಾಯ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ತಮಿಳುನಾಡಿಗೆ ಪ್ರತಿದಿನ 3,500 ಕ್ಯೂಸೆಕ್ಸ್ ನೀರು ಬಿಡಬೇಕೆಂದು ಕಾವೇರಿ ನೀರು ನಿಯಂತ್ರಣಾ ಸಮಿತಿ ಮಾಡಿರುವ ಶಿಫಾರಸ್ಸಿಗೆ ಕನ್ನಡ ಪರ ಸಂಘಟನೆಗಳ ಒಕ್ಕೂಟ ತೀವ್ರ ವಿರೋಧ ವ್ಯಕ್ತಪಡಿಸಿದೆ. ನಮ್ಮ ನೀರನ್ನು ಉಳಿಸಿಕೊಳ್ಳಲು, ಕಾವೇರಿ ಸಮಿತಿ ಶಿಫಾರಸು ವಿರೋಧಿಸಿ ರಾಜ್ಯ ಸಂಘಟನೆಗಳು ರೂಪಿಸುವ ಹೋರಾಟವನ್ನು ಬೆಂಬಲಿಸಿ ಹೋರಾಟ ನಡೆಸಲು ಒಕ್ಕೂಟದ ಮುಖಂಡರು ತೀರ್ಮಾನ ಮಾಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ವಿವಿಧ ಕನ್ನಡಪರ ಸಂಘಟನೆಗಳ ಪ್ರಮುಖರು ಶುಕ್ರವಾರ ಸಭೆ ಸೇರಿ ಕಾವೇರಿ ನೀರು ಹೋರಾಟ ಕುರಿತು ಚರ್ಚಿಸಿದರು. ಕನ್ನಡ ಸೇನೆ ಜಿಲ್ಲಾಧ್ಯಕ್ಷ ಡಾ.ಧನಿಯಾ ಕುಮಾರ್ ಮಾತನಾಡಿ ಮಳೆ ಬೀಳದೆ ನಮ್ಮಲ್ಲಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಿರುವಾಗ, ಜಲಾಶಯಗಳು ಬತ್ತಿ ಹೋಗಿರುವಾಗ ತಮಿಳುನಾಡಿಗೆ ಪ್ರತಿದಿನ 3500 ಕ್ಯೂಸೆಕ್ಸ್ ನೀರು ಹರಿಸಬೇಕು ಎಂದು ಕಾವೇರಿ ನೀರು ನಿಯಂತ್ರಣಾ ಸಮಿತಿ ಮಾಡಿರುವ ಶಿಫಾರಸು ಅಮಾನವೀಯ. ಸರ್ಕಾರ ಈ ಶಿಫಾರಸ್ಸನ್ನು ತಿರಸ್ಕರಿಸಿ ನಾಡಿನ ಜನರ ರಕ್ಷಣೆಗೆ ಬದ್ಧತೆ ತೋರಬೇಕು. ಕಾವೇರಿ ನೀರಿನ ವಿಚಾರದಲ್ಲಿ ಪ್ರತಿ ಬಾರಿಯೂ ನಮ್ಮ ರಾಜ್ಯಕ್ಕೆ ಅನ್ಯಾಯವಾಗುತ್ತಿದೆ. ರಾಜ್ಯದ ಬರಪರಿಸ್ಥಿತಿಯ ವಸ್ತುಸ್ಥಿತಿಯನ್ನು ಸಮರ್ಥವಾಗಿ ಮಂಡನೆ ಮಾಡುವಲ್ಲಿ ಪದೇಪದೆ ವಿಫಲವಾಗುತ್ತಿರುವುದು ದುರಾದೃಷ್ಟಕರ ಎಂದರು.

ರಾಜಕಾರಣಿಗಳು ತಮ್ಮ ಯಾವುದಾದರೂ ಕೆಲಸಗಳನ್ನು ಸರ್ಕಾರದ ಮೇಲೆ ಒತ್ತಡ ಹಾಕಿ ಮಾಡಿಸಿಕೊಳ್ಳುತ್ತಾರೆ. ಆದರೆ ಕರ್ನಾಟಕದ ನೆಲ, ಜಲ, ಭಾಷೆ ವಿಚಾರದಲ್ಲಿ ಅಂತಹ ಆಸಕ್ತಿ ತೋರದಿರುವುದು ವಿಷಾದಕರ. ಬೆಳೆಗೆ ನೀರು ಬಳಸಬೇಡಿ ಎಂದು ಸರ್ಕಾರ ಹೇಳಿದೆ. ಕೊರೊನಾ ಸಂದರ್ಭದಿಂದ ನಮ್ಮ ರೈತರು ನಾನಾ ಕಾರಣಗಳಿಂದ ಸಂಕಷ್ಟದಲ್ಲಿದ್ದಾರೆ, ಸಾಲದಲ್ಲಿ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ಬೆಳೆ ಬೆಳೆಯಲು ನೀರು ಬಳಸಬೇಡಿ ಎಂದರೆ ರೈತರು ಏನಾಗಬೇಕು? ಎಂದರು.

ತಮಿಳುನಾಡು ಮುಖ್ಯಮಂತ್ರಿ ವಿಜಯ್ ಜೋಸೆಫ್ ಅಭಿನಯದ ಸಿನಿಮಾ ಪ್ರದರ್ಶನವನ್ನು ರಾಜ್ಯದಲ್ಲಿ ನಿಷೇಧಿಸಬೇಕು. ತುಮಕೂರಿನ ಐನಾಕ್ಸ್‌ನಲ್ಲಿ ಪ್ರದರ್ಶನರದ್ದು ಮಾಡಬೇಕು. ಇಲ್ಲವಾದರೆ ಕನ್ನಡಪರ ಸಂಘಟನೆಯವರು ಥಿಯೇಟರ್‌ಗೆ ನುಗ್ಗಿ ಬಲವಂತವಾಗಿ ಬಂದ್ ಮಾಡಿಸಬೇಕಾಗುತ್ತದೆ ಎಂದು ಡಾ.ಧನಿಯಾ ಕುಮಾರ್ ಎಚ್ಚರಿಕೆ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಮಾತನಾಡಿ, ಕಾವೇರಿ ನೀರು ನಿಯಂತ್ರಣ ಮಂಡಳಿಯ ಆದೇಶ ರಾಜ್ಯದ ಜನರಿಗೆ ಬರೆ ಎಳೆದಂತಾಗಿದೆ. ಸರ್ಕಾರ ಸಲ್ಲಿಸಿದ್ದ ಮೇಲ್ಮನವಿಯೂ ತಿರಸ್ಕೃತಗೊಂಡಿದೆ. ಈಗ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಮೊರೆ ಹೋಗಲು ತೀರ್ಮಾನಿಸಿದೆ, ಸರ್ವಪಕ್ಷಗಳ ಸಭೆ ನಡೆಸಿ ಮುಂದಿನ ತೀರ್ಮಾನ ಮಾಡಲಿದೆ ರಾಜ್ಯದ ಜನರ ಹಿತ ಪರಿಗಣಿಸಿ ತೀರ್ಮಾನ ಮಾಡಬೇಕು ಎಂದು ಹೇಳಿದರು.

ತೀರ್ಪಿನಿಂದ ಕಾವೇರಿ ಕೊಳ್ಳದ ಭಾಗದಲ್ಲಿ ಕುಡಿಯತುವ ನೀರಿಗೆತೀವ್ರ ಸಮಸ್ಯೆ ಎದುರಾಗುತ್ತದೆ. ಹೇಮಾವತಿ ನೀರು ಅವಲಂಬಿಸಿರುವ ತುಮಕೂರು ಜಿಲ್ಲೆ ಜನರೂ ನೀರಿನ ಬವಣೆ ಅನುಭವಿಸ ಬೇಕಾಗುತ್ತದೆ. ಮಳೆ ಬಾರದಿದ್ದರೆ ಹಾಹಾಕಾರ ಪರಿಸ್ಥಿತಿ ಉಂಟಾಗುತ್ತದೆ ಎಂದರು.

ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಪಿ.ಎನ್. ರಾಮಯ್ಯ ಮಾತನಾಡಿ, ನಮ್ಮ ಪಾಲಿನ ನೀರನ್ನು ಉಳಿಸಿಕೊಳ್ಳಲು ರಾಜಕೀಯ ನಾಯಕರು ಪ್ರಯತ್ನ ಮಾಡಬೇಕು. ರಾಜ್ಯದ ಎಲ್ಲಾ ಲೋಕಸಭಾ ಸದಸ್ಯರು ಕೇಂದ್ರಸರ್ಕಾರಕ್ಕೆ ಮನವಿ ಮಾಡಬೇಕು. ರಾಜ್ಯದ ಪರಿಸ್ಥಿತಿಯನ್ನು ಸುಪ್ರೀಂಕೋರ್ಟ್‌ಗೆ ಮನವರಿಕೆ ಮಾಡಿಕೊಡಲು ನ್ಯಾಯಾಧೀಶರನ್ನು ನೇಮಕ ಮಾಡಬೇಕು. ಪ್ರತಿ ಬಾರಿ ನಮ್ಮಲ್ಲಿ ಭಾಷೆ, ನೆಲ, ಜಲದ ವಿಚಾರವಾಗಿ ಅನ್ಯಾಯವಾಗುತ್ತಲೇ ಇರುವುದು ದುರಾದೃಷ್ಟಕರ ಎಂದರು.ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರಾದ ಸೋಮಶೇಖರ್, ಅರುಣ್ ಕೃಷ್ಣಯ್ಯ, ಬೇವಿನಮರದ ಸಿದ್ದಪ್ಪ, ರೈತ ಸಂಘದ ಬಸವರಾಜು, ಅರುಣ್ ಕುಮಾರ್, ಶಬ್ಬೀರ್‌ಅಹ್ಮದ್, ಇಂದ್ರಕುಮಾರ್, ಯಲ್ಲೇಶ್‌ಗೌಡ, ಪ್ರಸನ್ನಕುಮಾರ್, ಸಂತೋಷ್, ವಿಠಲ್‌ಜೈನ್, ಗುರುರಾಘವೇಂದ್ರ, ಜಿಮ್ ನಟರಾಜ್, ವರದರಾಜು, ಸಂತೋಷ್, ಸತೀಶ್, ಇಮ್ರಾನ್‌ಅಹ್ಮದ್, ಯತೀಶ್ ದಿಬ್ಬೂರು, ಶ್ರೀನಿವಾಸ್, ಕಿರಣ್, ರಾಮಲಿಂಗರೆಡ್ಡಿ, ಸುಧೀರ್ ಮೊದಲಾದವರು ಸಭೆಯಲ್ಲಿ ಭಾಗವಹಿಸಿದ್ದರು.

ಸಮರ್ಪಕ ವಿದ್ಯುತ್ ಪೂರೈಕೆಗಾಗಿ "ಜಾನುವಾರುಗಳನ್ನು ಹಿಡಿದು ರೈತರು ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ





ತಿಪಟೂರು: ದೇಶಕ್ಕೆ ಅನ್ನ ನೀಡುವ ರೈತ ತನ್ನ ಬಾಯಿಗೆ ಯಾವತ್ತಿಗೂ ಮಣ್ಣು ಹಾಕಿಕೊಳ್ಳುವುದಿಲ್ಲ ಎಂಬುದು ತಿಳಿದೇ ಇದೆ ರೈತ ದೇಶದ ಬೆನ್ನೆಲುಬು ಎಂಬುದು ಗೊತ್ತೇ ಇದೆ ಅಂತಹ ರೈತ ಕುಟುಂಬಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡದಿರುವುದು ಎಷ್ಟು ಎಷ್ಟು ಸರಿ ಹಾಗೂ ಜಾನುವಾರುಗಳಿಗೆ ಮೇವು ವಿತರಣೆ ಸ್ಥಗಿತಗೊಳಿಸಿರುವುದನ್ನು ಖಂಡಿಸಿ ತಾಲೂಕಿನ ಮಡೇನೂರು, ಕರೀಕೆರೆ, ಬಿದರೆಗುಡಿ, ರಂಗಾಪುರ, ಹುಣಸೆಘಟ್ಟೆ ಸೇರಿದಂತೆ ವಿವಿಧ ಗ್ರಾಮಗಳ ರೈತರು ನೂರಾರು ಜಾನುವಾರುಗಳೊಂದಿಗೆ ಪ್ರತಿಭಟನೆ ನಡೆಸಿದರು.ನಗರದ ಗ್ರಾಮದೇವತೆಯಾದ ಕೋಡಿ ಸರ್ಕಲ್ ನಶ್ರೀ ಕೆಂಪಾಂಮ್ಮದೇವಿ ದೇವಸ್ಥಾನದಿಂದ ಜಾನುವಾರುಗಳೊಂದಿಗೆ ರೈತರು ಪ್ರತಿಭಟನೆ ನಡೆಸುತ್ತಾ ಬಿಎಚ್ ರಸ್ತೆಯ ಮೂಲಕ ನೇರವಾಗಿಬೆಸ್ಕಾಂ ಕಚೇರಿ ಮುಂಭಾಗಕ್ಕೆ ಆಗಮಿಸಿ ಪ್ರತಿಭಟನೆ ಘೋಷಣೆಯನ್ನು ಕೂಗುವುದರ ಮೂಲಕ ಬೆಸ್ಕಾಂ ಅಧಿಕಾರಿಗಳಿಗೆ ವಿದ್ಯುತ್ ಪೂರೈಕೆ ಹಾಗೂ ಮೇವು ವಿತರಣೆ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿದರು. ನಂತರ ನಗರದ ತಾಲೂಕು ಆಡಳಿತ ಸೌಧದ ತಲುಪಿದ ಪ್ರತಿಭಟನಾಕಾರರು ಘೋಷಣೆಯನ್ನು ಕೂಗುತ್ತ ಪ್ರತಿಭಟನೆ ನಡೆಸಿದರು.

ಗೋರಕ್ಷಕ ವಿನಯ್ ಮಡೇನೂರು ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿ, ನಾಡಿಗೆ ಅನ್ನ ನೀಡುವ ಅನ್ನದಾತ ರೈತನ ಆಕ್ರಂದನಕ್ಕೆ ಸರ್ಕಾರ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು . ಕಳೆದ ಬಾರಿ ಸರ್ಕಾರ ಜಾನುವಾರುಗಳಿಗೆ ಮೇವು ವಿತರಿಸಿ ಗೋವುಗಳನ್ನು ಹಸಿವಿನಿಂದ ರಕ್ಷಿಸಿತ್ತು. ಆದರೆ ಈ ಬಾರಿ ಮೇವು ವಿತರಣೆ ಸ್ಥಗಿತಗೊಳಿಸಿರುವುದು ರೈತರಲ್ಲಿ ಆತಂಕ ಮೂಡಿಸಿದೆ ಹಾಗೂಬರಗಾಲದ ಪರಿಸ್ಥಿತಿಯಲ್ಲಿಯೂ ಗ್ರಾಮೀಣ ಪ್ರದೇಶಗಳಿಗೆ ಸರಿಯಾಗಿ ಸಮರ್ಪಕ ವಿದ್ಯುತ್‌ಪೂರೈಕೆ ಆಗದಿರುವುದು . ವಿದ್ಯುತ್ ವ್ಯತ್ಯಯದಿಂದ ರೈತರ ಪಂಪ್‌ಸೆಟ್ ಮೋಟಾರ್‌ಗಳು ಕಾರ್ಯನಿರ್ವಹಿಸದೆ ಇರುವುದರಿಂದ ರೈತರು ಆಗಿರುವ ಬೆಳೆಗಳಿಗೆ ನೀರು ಹಾಯಿಸಲು ಸಾಧ್ಯವಾಗದೇ ಇರುವುದರಿಂದ ರೈತರು ಹಾಕಿರುವ ಬೆಳೆಗಳು ಒಣಗುತ್ತಿವೆ . ಅನೇಕ ರೈತರು ತಮ್ಮ ತೋಟದ ಮನೆಗಳಲ್ಲೇ ವಾಸಿಸುತ್ತಿದ್ದು, ಮಕ್ಕಳ ವಿದ್ಯಾಭ್ಯಾಸಕ್ಕೂ ವಿದ್ಯುತ್ ಕೊರತೆಯಿಂದ ಮಕಳಿಗೆ ತೊಂದರೆಯಾಗುತ್ತಿದೆ. ಇದರ ಜೊತೆಗೆ ಜಾನುವಾರುಗಳನ್ನು ರಕ್ಷಿಸಿಕೊಳ್ಳುವುದು ರೈತರಿಗೆ ಕಷ್ಟವಾಗುತ್ತಿದೆ ಎಂದು ಹೇಳಿದರು.

ಬೆಸ್ಕಾಂ ಇಲಾಖೆಯ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿಯೇ ಉಳಿದುಕೊಂಡು ರಾತ್ರಿ ವೇಳೆಯಲ್ಲಿಯೂ ವಿದ್ಯುತ್ ಪೂರೈಕೆಯನ್ನು ವೀಕ್ಷಿಸಬೇಕು .ನಂತರ ರೈತರಿಗೆ ಉತ್ತಮ ರೀತಿಯಲ್ಲಿ ವಿದ್ಯುತ್ ಪೂರೈಕೆ ಸೌಲಭ್ಯ ಕಲ್ಪಿಸಬೇಕುಅ ಣಚಿಕೊಪ್ಪಲು ಗ್ರಾಮದ ರೈತ ಉಮೇಶ್‌ರೈತರ ಸಮಸ್ಯೆಗಳಿಗೆ ಪ್ರತಿಕ್ರಿಯೆ ಈಗಾಗಲೇ ವಿದ್ಯುತ್ ಪೂರೈಕೆ ಮಾಡಲಾಗುತ್ತಿದ್ದು, ಅಗತ್ಯಕ್ಕಿಂತ ಹೆಚ್ಚಿನ ವಿದ್ಯುತ್ ಬಳಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಬೇಡಿಕೆ ಹೆಚ್ಚಾಗಿದೆ. ಇನ್ನು ಮುಂದೆ ಹೆಚ್ಚುವರಿ ವಿದ್ಯುತ್ ಪೂರೈಕೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಪ್ರತಿಭಟನಕಾರರಿಗೆ ಭರವಸೆಬೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮನೋಹರ್‌ಇದೇ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಕಚೇರಿಯ ಗ್ರೇಡ್-2 ತಹಶೀಲ್ದಾರ್ ಜಗದೀಶ್ ಅವರಿಗೆ ರೈತರು ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ. ಲೋಕೇಶ್. ಸಂದೀಪ್. ಗೋಪಿ. ತಿಲೋತ್ತಮ್ . ಚೇತನ್. ರವಿ. ರಂಗಸ್ವಾಮಿ. ಕೃಷ್ಣ ಸಿ. ಗೌತಮ್ . ವಿಜಯ್ . ಕೀರ್ತಿ . ಹಾಗೂ ರಂಗಾಪುರ ಗ್ರಾಮದ ರೈತರು ಸೇರಿದಂತೆ ಗುರುಗದ ಹಳ್ಳಿ ತಡಸೂರು ಗ್ರಾಮಗಳ ರೈತರು ಹಾಜರಿದ್ದರು"

ವಾಹನಗಳ ಬಹಿರಂಗ ಹರಾಜು

ತುಮಕೂರು: ತುಮಕೂರು ನಗರ ಪೊಲೀಸ್ ಠಾಣಾ ಆವರಣದಲ್ಲಿರುವ ಮಾಲೀಕರು ಪತ್ತೆಯಾಗದ 7 ದ್ವಿಚಕ್ರ ವಾಹನ ಹಾಗೂ 1 ಕಾರನ್ನು ಆಗಸ್ಟ್ 7ರಂದು ಬೆಳಗ್ಗೆ 10.30 ಗಂಟೆಗೆ ಸಾರ್ವಜನಿಕವಾಗಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು. ಆಸಕ್ತರು ಹರಾಜಿನಲ್ಲಿ ಭಾಗವಹಿಸಬಹುದಾಗಿದೆ ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ವಸತಿ ಶಾಲೆಯ ಪ್ರಾಂಶುಪಾಲೆ ಲತಾ ವರ್ಗಾಯಿಸುವಂತೆ ಸಂಘಟನೆಗಳಿಂದ ಪ್ರತಿಭಟನೆ

ವರದಿ; ನರಸಿಂಹಪ್ಪ



ಪಾವಗಡ: ವಸತಿ ಶಾಲೆ ನಿರ್ವಹಣೆ, ವಿದ್ಯಾರ್ಥಿಗಳ ಸುರಕ್ಷತೆ, ಮೂಲ ಸೌಕರ್ಯ, ಸೇರಿದಂತೆ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡದೇ, ನಿರ್ಲಕ್ಷ್ಯವಹಿಸಿದ್ದು ತಕ್ಷಣ ಪ್ರಾಂಶುಪಾಲೆ ಲತಾ ರವರನ್ನು ಬೇರೆಡೆಗೆ ವರ್ಗಾಯಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ, ಅಖಿಲ ಕರ್ನಾಟಕ ವಾಲ್ಮೀಕಿ ಮಹಾಸಭಾ ಯುವ ಘಟಕ, ತಾಲೂಕು ವಾಲ್ಮೀಕಿ ಜನಜಾಗೃತಿ ವೇದಿಕೆ ಒತ್ತಾಯಿಸಿ ಪಟ್ಟಣದ ತಹಶೀಲ್ದಾರ್ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಗ್ರೇಡ್ –2 ತಹಶೀಲ್ದಾರ್ ಪಿಎಸ್.ಆರ್ ಪ್ರಸಾದ್ ಮುಖಾಂತರ ವ್ಯವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ಪ್ರತಿಭಟನೆಯನ್ನು ಉದ್ದೇಶಿಸಿ ಅಖಿಲ ಕರ್ನಾಟಕ ವಾಲ್ಮೀಕಿ ಮಹಾಸಭಾ ಯುವ ಘಟಕದ ಜಿಲ್ಲಾಧ್ಯಕ್ಷ ಲೋಕೇಶ್ ಪಾಳೇಗಾರ್ ಮಾತನಾಡಿ ಪಳವಳ್ಳಿ ಡಾ.ಬಿ.ಆರ್ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಜುಲೈ 28ರಂದು ಮೂವರು ವಿದ್ಯಾರ್ಥಿಗಳು ವಸತಿ ಶಾಲೆಯಿಂದ ನಾಪತ್ತೆಯಾಗಿರುವ ಬಗ್ಗೆ ಪತ್ರಿಕೆಗಳಲ್ಲಿ ವರದಿಗಳು ಬಂದಿದ್ದರೂ ಸಹ ಮೇಲಾಧಿಕಾರಿಗಳು ಈವರೆಗೆ ಪ್ರಾಂಶುಪಾಲೆಯ ವಿರುದ್ಧ ಯಾವುದೇ ಶಿಸ್ತು ಕ್ರಮ ಜರುಗಿಸದೆ ಇರುವುದು ಹಲವಾರು ಅನುಮಾನಗಳಿಗೆ ಕಾರಣವಾಗಿದೆ. ಗ್ರಾಮೀಣ ಮತ್ತು ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳಿಗೆ ಉಚಿತ ಹಾಗೂ ಗುಣಮಟ್ಟದ ಶಿಕ್ಷಣ ನೀಡುವ ಉದಾತ್ತ ಉದ್ದೇಶದಿಂದ ಆರಂಭವಾದ ಅಂಬೇಡ್ಕರ್ ವಸತಿ ಶಾಲೆ ಸ್ಥಾಪನೆ ಆಗಿದ್ದು, ಬಡ ಮಕ್ಕಳ ಶೈಕ್ಷಣಿಕ ಪ್ರಗತಿ, ಉನ್ನತ ಹುದ್ದೆಗೆ ಹೋಗಲು ಅಡಿಪಾಯ ಹಾಕಬೇಕಾದ ಶಾಲೆ ವಿದ್ಯಾರ್ಥಿಗಳಲ್ಲಿ ಭಯದ ವಾತಾವರಣ ನಿರ್ಮಾಣ ಮಾಡಿರುವುದು ಖಂಡನೀಯ ವಿಷಯವೆಂದರು. 6ನೇ ತರಗತಿಯಿಂದ 10ನೇ ತರಗತಿವರೆಗೂ ಉತ್ತಮ ಗುಣಮಟ್ಟದ ಶಿಕ್ಷಣ ಪಡೆಯಬಹುದೆಂದು ಪೋಷಕರು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಮಕ್ಕಳಿಗೆ ಬರೆಸಿ ವಸತಿ ಶಾಲೆಗಳಿಗೆ ದಾಖಲಿಸಿದರೆ ವಸತಿ ಶಾಲೆಯಲ್ಲಿನ ಸಮಸ್ಯೆಗಳಿಂದಾಗಿ ಮಕ್ಕಳು ಶಾಲೆಯನ್ನು ತೊರೆಯಲು ಮುಂದಾಗುತ್ತಿರುವುದು ಆತಂಕಕಾರಿ ವಿಷಯವಾಗಿದ್ದು. ಕಳೆದ ಆರು ವರ್ಷದಿಂದ ಇದೇ ಶಾಲೆಯಲ್ಲಿ ಪ್ರಾಂಶುಪಾಲರು ಕರ್ತವ್ಯ ನಿರ್ವಹಿಸುತ್ತಿದ್ದು, ಮಕ್ಕಳ ಸ್ನೇಹಿಯಾಗಿ ವಸತಿ ಶಾಲೆ ನಿರ್ವಹಣೆಯಲ್ಲಿ ಪ್ರಾಂಶುಪಾಲೆ ಲತಾ ನಿರ್ಲಕ್ಷ್ಯವಹಿಸಿದ್ದು, ವರ್ಗಾವಣೆ ಕಾನೂನು ಇವರಿಗೆ ಅನ್ವಯಿಸುವುದಿಲ್ಲವೆ ಎಂದು ತಕ್ಷಣ ಮಕ್ಕಳ ಶೈಕ್ಷಣಿಕ ದೃಷ್ಟಿಯಿಂದ ವರ್ಗಾವಣೆಗೆ ಒತ್ತಾಯಿಸಿದರು. ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಪೂಜಾರಪ್ಪ ಮಾತನಾಡಿ ವಸತಿ ಶಾಲೆಯಲ್ಲಿ ಓದುವ ಮಕ್ಕಳು ಪೋಷಕರಿಂದ ದೂರವಿದ್ದು, ವಸತಿ ಶಾಲೆಯಲ್ಲಿನ ಪ್ರಾಂಶುಪಾಲರು ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆ ನೋಡಿಕೊಳ್ಳುವ ಬದಲು ವಿನಾಕಾರಣ ವಿದ್ಯಾರ್ಥಿಗಳಿಗೆ ಡ್ರಿಪ್ ಪೈಪಿನಿಂದ ಒಡೆದು ಕಿರುಕುಳ ನೀಡಿದ ಹಿನ್ನೆಲೆ ವಿದ್ಯಾರ್ಥಿಗಳು ವಸತಿ ಶಾಲೆಯಿಂದ ಪರಾರಿಯಾಗಿರುವ ಘಟನೆ ನಡೆದಿದ್ದು, ಮಕ್ಕಳಿಗೆ ಏನಾದರೂ ಆದರೆ ಹೊಣೆ ಯಾರು ಎಂದು ಪ್ರಶ್ನಿಸಿದರು. ಮಕ್ಕಳನ್ನು ಹೊಡೆಯುವುದು ಕಾನೂನು ರಿತ್ಯಾ ಅಪರಾಧವಾಗಿದ್ದು, ಈ ಕೂಡಲೇ ಮೇಲಾಧಿಕಾರಿಗಳು ತಪ್ಪಿತಸ್ಥ ಪ್ರಾಂಶುಪಾಲರ ವಿರುದ್ಧ ಕ್ರಮ ಕೈಗೊಂಡು ಅವರನ್ನು ವರ್ಗಾವಣೆ ಮಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅನುಕೂಲವಾದ ವಾತಾವರಣ ಕಲ್ಪಿಸಿಕೊಡಬೇಕೆಂದು ಒತ್ತಾಯಿಸಿದರು.

ಕನ್ನಮೇಡಿ ಕೃಷ್ಣಮೂರ್ತಿ ಮಾತನಾಡಿ ಮೂರು, ಆರು ತಿಂಗಳಿಗೊಮ್ಮೆ ತಾಲೂಕು ಮಟ್ಟದ ಜಿಲ್ಲಾ ಮಟ್ಟದ ರಾಜ್ಯ ಮಟ್ಟದ ಅಧಿಕಾರಿಗಳು ವಸತಿ ಶಾಲೆಗಳಿಗೆ ಖುದ್ದು ಬೇಟಿ ನೀಡಿ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಆಲಿಸಬೇಕು ಜಿಲ್ಲಾ ಮಟ್ಟ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಶೀಘ್ರವೇ ಕ್ರಮವಹಿಸಬೇಕೆಂದು ಒತ್ತಾಯಿಸಿದರು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹೋರಾಟ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣ ವೇದಿಕೆ ತಾಲ್ಲೂಕು ಅಧ್ಯಕ್ಷ ಲಕ್ಷ್ಮಿನಾರಾಯಾಣ, ಬಾಸ್ಕರ್ ನಾಯಕ, ನಾಗರಾಜ, ಟೈಲರ್ ನಾರಾಯಣಪ್ಪ, ಅಶ್ವತ್ಥ, ಆಟೋ ಸತ್ತಿ, ಬ್ಯಾಡನೂರು ಶಿವು, ಹನುಮಂತರಾಯ, ಗುಂಡ್ಲಹಳ್ಳಿ ರಮೇಶ್, ರೈತ ಸಂಘದ ತಾಲ್ಲೂಕು ಅಧ್ಯಕ್ಷ ಶಿವು ಸೇರಿದಂತೆ ಇತರರು ಹಾಜರಿದ್ದರು.

ಮಕ್ಕಳು ದುಶ್ಚಟಗಳಿಗೆ ಬಲಿಯಾಗದಿರಿ: ನವೀನ್ ಕಿಲಾರ್ಲಹಳ್ಳಿ

ಸೂರ್ಯಪ್ರಗತಿನ್ಯೂಸ್.ಕಾಂ



ಪಾವಗಡ: ಯುವಕರು ಕ್ಷಣಿಕ ಸುಖಕ್ಕಾಗಿ ಮಾದಕ ವ್ಯಸನದಂತಹ ದುಶ್ಚಟಗಳಿಗೆ ಬಲಿಯಾಗದೆ ಶಿಕ್ಷಣ, ಶಿಸ್ತು ಮತ್ತು ಮೌಲ್ಯಯುತ ಜೀವನಕ್ಕೆ ಆದ್ಯತೆ ನೀಡಬೇಕು ಎಂದು ಪ್ರೇರಣಾದಾಯಕ ಉಪನ್ಯಾಸಕ ಹಾಗೂ ರಾಜ್ಯ ಸಂಪನ್ಮೂಲ ವ್ಯಕ್ತಿ ನವೀನ್ ಕಿಲಾರ್ಲಹಳ್ಳಿ ಹೇಳಿದರು.

ತಾಲೂಕಿನ ಲಿಂಗದಹಳ್ಳಿಯ ದಿ ನ್ಯೂ ಎಂಪ್ರೆಸ್ ಪಬ್ಲಿಕ್ ಪಿಯು ಕಾಲೇಜಿನಲ್ಲಿ ತುಮಕೂರು ಜಿಲ್ಲಾ ಅಬಕಾರಿ ಇಲಾಖೆ ಹಾಗೂ ಪಾವಗಡ ವಲಯದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಮಾದಕ ದ್ರವ್ಯ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಮನಸ್ಥಿತಿ, ಮನೆಯ ಪರಿಸ್ಥಿತಿ ಹಾಗೂ ಜೀವನದ ಗುರಿಯ ಬಗ್ಗೆ ಸ್ಪಷ್ಟ ಅರಿವು ಹೊಂದಿರಬೇಕು. ಕ್ಷಣಿಕ ಆಕರ್ಷಣೆಗಳಿಗೆ ಮಣಿಯದೆ ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಮಾದರಿಯಾಗಬೇಕು. ದುಶ್ಚಟಗಳು ವ್ಯಕ್ತಿಯ ಭವಿಷ್ಯವಷ್ಟೇ ಅಲ್ಲ, ಕುಟುಂಬದ ನೆಮ್ಮದಿಯನ್ನೂ ಹಾಳು ಮಾಡುತ್ತವೆ ಎಂದು ಹೇಳಿದರು.

ಮಧುಗಿರಿ ಉಪವಿಭಾಗದ ಅಬಕಾರಿ ಉಪ ಅಧೀಕ್ಷಕ ದೀಪಕ್ ಎಸ್ ಮಾತನಾಡಿ, ಪಿಯುಸಿ ಹಂತವು ವಿದ್ಯಾರ್ಥಿಗಳ ಬದುಕಿನ ಪ್ರಮುಖ ಘಟ್ಟವಾಗಿದೆ. ಉತ್ತಮ ಸ್ನೇಹ, ಶಿಸ್ತು ಮತ್ತು ಪರಿಶ್ರಮದಿಂದ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು. ದುಶ್ಚಟಗಳಿಂದ ದೂರವಿದ್ದು ಸಮಾಜದ ಜವಾಬ್ದಾರಿಯುತ ನಾಗರಿಕರಾಗಬೇಕು. ಸಹವಾಸದಿಂದ ಕೆಡಬಾರದು. ಶಿಕ್ಷಣದ ಕಡೆ ಹೆಚ್ಚು ಒತ್ತುಕೊಟ್ಟು ಕ್ಷಣಿಕ ಅಮಲಿನ ಕಡೆ ಯಾವುದೇ ಗಮ್ಯ ನೀಡದಂತೆ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಬಳಿಕ ಅಬಕಾರಿ ಉಪ ಅಧೀಕ್ಷಕರು ದೀಪಕ್. ಎಸ್ ವಿದ್ಯಾರ್ಥಿಗಳಿಗೆ ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣದ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದ ಅಂತ್ಯದಲ್ಲಿ ವಿದ್ಯಾರ್ಥಿಗಳು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡು ದುಶ್ಚಟಗಳಿಂದ ದೂರವಿರುವ ಸಂಕಲ್ಪ ವ್ಯಕ್ತಪಡಿಸಿದರು. ಸಂಸ್ಥೆಯ ಅಧ್ಯಕ್ಷ ವೀರೇಂದ್ರ ಕುಮಾರ್ ಮಾತನಾಡಿ, ವಿದ್ಯಾರ್ಥಿಗಳು ಸಮಯ, ಶ್ರಮ ಮತ್ತು ಜ್ಞಾನದ ಸದ್ಬಳಕೆಯಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು. ಅಬಕಾರಿ ಉಪ ನಿರೀಕ್ಷಕರಾದ ಸೋಮಶೇಖರ್, ಈರಣ್ಣ ಎಂ.ಬಿ., ಸಿಬ್ಬಂದಿ ಮಂಜುನಾಥ್, ಸಂಸ್ಥೆಯ ಕಾರ್ಯದರ್ಶಿ ಈರಣ್ಣ ಕೆ. ಪ್ರಾಂಶುಪಾಲ ಈರಣ್ಣ ಕೆ.ಎನ್.ಆಡಳಿತಾಧಿಕಾರಿ ಸೋಮಶೇಖರ್, ಶಿಕ್ಷಕರಾದ ಸಣ್ಣೀರಪ್ಪ ಹಾಗೂ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಶನಿವಾರ, ಭಾನುವಾರವೂ ಎಸ್‌ಐಆರ್ ಪ್ರಕ್ರಿಯೆ; ಶೇ.87.65 ಪ್ರಗತಿ; ಯಾವುದೇ ಸಮಸ್ಯೆ ಪರಿಹಾರಕ್ಕೆ ಕರೆ ಮಾಡಿ; ಡಿಸಿ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಪ್ರಕ್ರಿಯೆ ಪೂರ್ಣಗೊಳ್ಳಲು ಕ್ಷಣಗಣನೆ ಆರಂಭವಾಗಿದ್ದು, ಕೊನೆಯ ಕ್ಷಣದವರೆಗೂ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಬಿಟ್ಟುಹೋಗದಂತೆ ಜಿಲ್ಲಾಡಳಿತ ಕ್ರಮವಹಿಸಿದ್ದು, ಮತದಾರರು ತಮ್ಮ ಯಾವುದೇ ಸಮಸ್ಯೆ, ಗೊಂದಲಗಳನ್ನು ಸಹಾಯವಾಣಿಗೆ ಕರೆ ಮಾಡಿ ಪರಿಹರಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನೋಂದಾಯಿತ ರಾಜಕೀಯ ಪಕ್ಷಗಳ ಪ್ರಮುಖರೊಂದಿಗೆ ಸಭೆ ನಡೆಸಿ ಅವರು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಜಿಲ್ಲೆಯಲ್ಲಿ ಸಮರ್ಪಕವಾಗಿ ನಡೆಯುತ್ತಿದ್ದು, ಮತಗಟ್ಟೆ ಅಧಿಕಾರಿಗಳು ಈಗಾಗಲೇ ಜಿಲ್ಲೆಯಲ್ಲಿ ಒಟ್ಟು 22,98,879 ಗಣತಿ ನಮೂನೆಗಳನ್ನು ವಿತರಣೆ ಮಾಡಿದ್ದು, ಈ ಪೈಕಿ ಶೇ.87.65ರಷ್ಟು ಗಣತಿ ನಮೂನೆಗಳನ್ನು ಹಿಂಪಡೆದು ಗಣಕೀಕರಣಗೊಳಿಸಿದ್ದಾರೆ. ಬಾಕಿ ಗಣತಿ ನಮೂನೆಗಳನ್ನು ನಿಯಮಾನುಸಾರ ಕೊನೆಯ ದಿನವಾದ ಆಗಸ್ಟ್ 8ರೊಳಗೆ ಹಿಂಪಡೆದು ಗಣಕೀಕರಣಗೊಳಿಸಬೇಕಿರುವುದರಿಂದ ಮುಂದಿನ 2 ದಿನದೊಳಗಾಗಿ ಮತದಾರರು ತಮ್ಮ ಭರ್ತಿ ಮಾಡಿದ ಗಣತಿ ನಮೂನೆಯನ್ನು ಮತಗಟ್ಟೆ ಅಧಿಕಾರಿಗಳಿಗೆ ಹಿಂತಿರುಗಿಸುವ ಮೂಲಕ ಪ್ರಕ್ರಿಯೆ ಸರಾಗವಾಗಿ ನಡೆಯಲು ಸಹಕರಿಸಬೇಕಾಗಿ ಜಿಲ್ಲಾಧಿಕಾರಿ ತಿಳಿಸಿದರು.

ಮತದಾರರು ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ಗೊಂದಲವಿದ್ದಲ್ಲಿ ಅಥವಾ ಸಮಸ್ಯೆಗಳಿದ್ದಲ್ಲಿ, ಮತಗಟ್ಟೆ ಅಧಿಕಾರಿಗಳು ಮನೆಗೆ ಬಾರದೆ, ಗಣತಿ ನಮೂನೆ ಹಿಂಪಡೆಯದಿದ್ದಲ್ಲಿ, ಸರಿಯಾದ ಮಾಹಿತಿ ನೀಡದಿದ್ದಲ್ಲಿ ಇಂತಹ ಯಾವುದೇ ಸಮಸ್ಯೆಗಳಿದ್ದಲ್ಲಿ ಸಹಾಯವಾಣಿ ಮೊಬೈಲ್ ಸಂಖ್ಯೆ 7304975519 ಅಥವಾ ಸ್ಥಿರ ದೂರವಾಣಿ ಸಂಖ್ಯೆ 0816–2213400 ಈ ನಂಬರ್‌ಗೆ ಕರೆ ಮಾಡಿ ತಮ್ಮ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಿಕೊಂಡು ಪ್ರಕ್ರಿಯೆಗೆ ಸಹಕಾರ ನೀಡುವಂತೆ ಅವರು ತಿಳಿಸಿದರು.

ಪ್ರಸ್ತುತ ಪ್ರಕ್ರಿಯೆ ಸುಗಮವಾಗಿ ನಡೆಯುತ್ತಿದ್ದು, ಎಲ್ಲಾ ರಾಜಕೀಯ ಪಕ್ಷಗಳ ಮತಗಟ್ಟೆ ಏಜೆಂಟರ್ ಮತಗಟ್ಟೆ ಅಧಿಕಾರಿಗಳ ಸಮನ್ವಯದೊಂದಿಗೆ ಶೇ.87.65ರಷ್ಟು ಪ್ರಗತಿ ಸಾಧಿಸಲಾಗಿದ್ದು, ಇನ್ನೆರಡು ದಿನದಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಲು ಸಹಕರಿಸಬೇಕು ಎಂದರು.

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿ ಕಚೇರಿಗಳಲ್ಲಿ, ನಗರ ಸ್ಥಳೀಯ ಸಂಸ್ಥೆಗಳಲ್ಲಿ, ತುಮಕೂರು ಮಹಾ ನಗರಪಾಲಿಕೆಯ ಎಲ್ಲಾ ವಾರ್ಡುಗಳಲ್ಲಿ ಮತದಾರರ ಸಹಾಯವಾಣಿ ಕೇಂದ್ರಗಳನ್ನು ಸಾರ್ವಜನಿಕರ ಸಹಾಯಕ್ಕಾಗಿ ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಆಗಸ್ಟ್ 2ರೊಳಗೆ ಮತದಾರರು ತಮ್ಮ ಗಣತಿ ನಮೂನೆಯನ್ನು ಮತಗಟ್ಟೆ ಅಧಿಕಾರಿಗಳಿಗೆ ಹಿಂತಿರುಗಿಸಿದಲ್ಲಿ ಗಣತಿ ಪ್ರಕ್ರಿಯೆ ತ್ವರಿತವಾಗಿ ಪೂರ್ಣಗೊಳಿಸಲು ಸಹಾಯವಾಗಲಿದೆ ಎಂದರು.

ಈಗಾಗಲೇ ಎಲ್ಲಾ 11 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಸಹಾಯಕ ಚುನಾವಣಾಧಿಕಾರಿಗಳು ರಾಜಕೀಯ ಪಕ್ಷಗಳ ಸಭೆ ನಡೆಸಿ ಮತದಾರರ ಪಟ್ಟಿಯಲ್ಲಿನ ಗೈರು, ಸ್ಥಳಾಂತರ, ಮೃತರು, ನಕಲು ಹಾಗೂ ಇತರೆ ಮತದಾರರ ಮಾಹಿತಿಯನ್ನು ಪರಿಶೀಲಿಸಲಾಗಿದ್ದು, ನಿಯಮಾನುಸಾರ ರಾಜಕೀಯ ಪಕ್ಷಗಳ ಏಜೆಂಟರುಗಳಿಗೆ ಮಾಹಿತಿ ನೀಡಲಾಗಿದೆ. ಅದರಂತೆ ಈವರೆಗೆ ಜಿಲ್ಲೆಯ ಮತದಾರರ ಪಟ್ಟಿಯಲ್ಲಿ 45,268 ಮೃತಪಟ್ಟ ಮತದಾರರು, 18,884 ಗೈರು ಮತದಾರರು, 99,815 ಶಾಶ್ವತ ಸ್ಥಳಾಂತರಗೊಂಡ ಮತದಾರರ ಮಾಹಿತಿ ಲಭ್ಯವಾಗಿದೆ ಎಂದು ಅವರು ವಿವರಿಸಿದರು.

ಮತದಾರರು ತಮ್ಮ ಮಾಹಿತಿ ನೀಡುವಾಗ ಯಾವುದೇ ಕಾರಣಕ್ಕೆ ತಪ್ಪು ಮಾಹಿತಿ ಅಥವಾ ಪುನರಾವರ್ತಿತ ಮತದಾರರು ಎಂಬ ಮಾಹಿತಿ ಲಭ್ಯವಾದರೆ ಅಂತಹವರ ವಿರುದ್ಧ ಶಿಕ್ಷಾರ್ಹ ಅಪರಾಧದ ದಂಡನೆಯನ್ನು ವಿಧಿಸಲು ಅವಕಾಶವಿರುತ್ತದೆ. ಆದ್ದರಿಂದ ಮತದಾರರು ಇಂತಹ ತಪ್ಪುಗಳು ಆಗದಿರುವಂತೆ ಎಚ್ಚರ ವಹಿಸುವುದು ಸೂಕ್ತ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಮಾತನಾಡಿ, ಎಲ್ಲಾ ರಾಜಕೀಯ ಪಕ್ಷಗಳು ತಮ್ಮ ಬಿಎಲ್‌ಎಗಳನ್ನು ನೇಮಿಸಲಾಗಿದ್ದು, ಮತದಾರರ ಪಟ್ಟಿಯಿಂದ ಹೊರಗುಳಿಯಬಹುದಾದ ಮತದಾರರ ಲಭ್ಯ ಮಾಹಿತಿಯನ್ನು ನೀಡಲಾಗಿದೆ. ಕರಡು ಮತದಾರರ ಪಟ್ಟಿ ಪ್ರಕಟ ನಂತರ ಈ ಸಂಬಂಧಿಸಿದಂತೆ ಹಕ್ಕು ಆಕ್ಷೇಪಣೆಗಳನ್ನು ಸೂಕ್ತ ದಾಖಲೆಯೊಂದಿಗೆ ಸಲ್ಲಿಸಲು ಆಗಸ್ಟ್ 17 ರಿಂದ ಸೆಪ್ಟೆಂಬರ್ 16ರವರೆಗೆ ಕಾಲಾವಕಾಶವಿದ್ದು, ಮತದಾರರ ನೋಂದಣಾಧಿಕಾರಿಗಳು ವಿಚಾರಣೆ ನಡೆಸಿ ಅಕ್ಟೋಬರ್ 15ರೊಳಗೆ ಅಂತಿಮ ನಿರ್ಧಾರ ಕೈಗೊಳ್ಳಲು ಅವಕಾಶವಿರುತ್ತದೆ. ಅಕ್ಟೋಬರ್ 19ರಂದು ಅಂತಿಮ ಪಟ್ಟಿ ಪ್ರಕಟವಾಗುವುದರಿಂದ ಅದಕ್ಕೆ ಪೂರ್ವದಲ್ಲಿಯೇ ಸರಿಪಡಿಸಿಕೊಂಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವಂತೆ ನೋಡಿಕೊಳ್ಳಬೇಕು ಎಂದರು. ಸಭೆಯಲ್ಲಿ ನೋಂದಾಯಿತ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಆ.2ರಂದು ರಾಜ್ಯ ಅನ್ನಪ್ರಸಾದ ಸಮಿತಿ ಸಭೆ

ತುಮಕೂರು: ಶಬರಿಮಲೈ ಅಯ್ಯಪ್ಪ ಸೇವಾ ಸಮಾಜಂನ ರಾಜ್ಯ ಘಟಕದಿಂದ ರಾಜ್ಯ ಅನ್ನಪ್ರಸಾದ ಸಮಿತಿ ಸಭೆ ಹಾಗೂ ರಾಜ್ಯ ಕಾರ್ಯಕಾರಿಣಿ ಆಗಸ್ಟ್ 2ರಂದು ನಗರದ ಗಾರ್ಡನ್ ರಸ್ತೆಯ ಅಯ್ಯಪ್ಪಸ್ವಾಮಿ ದೇವಸ್ಥಾನ ಸಭಾಂಗಣದಲ್ಲಿ ಏರ್ಪಾಟಾಗಿದೆ.

ಈ ಸಂಬಂಧ ರಾಷ್ಟ್ರೀಯ ಅನ್ನಪ್ರಸಾದ ಸಮಿತಿ ಅಧ್ಯಕ್ಷ ಟಿ.ಬಿ. ಶೇಖರ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ದೇವಸ್ಥಾನ ಸಭಾಂಗಣದಲ್ಲಿ ನಡೆದ ತುಮಕೂರು ಸಮಿತಿ ಸಭೆಯಲ್ಲಿ ರಾಜ್ಯ ಸಮಿತಿ ಸಭೆಯ ಪೂರ್ವಭಾವಿ ಸಿದ್ಧತೆ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಮಾತನಾಡಿದ ರಾಷ್ಟ್ರೀಯ ಅನ್ನಪ್ರಸಾದ ಸಮಿತಿ ಅಧ್ಯಕ್ಷ ಟಿ.ಬಿ. ಶೇಖರ್, ಶಬರಿಮಲೈಗೆ ಹೋಗುವ ಅಯ್ಯಪ್ಪಸ್ವಾಮಿ ಭಕ್ತರಿಗೆ, ಮಾಲಾಧಾರಿಗಳಿಗೆ ಅನ್ನಪ್ರಸಾದ ವ್ಯವಸ್ಥೆ ಮಾಡುವ ಈ ಸಮಿತಿ ಕಳೆದ ವರ್ಷ 42 ಲಕ್ಷ ಜನರಿಗೆ ಅನ್ನ ಪ್ರಸಾದ ವ್ಯವಸ್ಥೆ ಮಾಡಿತ್ತು. ಈ ಬಾರಿ ಸುಮಾರು 80 ಲಕ್ಷ ಜನರಿಗೆ ಅನ್ನಪ್ರಸಾದ ನೀಡುವ ಗುರಿ ಹೊಂದಿದೆ ಎಂದು ಹೇಳಿದರು.ಅಯ್ಯಪ್ಪಸ್ವಾಮಿ ಭಕ್ತರು ಶಬರಿಮಲೈಗೆ ಹೋಗುವ ರಾಜ್ಯದ ಗಡಿ ಭಾಗಗಳಾದ ಅತ್ತಿಬೆಲೆ ಚೆಕ್‌ಪೋಸ್ಟ್, ಗುಂಡ್ಲುಪೇಟೆ ಚೆಕ್‌ಪೋಸ್ಟ್ ಹಾಗೂ ಕಾಸರಗೋಡು ಬಳಿ ಅನ್ನಪ್ರಸಾದ ಕೇಂದ್ರಗಳನ್ನು ತೆರೆದು ಪ್ರಸಾದ ವಿತರಣೆ ಮಾಡಲಾಗುವುದು ಎಂದರು. ಈ ಸಂಬಂಧ ಭಾನುವಾರ ನಗರದಲ್ಲಿ ನಡೆಯುವ ರಾಜ್ಯ ಅನ್ನಪ್ರಸಾದ ಸಮಿತಿ ಸಭೆಯಲ್ಲಿ ಹೆಚ್ಚಿನ ವಿಚಾರಗಳ ಚರ್ಚೆಯಾಗಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಟಿ.ಬಿ. ಶೇಖರ್ ತಿಳಿಸಿದರು.

ಅನ್ನಪ್ರಸಾದ ಸಮಿತಿ ಸಭೆಯಲ್ಲಿ ಶಬರಿಮಲೈ ಅಯ್ಯಪ್ಪ ಸೇವಾ ಸಮಾಜಂನ ರಾಷ್ಟ್ರೀಯ ಅಧ್ಯಕ್ಷ ಮುರುಗೇಶ್ ಸೆಲ್ವಂ, ಉಪಾಧ್ಯಕ್ಷ ಆನಂದ್ ವಾಮನ ನಾಯಕ್, ಕಾರ್ಯದರ್ಶಿ ಎನ್. ರಾಜನ್, ಜಂಟಿ ಕಾರ್ಯದರ್ಶಿ ವಿನೋದ್‌ಕುಮಾರ್, ಸದಸ್ಯರಾದ ಸಿ.ಎಸ್.ವಿ. ಪ್ರಸಾದ್, ಇ. ಕಾಂತೇಶ್, ಸಮಾಜಂನ ರಾಜ್ಯ ಅಧ್ಯಕ್ಷ ಎನ್. ಜಯರಾಮ್, ರಾಷ್ಟ್ರೀಯ ಅನ್ನಪ್ರಸಾದ ಸಮಿತಿ ಸಂಯೋಜಕ ಎಸ್.ಎನ್. ಕೃಷ್ಣಯ್ಯ ಮೊದಲಾವರು ಭಾಗವಹಿಸುವರು

ಮಾನವ ಕಳ್ಳ ಸಾಗಾಣಿಕೆ : ಮೂಲಭೂತ ಹಕ್ಕುಗಳ ಉಲ್ಲಂಘನೆ– ನ್ಯಾ. ಹವಲೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳು ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗಿದ್ದು, ಭಾರತೀಯ ಸಂವಿಧಾನದಲ್ಲಿ ಇಂತಹ ಪ್ರಕರಣಗಳನ್ನು ನಿಷೇಧಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಲೋಕೇಶ ಧನಪಾಲ ಹವಲೆ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಶಾಂತ ಜೀವ ಜ್ಯೋತಿ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಗುರುವಾರ ಜರುಗಿದ "ಮಾನವ ಕಳ್ಳಸಾಗಾಣಿಕೆ ತಡೆ ದಿನಾಚರಣೆ ಹಾಗೂ ಕಾರ್ಯಾಗಾರ"ವನ್ನು ಉದ್ಘಾಟಿಸಿ ಮಾತನಾಡಿದ ಅವರು ಅನಕ್ಷರತೆ, ಬಡತನವು ಮಾನವ ಕಳ್ಳಸಾಗಾಣಿಕೆಯ ಜಾಲದಲ್ಲಿ ಸಿಲುಕಿಕೊಳ್ಳುವಂತೆ ಮಾಡುತ್ತದೆ. ಈ ಜಾಲದಲ್ಲಿ ಒಮ್ಮೆ ಸಿಲುಕಿಕೊಂಡರೆ ಹೊರ ಬರುವುದು ಕಷ್ಟಸಾಧ್ಯ. ಈ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶಗಳ ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವುದು ಅಗತ್ಯವೆಂದು ತಿಳಿಸಿದರು.

ಮಾನವ ಕಳ್ಳ ಸಾಗಾಣಿಕೆಯಂತಹ ಅಪರಾಧ ಪ್ರಕರಣಗಳು ಘಟಿಸಿದ ನಂತರ ಕಾನೂನು ಕ್ರಮ ತೆಗೆದುಕೊಳ್ಳುವ ಬದಲು ಘಟಿಸುವ ಮುನ್ನವೇ ಪ್ರಕರಣಗಳು ಜರುಗದಂತೆ ಎಚ್ಚರಿಕೆವಹಿಸಬೇಕು. ಮಾನವ ಕಳ್ಳ ಸಾಗಾಣಿಕೆಯಂತಹ ಅಪರಾಧಗಳು ಕಂಡು ಬಂದವರು ಕೂಡಲೇ ಸಂಬಂಧಿಸಿದ ಇಲಾಖೆಗೆ ಮಾಹಿತಿ ನೀಡಿದಲ್ಲಿ ಇಂತಹ ಅಮಾನವೀಯ ಘಟನೆಗಳನ್ನು ತಡೆದು ಸಂತ್ರಸ್ಥರಿಗೆ ರಕ್ಷಣೆ ನೀಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಮಾನವ ಕಳ್ಳ ಸಾಗಾಣಿಕೆಯ ಉದ್ದೇಶ, ಮಾನವ ಕಳ್ಳ ಸಾಗಾಣಿಕೆಗೆ ಕಾನೂನಿನಡಿ ಇರುವ ಶಿಕ್ಷೆ, ಅದನ್ನು ತಡೆಯುವ ವಿಧಾನ, ಭಾಗೀದಾರ ಇಲಾಖೆಗಳ ಕರ್ತವ್ಯ ಮತ್ತು ಜವಾಬ್ದಾರಿ, ನಾಗರಿಕರ ಜವಾಬ್ದಾರಿ ಮತ್ತು ಕರ್ತವ್ಯ, ಮಾನವ ಕಳ್ಳ ಸಾಗಾಣಿಕೆಯ ಸಂತ್ರಸ್ಥರ ಪುರ್ನವಸತಿ ಮತ್ತು ಸರ್ಕಾರಿ ಯೋಜನೆ ಹಾಗೂ ಮಕ್ಕಳ ಸಹಾಯವಾಣಿ–1098, ಮಹಿಳಾ ಸಹಾಯವಾಣಿ–181, ಪೊಲೀಸ್/ತುರ್ತು ಸಹಾಯವಾಣಿ–112ರ ಬಗ್ಗೆ ಮಾಹಿತಿ ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಡಾ: ಸಿದ್ದರಾಮಣ್ಣ ಎಸ್. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ಒತ್ತಾಯಪೂರ್ವಕ ಭಿಕ್ಷಾಟನೆ, ಜೀತ ಪದ್ಧತಿ, ಲೈಂಗಿಕ ಶೋಷಣೆ, ಬಾಲಕಾರ್ಮಿಕತೆ, ಅಂಗಾಂಗ ಕದಿಯುವುದು ಮಾನವ ಕಳ್ಳ ಸಾಗಾಣಿಕೆಗೆ ಪ್ರಮುಖ ಕಾರಣಗಳಾಗಿವೆ. ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಧುನಿಕ ರೀತಿಯಲ್ಲಿ ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳು ವರದಿಯಾಗುತ್ತಿವೆ. ಉನ್ನತ ವ್ಯಾಸಂಗ ಮಾಡಿದವರಿಗೆ ವಿದೇಶದಲ್ಲಿ ಉದ್ಯೋಗ ಕೊಡಿಸುವ ಆಮಿಷ ತೋರಿ ಶೋಷಣೆ ನೀಡುವ ಮೂಲಕ ಅಕ್ಷರಸ್ಥರೂ ಸಹ ಮಾನವ ಕಳ್ಳ ಸಾಗಾಣಿಕೆಯಲ್ಲಿ ಭಾಗಿಯಾಗುತ್ತಿರುವುದು ಶೋಚನೀಯ ಸಂಗತಿಯಾಗಿದೆ. ಮಾನವ ಕಳ್ಳ ಸಾಗಾಣಿಕೆ ಅಪರಾಧಗಳಲ್ಲಿ ಭಾಗಿಯಾದವರನ್ನು ಕಠಿಣ ಶಿಕ್ಷೆಗೆ ಒಳಪಡಿಸಲು ಕಾನೂನಿನಲ್ಲಿ ಅವಕಾಶವಿದೆ. ಈ ನಿಟ್ಟಿನಲ್ಲಿ ಭಾಗೀದಾರ ಇಲಾಖೆಗಳ ಅಧಿಕಾರಿಗಳೆಲ್ಲರೂ ಮಾನವ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟುವಲ್ಲಿ ಕಾರ್ಯೋನ್ಮುಖರಾಗುವ ಮೂಲಕ ಈ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಲು ಇಲಾಖೆಯೊಂದಿಗೆ ಕೈಜೋಡಿಸಬೇಕೆಂದು ತಿಳಿಸಿದರು.

ಡಿವೈ.ಎಸ್.ಪಿ. ಚಂದ್ರಶೇಖರ್ ಮಾತನಾಡಿ, ಪೋಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧಕಾಯ್ದೆ ಮತ್ತು ಬಾಲನ್ಯಾಯ ಕಾಯ್ದೆಯ ಬಗ್ಗೆ ಮಾಹಿತಿ ನೀಡಿದರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅಂಬಿಕಾ ಕೆ.ಹೆಚ್. ಮಾತನಾಡಿ ಅನೈತಿಕ ಸಾಗಾಣೆ ತಡೆ ಕಾಯ್ದೆಯ ಬಗ್ಗೆ ವಿವರಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಪವಿತ್ರ ಆರ್.ಜಿ. ಸ್ವಾಗತಿಸಿದರು. ಕಾರ್ಯಕ್ರಮ ನಿರೂಪಣಾಧಿಕಾರಿ ಅನುಷಾ ಡಿ., ಜಿಲ್ಲಾ ಕಾರ್ಮಿಕ ಅಧಿಕಾರಿ ಫೈರೋಜ್ ಪಾಷಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು/ಸಿಬ್ಬಂದಿ ಹಾಜರಿದ್ದರು.

ಹಿರಿಯ ನಾಗರಿಕ/ಸಂಸ್ಥೆಗೆ ರಾಜ್ಯ ಪ್ರಶಸ್ತಿ : ಅರ್ಜಿ ಆಹ್ವಾನ

ತುಮಕೂರು : ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ವಿವಿಧ ಕ್ಷೇತ್ರ(ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ/ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆ)ಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಹಿರಿಯ ನಾಗರಿಕರಿಗೆ 6 ವೈಯಕ್ತಿಕ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ 1 ಸಂಸ್ಥೆಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಿದೆ. ಆಸಕ್ತಿಯುಳ್ಳ ಹಿರಿಯ ನಾಗರಿಕರು/ಸಂಸ್ಥೆಗಳು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಎಂ.ಜಿ.ರಸ್ತೆ, ತುಮಕೂರು ಇವರ ಕಚೇರಿಯಿಂದ ಅರ್ಜಿ ಪಡೆದು, ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ದ್ವಿ–ಪ್ರತಿಯಲ್ಲಿ ಆಗಸ್ಟ್ 17ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಯನ್ನು ದೂರವಾಣಿ ಸಂಖ್ಯೆ: 0816–2005053ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಬಿ.ಎಸ್. ಚಿದಾನಂದಮೂರ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ಕಿಲ್ ಇಂಡಿಯದ ಪ್ರಧಾನಮಂತ್ರಿ ಕೌಶಲ್ಯ ವಿಕಾಸ ಯೋಜನೆಯ ತರಬೇತಿ ಕಾರ್ಯಕ್ರಮ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ದೇಶದಲ್ಲಿ ನಿರುದ್ಯೋಗಿಗಳ ಸಂಖ್ಯೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ಕೌಶಲ್ಯವಿಕಾಸ ಕಾರ್ಯಕ್ರಮದ ಭಾಗವಾಗಿ ತಾಂತ್ರಿಕ ಶಿಕ್ಷಣ ಪಡೆದ ಮಕ್ಕಳಿಗೆ ಕೈಗಾರಿಕೆಗಳಲ್ಲಿ ಕೆಲಸ ಮಾಡಲು ಅಗತ್ಯವಿರುವ ಕೌಶಲ್ಯ ತರಬೇತಿ ನೀಡಿ,ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಸ್ಕಿಲ್ ಇಂಡಿಯಾ ಕೆಲಸ ಮಾಡುತ್ತಿದೆ ಎಂದು ಸ್ಕಿಲ್ ಇಂಡಿಯಾದ ಪಿಎಂಕೆವಿವೈನ ಸಂಚಾಲಕರಾದ ಧಾರವಾಡ ಐಐಟಿ ಪ್ರಾಧ್ಯಾಪಕ ಅಬ್ದುಲ್ ತಿಳಿಸಿದ್ದಾರೆ

ನಗರದ ಶೆಟ್ಟಿಹಳ್ಳಿ ಮುಖ್ಯರಸ್ತೆಯಲ್ಲಿರುವ ಹೆಚ್.ಎಂ.ಎಸ್. ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಭಾರತ ಸರಕಾರದ ಸ್ಕಿಲ್ ಇಂಡಿಯದ ಪ್ರಧಾನಮಂತ್ರಿ ಕೌಶಲ್ಯ ವಿಕಾಸ ಯೋಜನೆಯ ತರಬೇತಿ ಕಾರ್ಯಕ್ರಮಕ್ಕೆ ಗಿಡಕ್ಕೆ ನೀರೆರೆಯುವ ಮೂಲಕ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು, ಧಾರವಾಡ ಐಐಟಿಯ ಮೇಲುಸ್ತುವಾರಿ ಯಲ್ಲಿ ನುರಿತ ತಜ್ಞರು ತರಬೇತಿಗೆ ಆಯ್ಕೆಯಾದ ಮಕ್ಕಳಿಗೆ ಕಂಪ್ಯೂಟರ್ ಸೈನ್ಸ್, ಮೇಕಾನಿಕಲ್, ಎಲೆಕ್ಟ್ರಾನಿಕ್ ಅಂಡ್ ಕಮ್ಯುನಿಕೇಷನ್ ಹಾಗೂ ಎಐ(ಕೃತಕ ಬುದ್ದಿಮತ್ತೆ) ಈ ವಿಷಯುಗಳಲ್ಲಿ ತರಬೇತಿ ನೀಡುವ ಮೂಲಕ ಅವರನ್ನು ಕೌಶಲ್ಯಯುಕ್ತರನ್ನಾಗಿ ಪರಿವರ್ತಿಸಿ,ಉದ್ಯೋಗ ಒದಗಿಸುವ ಕೆಲಸ ಮಾಡುತ್ತಿದೆ. ಈ ವರ್ಷದಿಂದ ಪಿಎಂಕೆಇವಿವೈನ ಅಲ್ಪಸಂಖ್ಯಾತರ ಮಕ್ಕಳಿಗೆ ತರಬೇತಿ ನೀಡಲು ಹೆಚ್.ಎಂ.ಎಸ್. ಪಾಲಿಟೆಕ್ನಿಕ್ ಕಾಲೇಜು ಆಯ್ಕೆಯಾಗಿದ್ದು ಶೀಘ್ರದಲ್ಲಿಯೇ ತರಬೇತಿ ಆರಂಭವಾಗಲಿದೆ ಎಂದರು. ಪಿಎಂಕೆವಿವೈ ಕೌಶಲ್ಯ ತರಬೇತಿಗೆ ಈಗಾಗಲೇ ಐಟಿಐ,ಡಿಪ್ಲೋಮಾ ಕಲಿಯುತ್ತಿರುವ ವಿದ್ಯಾರ್ಥಿಗಳ ಜೊತೆಗೆ, ಐಟಿಐ,ಡಿಪ್ಲೋಮಾ ಕಲಿತು ಮನೆಯಲ್ಲಿರುವ ಪದವಿಧರರು ಪ್ರವೇಶ ಪಡೆಯುವ ಅವಕಾಶವಿದೆ.ತರಬೇತಿ ಅವಧಿಯಲ್ಲಿ ಕೌಶಲ್ಯ ತರಬೇತಿಯ ಜೊತೆಗೆ, 1000 ರೂ ಶಿಷ್ಯ ವೇತನ ದೊರೆಯಲಿದೆ.ತರಬೇತಿ ಪಡೆದ ಪ್ರತಿಯೊಬ್ಬರಿಗೂ ಸರ್ಟಿಫಿಕೇಟ್ ನೀಡಲಾಗುವುದು.ಈ ಸರ್ಟಿಫಿಕೇಟ್ ಗೆ ವಿಶ್ವದಾದ್ಯಂತ ಮಾನ್ಯತೆಯಿದ್ದು, ಭಾರತದಲ್ಲಿ ಅಲ್ಲದೆ ವಿದೇಶದಲ್ಲಿಯೂ ಉದ್ಯೋಗ ಪಡೆಯಬಹುದು.ಇದಕ್ಕೆ ಭಾರತ ಸರಕಾರದ ಸ್ಕಿಲ್ ಇಂಡಿಯಾ ಸಹಕಾರ ನೀಡಲಿದೆ. ಒಂದು ವರ್ಷಕ್ಕೆ ಐದು ನೂರು ಜನರಿಗೆ ತರಬೇತಿ ನೀಡುವ ಅವಕಾಶವಿದೆ.ಅಲ್ಪಸಂಖ್ಯಾತರ ಮಕ್ಕಳ ಜೊತೆ ಇತರೆ ಸಮುದಾಯದ ಮಕ್ಕಳು ಸಹ ತರಬೇತಿ ಪಡೆಯಲು ಅವಕಾಶವಿದೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದರು.

ಹೆಚ್.ಎಂ.ಎಸ್. ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರಾದ ಅಬ್ದುಲ್ ರಬ್ ಮಾತನಾಡಿ, ನಮ್ಮ ಸಂಸ್ಥೆ ಅಧ್ಯಕ್ಷರಾದ ಡಾ.ಎಸ್.ಷಫಿಅಹಮದ್ ಅವರ ನಿರಂತರ ಪ್ರಯತ್ನದ ಫಲವಾಗಿ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆಯ ತರಬೇತಿಗೆ ನಮ್ಮ ಸಂಸ್ಥೆ ಆಯ್ಕೆಯಾಗಿದೆ.ತಾಂತ್ರಿಕ ತಜ್ಞರು ನಮ್ಮ ಕಾಲೇಜಿಗೆ ಆಗಮಿಸಿ, ಇಲ್ಲಿನ ಮೂಲಭೂತ ಸೌಕರ್ಯಗಳನ್ನು ವೀಕ್ಷಿಸಿ,ಇಲ್ಲಿನ ಭೋಧಕ ಸಿಬ್ಬಂದಿಗಳ ಜೊತೆ ವಿಚಾರ ವಿನಿಮಯ ನಡೆಸಿ, ಒಪ್ಪಿಗೆ ಸೂಚಿಸಿದ್ದಾರೆ. ಇದು ತರಬೇತಿಯ ಜೊತೆಗೆ ಉದ್ಯೋಗವನ್ನು ನೀಡುವ ಮಹತ್ವದ ಯೋಜನೆಯಾಗಿದ್ದು, ಒಂದು ವೇಳೆ ತರಬೇತಿ ನಂತರ ಉದ್ಯೋಗಕ್ಕೆ ಆಯ್ಕೆಯಾಗುವುದು ತಡವಾದಲ್ಲಿ, ಸುಮಾರು ಎರಡು ವರ್ಷಗಳ ವರೆಗೆ ಪಿಎಂಕೆವಿವೈ ಅಡಿಯಲ್ಲಿ ನಿರುದ್ಯೋಗ ಭತ್ಯೆ ಸಹ ದೊರೆಯಲಿದೆ. ಹಾಗಾಗಿ ಹಾಲಿ ಈ ಕಾಲೇಜಿನಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳು ತಮ್ಮ ಎಂದಿನ ಕಲಿಕೆಗೆ ತದರೆಯಾಗದ ರೀತಿ ವಿಶೇಷ ತರಗತಿಗಳ ಮೂಲಕವೂ ಕಲಿಯಲು ಅವಕಾಶವಿದೆ.ಧಾರವಾಡ ಐಐಟಿ ಕಾಲೇಜಿನ ನುರಿತ ಪ್ರಾಧ್ಯಾಪಕರು ಪಠ್ಯಕ್ರಮ ರೂಪಿಸಲಿದ್ದಾರೆ. ಅಸಕ್ತ ಭೋಧಕರು ಸಹ ಶಿಕ್ಷಕರಾಗಿ ಗೌರವಧನದ ಆಧಾರದಲ್ಲಿ ಕಲಿಸಲು ಅವಕಾಶವಿದೆ.ಇದರ ಲಾಭ ಪಡೆದುಕೊಳ್ಳುವಂತೆ ಕೋರಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹೆಚ್.ಎಂ.ಎಸ್. ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಸ್. ಷಫಿಅಹಮದ್, ಇಂದು ಕೌಶಲ್ಯ ಎಲ್ಲರಿಗೂ ಅಗತ್ಯವಿದೆ. ಪಿಎಂಕೆವಿವೈ ಜ್ಞಾನದ ವಿನಿಮಯಕ್ಕೆ ಒಳ್ಳೆಯ ವೇದಿಕೆಯಾಗಿದ್ದು, ಇಂದಿನ ಕೈಗಾರಿಕೆಗಳ ಅಗತ್ಯಕ್ಕೆ ಅನುಗುಣವಾದ ಮಾನವ ಸಂಪನ್ಮೂಲವನ್ನು ಅಭಿವೃದ್ಧಿ ಪಡಿಸುವ ಸಲುವಾಗಿ ಸ್ಕಿಲ್ ಇಂಡಿಯಾ ಇಂತಹ ಕಾರ್ಯಕ್ರಮಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ರೂಪಿಸಿದೆ. ಐಐಟಿ ಧಾರವಾಡ ಇದರ ನೋಡಲ್ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ.ಅಲ್ಲಿನ ಶಿಕ್ಷಕರು ನಮ್ಮ ತರಬೇತಿ ಕೇಂದ್ರಕ್ಕೆ ಆಗಮಿಸಿ ಯುವಜನತೆಗೆ ಅಗತ್ಯ ಇರುವ ತಂತ್ರಜ್ಞಾನವನ್ನು ಬೋಧಿಸಲಿದ್ದಾರೆ. ಅಲ್ಲದೆ ನಮ್ಮ ಕಾಲೇಜಿನ ಟೀಚರ್ ಗಳಿಗೂ ಪಾಠ ಮಾಡಲು ಅವಕಾಶವಿದೆ. ಅದಕ್ಕೆ ತಕ್ಕ ಗೌರವಧನವನ್ನು ಸ್ಕಿಲ್ ಇಂಡಿಯಾ ಭರಿಸಲಿದೆ. ವಿದ್ಯಾವಂತರು ಉದ್ಯೋಗವಿಲ್ಲದೆ ಬರಿಗೈಯಲ್ಲಿ ಇರಬಾರದು ಎಂಬ ಉದ್ದೇಶ ಇದರ ಹಿಂದಿದೆ.ತರಬೇತಿ ಪಡೆಯುವ ಮಕ್ಕಳಿಗೆ ಹಾಸ್ಟಲ್ ಸೌಲಭ್ಯ ಸಹ ದೊರೆಯಲಿದೆ.ವಿದ್ಯಾರ್ಥಿಗಳು ಇದರ ಲಾಭ ಪಡೆದುಕೊಳ್ಳುವಂತೆ ತಿಳಿಸಿದರು.

"ಬ್ರಿಲಿಯನ್ಸ್ ವಜ್ರಾಭರಣ ಪ್ರದರ್ಶನ"

ಬ್ರಿಲಿಯನ್ಸ್ ಡೈಮಂಡ್ ಜ್ಯುವೆಲ್ಲರಿ ಶೋ' ಬೆಂಗಳೂರು ಡಿಕನ್ಸನ್ ರಸ್ತೆಯ ಜೋಯಾಲುಕ್ಕಾಸ್ ಶೋರೂಂನಲ್ಲಿ ಜುಲೈ 31 ರಿಂದ ಆಗಸ್ಟ್ 16, 2026ರ ವರೆಗೆ ಜಗತ್ತಿನ ಅಚ್ಚುಮೆಚ್ಚಿನ ಜ್ಯುವೆಲ್ಲರ್ ಜೋಯಾಲುಕ್ಕಾಸ್, ಬೆಂಗಳೂರಿನ ಡಿಕನ್ಸನ್ ರಸ್ತೆಯಲ್ಲಿರುವ ತನ್ನ ಶೋರೂಮ್‌ನಲ್ಲಿ ಜುಲೈ 31, 2026 ರಿಂದ ಆಗಸ್ಟ್ 16, 2026ರ ವರೆಗೆ "ಬ್ರಿಲಿಯನ್ಸ್ ವಜ್ರಾಭರಣ ಪ್ರದರ್ಶನ"ದ ಮೂಲಕ ನಗರವಾಸಿಗಳನ್ನು ಮಂತ್ರಮುಗ್ಧಗೊಳಿಸಲು ಸಜ್ಜಾಗಿದೆ. ಈ ವಿಶೇಷ ಪ್ರದರ್ಶನವು ವಜ್ರಾಭರಣಗಳಲ್ಲಿನ ಕಲಾತ್ಮಕತೆ, ಸೊಬಗು ಮತ್ತು ನಾವೀನ್ಯತೆಯ ಅಸಾಧಾರಣ ಸಂಗಮವನ್ನು ಅನಾವರಣಗೊಳಿಸಲಿದೆ.

ಭವ್ಯವಾದ ವೈವಾಹಿಕ ಆಭರಣಗಳಿಂದ ಹಿಡಿದು ದೈನಂದಿನ ಬಳಕೆಗೆ ಸೂಕ್ತವಾದ ಅತ್ಯಾಧುನಿಕ ವಿನ್ಯಾಸಗಳವರೆಗೆ ವೈವಿಧ್ಯಮಯ ಶ್ರೇಣಿಯನ್ನು ಒಳಗೊಂಡಿರುವ ಈ ಪ್ರದರ್ಶನವು, ಸಾಂಪ್ರದಾಯಿಕ ಕರಕುಶಲತೆ ಮತ್ತು ಆಧುನಿಕ ಅಭಿರುಚಿಯ ಸಮ್ಮಿಲನವಾಗಿದೆ. ಇಲ್ಲಿನ ಪ್ರತಿಯೊಂದು ಆಭರಣವೂ ಅತ್ಯುತ್ತಮ ವಿನ್ಯಾಸ ಮತ್ತು ಸೂಕ್ಷ್ಮ ಕಲಾಕೌಶಲವನ್ನು ಪ್ರತಿಬಿಂಬಿಸುತ್ತದೆ; ಇವು ಪ್ರದರ್ಶನದ ಅವಧಿಯಲ್ಲಿ ಮಾತ್ರ ಲಭ್ಯವಿರುತ್ತವೆ.

ಈ ಸಂದರ್ಭದಲ್ಲಿ ಮಾತನಾಡಿದ ಜೋಯಾಲುಕ್ಕಾಸ್ ಸಮೂಹದ ಸಿಎಂಡಿ ಜೋಯ್ ಆಲುಕ್ಕಾಸ್ ಅವರು, "'ಬ್ರಿಲಿಯನ್ಸ್ ಡೈಮಂಡ್ ಜ್ಯುವೆಲ್ಲರಿ ಶೋ' ನಮ್ಮ ಶ್ರೇಷ್ಠತೆಯ ಬದ್ಧತೆ ಹಾಗೂ ಸೊಬಗು ಮತ್ತು ವಿಶಿಷ್ಟತೆಯನ್ನು ಸಾರುವ ಆಭರಣಗಳನ್ನು ರೂಪಿಸುವ ನಮ್ಮ ಉತ್ಸಾಹದ ಸಂಕೇತವಾಗಿದೆ. ಬೆಂಗಳೂರು ನಮಗೆ ಯಾವಾಗಲೂ ವಿಶೇಷವಾದ ನಗರವಾಗಿದೆ. ನಮ್ಮ ಗ್ರಾಹಕರಿಗೆ ಅತ್ಯಂತ ಆಕರ್ಷಕ ಮತ್ತು ಪ್ರಕಾಶಮಾನವಾದ ವಜ್ರಗಳ ಸ್ವರೂಪಗಳನ್ನು ಅನುಭವಿಸಲು ಅವಕಾಶ ಕಲ್ಪಿಸುವ ಈ ವಿಶೇಷ ಸಂಗ್ರಹವನ್ನು ಪ್ರಸ್ತುತಪಡಿಸಲು ನಮಗೆ ಸಂತೋಷವಾಗುತ್ತಿದೆ' ಎಂದು ಹೇಳಿದರು.

ಪ್ರದರ್ಶನದ ಆಕರ್ಷಣೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ, ಈ ಅವಧಿಯಲ್ಲಿ 1 ಲಕ್ಷ ರೂಪಾಯಿ ಮತ್ತು ಅದಕ್ಕಿಂತ ಹೆಚ್ಚಿನ ಮೌಲ್ಯದ ವಜ್ರಾಭರಣ ಖರೀದಿಸುವ ಗ್ರಾಹಕರಿಗೆ ಉಚಿತ ಚಿನ್ನದ ನಾಣ್ಯ ನೀಡಲಾಗುತ್ತದೆ, ಇದು ಈ ಸಂಭ್ರಮವನ್ನು ಇನ್ನಷ್ಟು ಲಾಭದಾಯಕವಾಗಿಸುತ್ತದೆ.

'ಬ್ರಿಲಿಯನ್ಸ್ ಡೈಮಂಡ್ ಜ್ಯುವೆಲ್ಲರಿ ಶೋ' ಬೆಂಗಳೂರಿನ ಡಿಕನ್ಸನ್ ರಸ್ತೆಯಲ್ಲಿರುವ ಜೋಯಾಲುಕ್ಕಾಸ್ ಶೋರೂಮ್‌ನಲ್ಲಿ ಆಗಸ್ಟ್ 16, 2026ರ ವರೆಗೆ ನಡೆಯಲಿದೆ. ಐಷಾರಾಮಿ, ಅಭಿವ್ಯಕ್ತಿ ಮತ್ತು ಕಾಲಾತೀತ ಸೌಂದರ್ಯ ಪ್ರತಿಬಿಂಬಿಸುವ ವಜ್ರಗಳ ಅದ್ಭುತ ಜಗತ್ತನ್ನು ಕಣ್ತುಂಬಿಕೊಳ್ಳಲು ಆಭರಣಪ್ರಿಯರು ಮತ್ತು ಗ್ರಾಹಕರನ್ನು ಇಲ್ಲಿಗೆ ಆಹ್ವಾನಿಸಲಾಗಿದೆ.

ಕಾವೇರಿ ನೀರು ಬಿಡುಗಡೆ ವಿರೋಧಿಸಿ ಕರವೇ ಸ್ವಾಭಿಮಾನಿ ಬಣ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ತಮಿಳುನಾಡಿಗೆ ನೀರು ಬಿಡುವಂತೆ ಕಾವೇರಿ ನೀರಾವರಿ ಪ್ರಾಧಿಕಾರ ಆದೇಶಿಸಿರುವುದನ್ನು ಹಾಗೂ ಏಕಾಏಕಿ ತ'ಮಿಳುನಾಡಿಗೆ ನೀರು ಬಿಟ್ಟಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ಕಾರ್ಯಕರ್ತರು ಪ್ರತಿಭಟನೆ ನಡೆಸಿದ'ರು.ನಗರದ ಐಜೂರು ವೃತ್ತದಲ್ಲಿ ಶುಕ್ರವಾರ ಜಮಾಯಿಸಿದ ಪ್ರತಿಭಟನಾಕಾರರು ಸಿಡಬ್ಲ್ಯೂಆರ್‌ಸಿ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ತೀವ್ರ ಬರಗಾಲದ ಸಂಕಷ್ಟದ ಪರಿಸ್ಥಿತಿ ನಡುವೆಯೂ ತಮಿಳುನಾಡಿಗೆ ನೀರು ಬಿಡುವಂತೆ ಆದೇಶಿಸಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ರಾಜ್ಯ ವಕ್ತಾರ ಶಿವುಗೌಡ ಮಾತನಾಡಿ, ಕಾವೇರಿ ನೀರು ಬಿಡುಗಡೆಗೆ ಆದೇಶ ಹೊರಬಂದಿರುವುದು ಕರ್ನಾಟಕ ಜನರ ಮರಣ ಶಾಸನದಂತಿದೆ. ಪ್ರತಿಬಾರಿ ಮಳೆ ಇಲ್ಲದ



ಸಂದರ್ಭದಲ್ಲಿ ಬರದ ಸಂದರ್ಭ ಬಂದಾಗಲೆಲ್ಲಾ ಕಾವೇರಿ ನದಿ ನೀರನ್ನು ಕಳ್ಳತನ ಮಾಡುವ ಹುನ್ನಾರ ತಮಿಳುನಾಡು ಸರ್ಕಾರ ಮಾಡಿಕೊಂಡು ಬಂದಿದೆ. ತಮಿಳುನಾಡು ಸರ್ಕಾ ರ'ಕ್ಕೆ ಬೆದರಿ ಕಾವೇರಿ ನೀರು ಹರಿಸಿದರೆ ಸಂಸದರು, ಶಾಸಕರ ಮನೆಗೆ ಬೀಗ ಜಡಿದು ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮೊದಲಿನಿಂದಲೂ ಕೇಂದ್ರ ಮತ್ತು ರಾಜ್ಯ ಸರ್ಕಾರ ತಮಿಳುನಾಡು ಸರ್ಕಾರಕ್ಕೆ ಶಕ್ತಿ ತುಂಬುವ ಕೆಲಸವನ್ನೇ ರೂಢಿಸಿಕೊಂಡು ಬಂದಿದೆ. ನಾಡಿನ ನೀರನ್ನು ರಕ್ಷಣೆ ಮಾಡದೇ ಮೌನಕ್ಕೆ ಶರಣಾಗುವ ಜನಪ್ರತಿನಿಧಿಗಳನ್ನು ನಾಡಿನ ಜನತೆ ಕ್ಷಮಿಸ'ುವುದಿಲ್ಲ. ಇದೇ ಸ'ರ್ಕಾರ ಮೇಕೆ'ದಾಟು ಅಣೆಕಟ್ಟುವುದಾಗಿ ಭರವಸೆ ನೀಡಿತ್ತು. ಅಣೆಕಟ್ಟು ಸಂಪೂರ್ಣವಾಗಿ ನೆರವೇರಿದ್ದರೆ ರಾಜ್ಯದ ಎಲ್ಲಾ ಸಮಸ್ಯೆ ನೀಗುತ್ತಿತ್ತು.

ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಅಣೆಕಟ್ಟು ಕಟ್ಟುವುದಾಗಿ ಜನರಿಗೆ ಹೇಳಿ ಮತಪಡೆದು ಮುಖ್ಯಮಂತ್ರಿಗಳ ಸ್ಥಾನ ಅಲಂಕರಿಸಿದ್ದೀರಿ. ಕೂಡಲೇ ಅಣೆಕಟ್ಟು ಕಟ್ಟಲು ಬೇಕಾದ ಎಲ್ಲಾ ರೀತಿಯ ಪೂರ್ವ ತಯಾರಿಗಳನ್ನು ಮಾಡಿಕೊಂಡು ಮೇಕೆದಾಟು ಅಣೆಕಟ್ಟು ಯೋಜನೆಯನ್ನು ಸಂಪೂರ್ಣಗೊಳಿಸಲೇಬೇಕೆಂದು ನಮ್ಮ ಒತ್ತಾಯವಾಗಿದೆ ಎಂದರು.ಕೇಂದ್ರ ಸರ್ಕಾರದ ಅಧಿಸೂಚನೆಯಂತೆ ಯಾವುದೇ ಕುಡಿಯುವ ನೀರಿನ ಯೋಜನೆಗಳಿಗೆ ಅಕ್ಕಪಕ್ಕದ ರಾಜ್ಯ ಸರ್ಕಾರಗಳ ಅನುಮತಿ ಬೇಕಿಲ್ಲ ಎಂದು ಹೇಳಿದೆ. ಈ ಹಿಂದಿನ ಸರ್ಕಾರ' ಅಣೆಕಟ್ಟು ನಿರ್ಮಾಣಕ್ಕೆ ಒಂದು ಸಾವಿರ ಕೋಟಿ ಹಣವನ್ನು ಬಿಡುಗಡೆ ಮಾಡಿದೆ. ಅದನ್ನು ಪಡೆದು ಉಳಿದಿರುವ ಎರಡು ವರ್ಷಗಳ ಅವಧಿಯೊಳಗೆ ಯೋಜನೆ ಪೂರ್ಣಗೊಳಿಸಬೇಕು. ಡಿ.ಕೆ.ಶಿವಕುಮಾರ್ ಅವರಿಗೆ ಇದೊಂದು ಸುವರ್ಣಾವಕಾಶವಾಗಿದೆ. ಈ ಕೂಡಲೇ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಕಿರಣ್‌ಗೌಡ, ಜಿಲ್ಲಾ ಉಸ್ತುವಾರಿ ಅಧ್ಯಕ್ಷ ಬಸವರಾಜ್, ತಾಲೂಕು ಅಧ್ಯಕ್ಷ ಸಿದ್ದರಾಜು, ಸಂಘಟನಾ ಕಾರ್ಯದರ್ಶಿ ವಿನಯ್‌ ಮುಖಂಡರುಗಳಾದ ರಮೇಶ್, ಸ್ವಾಮಿ, ರಾಜೀವ್, ಮನು, ಲಿಂಗೇಶ್, ವಾಸು, ರಘು, ರಾಜು, ಪ್ರತಾಪ್, ತರುಣ್, ನಿಂಗರಾಜು, ಚಿದಾನಂದ್ ಮುಂತಾದವರಿದ್ದರು.

ಬಿಜೆಪಿ ಕಾರ್ಯಕರ್ತರಿಂದ ಹುಟ್ಟುಹಬ್ಬ ಆಚರಣೆ



ರಾಮನಗರ: ಕೆಎಸ್‌ಐಸಿಎಸ್ ಮಾಜಿ ಅಧ್ಯಕ್ಷ ಎಂ.ಗೌತಮ್ ಗೌಡ ಅವರ 41ನೇ ವರ್ಷದ ಹುಟ್ಟುಹಬ್ಬವನ್ನು ಶುಕ್ರವಾರ ಬಿಜೆಪಿ ಕಾರ್ಯಕರ್ತರು ಮತ್ತು ಅಭಿಮಾನಿಗಳು ಸಂಭ್ರಮದಿಂದ ಆಚರಿಸಿದರು.

ನಗರ'ದ' ಆರ್‌ವಿಸಿಎಸ್ ಕಲ್ಯಾಣ ಮಂಟಪದಲ್ಲಿ ಗೌತಮ್ ಗೌಡ ಹುಟ್ಟುಹಬ್ಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಗೌತಮ್ ಗೌಡ ಅಭಿಮಾನಿಗಳು ಜನ್ಮದಿನದ ಸಂಭ್ರಮಕ್ಕೆ ಸಾಕ್ಷಿಯಾದರು. ಈ ವೇಳೆ ಗೌತಮ್ ಗೌಡ ಕೇಕ್ ಕತ್ತರಿಸುವ ಮೂಲಕ ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಂಡರು.

ಈ ವೇಳೆ ಕೆಎಸ್‌ಐಸಿಎಸ್ ಮಾಜಿ ಅಧ್ಯಕ್ಷ ಎಂ.ಗೌತಮ್ ಗೌಡ ಮಾತನಾಡಿ ಹುಟ್ಟುಹಬ್ಬ ಆಚರಣೆ ಆಡಂಬರವಾಗಬಾರದು. ಸರಳ ಮತ್ತು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಪ್ರತಿವರ್ಷ ಹುಟ್ಟುಹಬ್ಬವನ್ನು ಆಚರಿಸಿದಾಗ ಮನಸ್ಸಿಗೆ ನೆಮ್ಮದಿ ಸಿಗುತ್ತದೆ. ರಾಮನಗರ ವಿಧಾನಸಭಾ ಕ್ಷೇತ್ರದ ಜನರ ಅಭಿಮಾನಕ್ಕೆ ಚಿರಋಣಿಯಾಗಿದ್ದೇನೆ. ಅಭಿಮಾನಿಗಳು ಹಾಗೂ ಕಾರ್ಯಕರ್ತರ ಒತ್ತಾಯಕ್ಕೆ ಮಣಿದು ಹಲವೆಡೆ ಕೇಕ್ ಕತ್ತರಿಸುವ ಮೂಲಕ ಹುಟ್ಟುಹಬ್ಬವನ್ನು ಆಚರಿಸಿಕೊಂಡಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಆನಂದ್ ಸ್ವಾಮಿ, ರಾಜ್ಯ ಪರಿಷತ್ ಸದಸ್ಯ ಆರ್.ವಿ.ಸುರೇಶ್, ಜಿಲ್ಲಾ ಎಸ್‌ಸಿ ಮೋರ್ಚಾ ಅಧ್ಯಕ್ಷ ಕಾಳಯ್ಯ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್, ಜಿಲ್ಲಾ ಕಾರ್ಯಾಲಯ ಕಾರ್ಯದರ್ಶಿ ಚನ್ನಪ್ಪ, ಮುಖಂಡರಾದ ನಾಗೇಶ್, ಮಹೇಶ್, ಲಕ್ಷ್ಮೀ, ಕಿಶನ್, ನಂದೀಶ್, ಸಿದ್ದರಾಜು, ಬದ್ರಿನಾಥ್, ಮಹದೇವ, ರಂಜನ್, ರಾಘವೇಂದ್ರ, ಹೇಮಾವತಿ, ದೇವಿಕ, ಭಾನುಪ್ರಕಾಶ್, ಪ್ರದೀಪ್, ಹರೀಶ್, ಮೋಹನ್ ಸೇರಿದಂತೆ ನೂರಾರು ಬಿಜೆಪಿ ಮುಖಂಡರು, ಕಾರ್ಯಕರ್ತರು, ಹುಟ್ಟುಹಬ್ಬಕ್ಕೆ ಸಾಕ್ಷಿಯಾಗಿ ಗೌತಮ್ ಗೌಡ ಅವರಿಗೆ ಆಯಸ್ಸು, ಆರೋಗ್ಯ, ಅಧಿಕಾರ ದಯಪಾಲಿಸಲೆಂದು ಹಾರ-ತುರಾಯಿ, ಶಾಲು-ಶಲ್ಯಗಳನ್ನು ಹೊದಿಸಿ ಶುಭ ಹಾರೈಸಿದರು.

ಕಾವೇರಿ ನೀರು ನಿಯಂತ್ರಣ ಸಮಿತಿಯ ಆದೇಶವನ್ನು ಖಂಡಿಸಿ ರಸ್ತೆ ತಡೆ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ಕೊಳ್ಳೇಗಾಲ ;ತಮಿಳುನಾಡಿಗೆ ಕಾವೇರಿ ನೀರು ಬಿಡುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿಯ ಆದೇಶವನ್ನು ಖಂಡಿಸಿ ಕೊಳ್ಳೇಗಾಲ ತಾಲ್ಲೂಕು . ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ರಸ್ತೆ ತಡೆ ಪ್ರತಿಭಟನೆ ನಡೆಸಿದರು.

ಪಟ್ಟಣದ' ಮುಡಿಗುಂಡ ಸೇತುವೆ ಸಮೀಪದ ರಸ್ತೆಯಲ್ಲಿ ಜಮಾಯಿಸಿದ್ದ ರೈತ ಮುಖಂಡರು ಕಾವೇರಿ ನೀರು ನಿಯಂತ್ರಣ ಮಂಡಳಿ ವಿರುದ್ಧ ಧಿಕ್ಕಾರ ಘೋಷಣೆ ಕೂಗುವ ಮೂಲಕ ಪ್ರತಿಭಟಿಸಿದರು.

ಜಿಲ್ಲಾದ್ಯಕ್ಷರು ಗೌಡೇಗೌಡ ಮಾತನಾಡಿ, ತಮಿಳುನಾಡು ರಾಜ್ಯದ ಬೆಳೆಗಳಿಗೆ 3.500 ಸಾವಿರ ಕ್ಯೂಸೆಕ್ ಕಾವೇರಿ ನೀರನ್ನು 15 ದಿನಗಳ ಕಾಲ ಬಿಡುವಂತೆ ಆದೇಶ ಮಾಡಿರುವುದನ್ನು ಇದು ನಮ್ಮ ರಾಜ್ಯ ರೈತ ಸಂಘದ ವತಿಯಿಂದ ಖಂಡಿಸುತ್ತೇವೆ. ಈಗಾಗಲೇ ನಮ್ಮ ರಾಜ್ಯದಲ್ಲಿ ಮಳೆ ಇಲ್ಲದೆ ಬರಗಾಲ. ಆವರಿಸಿರುವುದರಿಂದ ಕಾವೇರಿಯ ಕಣಿವೆಗಳಲ್ಲಿ ನೀರು ಇಲ್ಲದೆ ಜಲಾಶಯಗಳೆಲ್ಲ ಬತ್ತಿ ಹೋಗುವ



ಇಂತಹ ಪರಿಸ್ಥಿತಿಯಲ್ಲಿ ಕಾವೇರಿ ನೀರು ನಿಯಂತ್ರಣ ಮಂಡಳಿ ಈ ರೀತಿ ಆದೇಶ ಮಾಡಿರುವುದು ನಿಜಕ್ಕೂ ಖಂಡನೀಯ ಎಂದರು. 1997 ರಲ್ಲಿ ಬಂಗಾರಪ್ಪ ರವರು ಮುಖ್ಯಮಂತ್ರಿಯಾಗಿದ್ದ ಸಂಧರ್ಭದಲ್ಲಿ ಗಟ್ಟಿಧ್ವನಿಯಿಂದ ತಮಿಳುನಾಡಿಗೆ ನೀರು ಬಿಡಲ್ಲ ಅಂತ ಉತ್ತರ ನೀಡಿದ್ದಂತೆ, ಈಗಿನ ಮುಖ್ಯಮಂತ್ರಿಯಾದ ಡಿ.ಕೆ.ಶಿವಕುಮಾರ್ ರವರು ಯಾವುದೇ ಆದೇಶಗಳಿಗೆ ಮನ್ನಣೆ ನೀಡದೇ ರಾಜ್ಯದಲ್ಲಿಯೇ ಕುಡಿಯಲು ನೀರು ಇಲ್ಲದ ಸಂಧರ್ಭದಲ್ಲಿ ತಮಿಳುನಾಡು ಬೆಳೆಗೆ ನೀರು ಬಿಡಲು ಸಾಧ್ಯವಿಲ್ಲ ಖಡಾಖಂಡಿತ'ವಾಗಿ ಅವರಿಗೆ ಉತ್ತರ ನೀಡಬೇಕು , ಇಲ್ಲದಿದ್ದರೆ ಮುಂದಿನ' ದಿನಗಳಲ್ಲಿ ನಿಮ್ಮ ಸರ್ಕಾರವನ್ನು ಸಹಾ ಕಿತ್ತೊಗೆಯಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಬರದಿಂದಾಗಿ ರೈತರು ನೀರಿಲ್ಲದೇ ಸಂಕಷ್ಟ ಅನುಭವಿಸುತ್ತಿದ್ದರೂ, ಅಧಿಕಾರಕ್ಕಾಗಿ ದೆಹಲಿಯಲ್ಲಿ ಸೇರಿರುವ ಶಾಸಕರು ನಿಮ್ಮಗೆ ನಾಚಿಕೆ, ಮಾನ ಇದ್ದರೇ ಕೂಡಲೇ ರಾಜ್ಯಕ್ಕೆ ವಾಪಸ್ಸು ಬಂದು ನಿಮ್ಮ ನಿಮ್ಮ ಕ್ಷೇತ್ರಗಳಿಗೆ ಹೋಗಿ ಬರದ ಬಗ್ಗೆ ಪರಿಶೀಲನೆ ನಡೆಸಿ , ಎಲ್ಲೆಲ್ಲಿ ಬೆಳೆ ನಷ್ಟವಾಗಿದೆ ಅಂತಹವರಿಗೆ ಎಕ್ಟೆರ್‌ಗೆ 50 ಸಾವಿರ ಪರಿಹಾರ ಘೋಷಣೆ ಮಾಡಬೇಕು. ಇಲ್ಲವಾದರೇ ರೈತರ ಪರಿಸ್ಥಿತಿ ಶೋಚನೆಯಾಗಲಿದೆ. ನಮ್ಮ ಜಿಲ್ಲೆಯಲ್ಲಿ ಕುಡಿಯಲು ನೀರಿಲ್ಲ, ಕೆರೆಕಟ್ಟೆಗಳೆಲ್ಲ ಒಣಗಿ ಹೋಗಿರುವುದ್ದರಿಂದ ಅಂತರ್ಜಲ ಹೆಚ್ಚಲು ಹಾಗೂ ದನ, ಕರು, ಜಾನುವಾರುಗಳಿಗೆ ಅನುಕೂಲವಾಗಲು ಕಬಿನಿ ಜಲಾಶಯದಿಂದ ಕೂಡಲೇ ನೀರು ಬಿಡಿಸಬೇಕು. ಇಲ್ಲದಿದ್ದರೆ ಕಬಿನಿ ಜಲಾಶಯಕ್ಕೆ ನಮ್ಮ ಸಂಘಟನೆಯ ವತಿಯಿಂದ ಮುತ್ತಿಗೆ ಹಾಕಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮುಡಿಗುಂಡಂ ಸೇತುವೆ ಬಳಿ ನಡೆದ ಪ್ರತಿಭಟನೆಯಲ್ಲಿ ಜಿಲ್ಲಾ ಗೌರವಾಧ್ಯಕ್ಷ ಶಿವಮಲ್ಲು, ತಾಲ್ಲೂಕು ಅಧ್ಯಕ್ಷ ನಟೇಶ್, ಜಿಲ್ಲಾ ಉಪಾಧ್ಯಕ್ಷ ರವಿನಾಯ್ಡು, ಹನೂರು ತಾಲ್ಲೂಕು ಅಧ್ಯಕ್ಷ ರಾಜಣ್ಣ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅಮ್ಜಾದ್ ಖಾನ್, ಹಸಿರು ಸೇನೆ ಅಧ್ಯಕ್ಷ ಕುಮಾರ್ ಚಿಕ್ಕಲ್ಲೂರು, ಕೂಡ್ಲೂರು ವೆಂಕಟೇಶ್, ರಾಜಣ್ಣ, ಮಸಣಶೆಟ್ಟಿ, ಕುಮಾರ್, ದೊಡ್ಡಯ್ಯ, ಪರಮೇಶ್, ಶಿವರಾಜು, ಮಾದೇಶ್, ಮೋಳೆ ವೆಂಕಟೇಶ್, ಸಿದ್ದಶೆಟ್ಟಿ, ತಾಂಡವಮೂರ್ತಿ ಹಾಗೂ ಇತರರು ಇದ್ದರು.

ವೈದ್ಯ ಸೇವಾರತ್ನ ಪ್ರಶಸ್ತಿ ಪ್ರಧಾನ



ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು ಯೂನಿವರ್ಸಿಟಿ ಆವರಣದ ಕಲಾಗ್ರಾಮದಲ್ಲಿ ಕರ್ನಾಟಕ ಮೀಡಿಯಾ ಕ್ಲಬ್ ಆಯೋಜಿಸಿದ್ದ ಗ್ರಾಮೀಣ ಪ್ರದೇಶದಲ್ಲಿ ಸೇವಾ ಮನೋಭಾವದಿಂದ ಸೇವೆ ಸಲ್ಲಿಸುತ್ತಿರುವ ಖ್ಯಾತ ವೈದ್ಯರುಗಳನ್ನು ಗುರುತಿಸಿ ನೀಡಲಾಗುವ ವೈದ್ಯ ಸೇವಾ ಪ್ರಶಸ್ತಿಯನ್ನು ಬಿಡದಿಯ ಸುಭಾಷ್ ಆಸ್ಪತ್ರೆಯ ಖ್ಯಾತ ವೈದ್ಯರಾದ ಡಾ. ಸುಭಾಷ್ ಚಂದ್ರ ರವರಿಗೆ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಖ್ಯಾತ ಮನರೋಗ ತಜ್ಞ ಪದ್ಮ ಪುರಸ್ಕೃತ ಡಾ ಸಿ ಆರ್ ಚಂದ್ರಶೇಖರ್ ವೈದ್ಯರುಗಳು ಹಣದ ದಾಹಕ್ಕೆ ಒಳಗಾಗದೆ ನಿಶ್ವಾರ್ಥ ಮನೋಭಾವದಿಂದ ಸೇವೆ ಸಲ್ಲಿಸಿ ಸಂತೃಪ್ತಿ ಹೊಂದಬೇಕೆಂದು ವೈದ್ಯರುಗಳಿಗೆ ಕಿವಿ ಮಾತು ಹೇಳಿದರು ಹಾಗೆಯೇ ಮತ್ತೋರ್ವ ಖ್ಯಾತ ವೈದ್ಯ ಡಾಕ್ಟರ್ ಟಿಹೆಚ್ ಆಂಜನಪ್ಪ ವೈದ್ಯರುಗಳ ಜವಾಬ್ದಾರಿಗಳ ಬಗ್ಗೆ ವಿವರವಾಗಿ ವಿವರಿಸಿದರು ಈ ಸಂದರ್ಭದಲ್ಲಿ ಖ್ಯಾತ ಹೋಮಿಯೋಪತಿ ವೈದ್ಯ ಡಾಕ್ಟರ್ ಬಿ ಟಿ ರುದ್ರೇಶ್ ಸಹ ಮಾತನಾಡಿದರು, ಹಾಗೆಯೇ ಪಾಲನಹಳ್ಳಿ ಶನೇಶ್ವರ ಮಠದ ಶ್ರೀ ಶ್ರೀ ಶ್ರೀ ಸಿದ್ದರಾಜು ಸ್ವಾಮೀಜಿ ಆಯುರ್ವೇದ ಪದ್ಧತಿಯ ಔಷಧೋಪಚಾರದ ಬಗ್ಗೆ ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಕರ್ನಾಟಕ ಮೀಡಿಯಾ ಕ್ಲಬ್ ವತಿಯಿಂದ ಆಯೋಜಕರಾದ ಕಾರ್ಯದರ್ಶಿ ಎಸ್ ಗಂಗಾಧರ್ ಹಾಗೂ ಅಧ್ಯಕ್ಷರಾದ ರಮೇಶ್ ಎಸ್ ಜಿ ಹಾಗೂ ಸುಭಾಷ್ ಆಸ್ಪತ್ರೆಯ ಖ್ಯಾತ ವೈದ್ಯ ಡಾಕ್ಟರ್ ದರ್ಶನ್ ಸುಭಾಷ್ ಹಾಗೂ ಸಿಬ್ಬಂದಿ ವರ್ಗ ಹಾಗೂ ಸ್ನೇಹಿತ ವರ್ಗ ಹಾಜರಿದ್ದರು.

ಅಬ್ಬರಿಸಿರುವ ರಾವಣನಿಗೆ(ಯಶ್‌ಗೆ) ಹಾರರ್' ಸಿನಿಮಾಗಳಂದ್ರೆ ಭಯ.....!

ಸೂರ್ಯಪ್ರಗತಿನ್ಯೂಸ್.ಕಾಂ

ಕೆಜಿಎಫ್' ಮೂಲಕ ದೇಶಾದ್ಯಂತ ಅಭಿಮಾನಿಗಳ ಮನ ಗೆದ್ದಿರುವ ರಾಕಿಂಗ್ ಸ್ಟಾರ್ ಯಶ್, ಈಗ 'ರಾಮಾಯಣ' ಸಿನಿಮಾದಲ್ಲಿ ರಾವಣನಾಗಿ ಅಬ್ಬರಿಸಲು ಸಜ್ಜಾಗಿದ್ದಾರೆ. ಇತ್ತೀಚೆಗೆ ಬಿಡುಗಡೆಯಾದ ಚಿತ್ರದ ಟ್ರೇಲರ್‌ನಲ್ಲಿ ಅವರ ಲುಕ್ ಮತ್ತು ಸ್ಕ್ರೀನ್ ಪ್ರೆಸೆನ್ಸ್‌ಗೆ ಅಭಿಮಾನಿಗಳು ಫಿದಾ ಆಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಯಶ್ ಹೆಸರೇ ಟ್ರೆಂಡ್ ಆಗಿದೆ. ಆದರೆ ಇದೇ ಯಶ್‌ಗೆ ಒಂದು ಸಿನಿಮಾ ಜಾನರ್ ಮಾತ್ರ ಇಷ್ಟವಿಲ್ಲ ಎಂಬ ವಿಚಾರ ಈಗ ಮತ್ತೆ ವೈರಲ್ ಆಗಿದೆ.

ಹೌದು, ಆಕ್ಷನ್ ಪಾತ್ರಗಳಲ್ಲಿ ಮಿಂಚುವ ಯಶ್‌ಗೆ ಹಾರರ್ ಸಿನಿಮಾಗಳನ್ನು ನೋಡುವುದು ಇಷ್ಟವಿಲ್ಲ. ಈ ವಿಷಯವನ್ನು ಅವರು ಸಂದರ್ಶನವೊಂದರಲ್ಲಿ ಸ್ಪಷ್ಟಪಡಿಸಿದ್ದರು. ಆದರೆ ಇದರಿಂದ ತಾವು ಹಾರರ್ ಸಿನಿಮಾಗಳಲ್ಲಿ ನಟಿಸುವುದಿಲ್ಲ ಎಂದರ್ಥವಲ್ಲ ಎಂದೂ ಅವರು ಹೇಳಿದ್ದರು.

'ಭಯಪಡುವುದು ನನಗೆ ಇಷ್ಟವಿಲ್ಲ'

ಹಾರರ್ ಸಿನಿಮಾಗಳ ಬಗ್ಗೆ ಮಾತನಾಡಿದ್ದ ಯಶ್, "ನಾನು ಎಲ್ಲಾ ರೀತಿಯ ಸಿನಿಮಾಗಳನ್ನು



ನೋಡುತ್ತೇನೆ. ಆದರೆ ಹಾರರ್ ಸಿನಿಮಾಗಳನ್ನು ಮಾತ್ರ ಹೆಚ್ಚಾಗಿ ನೋಡುವುದಿಲ್ಲ. ಸಿನಿಮಾ ನೋಡಲು ಹೋಗುವುದು ಮನರಂಜನೆಗಾಗಿ. ಭಯಪಟ್ಟು ಹೊರಬರುವುದು ನನಗೆ ಇಷ್ಟವಿಲ್ಲ. ಹಾರರ್ ಸಿನಿಮಾ ನೋಡಿದಾಗ ವಿಚಿತ್ರ ಅನುಭವವಾಗುತ್ತದೆ. ಅದಕ್ಕಾಗಿಯೇ ಆ ಜಾನರ್‌ನಿಂದ ಸ್ವಲ್ಪ ದೂರ ಇರುತ್ತೇನೆ," ಎಂದು ಹೇಳಿದ್ದರು.

ಅದೇ ವೇಳೆ, ಉತ್ತಮ ಕಥೆ ಸಿಕ್ಕರೆ ಹಾರರ್ ಸಿನಿಮಾದಲ್ಲಿ ನಟಿಸಲು ಯಾವುದೇ ಹಿಂಜರಿಕೆ ಇಲ್ಲ ಎಂದೂ ಅವರು ಸ್ಪಷ್ಟಪಡಿಸಿದ್ದರು. "ನಟನಾಗಿ ನನಗೆ ಯಾವುದೇ ಜಾನರ್ ಬಗ್ಗೆ ಭಯವಿಲ್ಲ. ಕಥೆ ಮತ್ತು ಪಾತ್ರ ಇಷ್ಟವಾದರೆ ಹಾರರ್ ಸಿನಿಮಾದಲ್ಲೂ ಖಂಡಿತ ನಟಿಸುತ್ತೇನೆ. ನಾನು ನೋಡುವುದನ್ನು ಇಷ್ಟಪಡುವುದಿಲ್ಲ ಅಷ್ಟೇ ಹೊರತು, ನಟಿಸುವುದಕ್ಕೆ ಯಾವುದೇ ವಿರೋಧವಿಲ್ಲ," ಎಂದು ಯಶ್ ತಿಳಿಸಿದ್ದರು.

ಆಕ್ಷನ್ ಸಿನಿಮಾಗಳೇ ಫೇವರಿಟ್

ಆಕ್ಷನ್ ಸಿನಿಮಾಗಳ ಬಗ್ಗೆ ಮಾತನಾಡಿದ ಯಶ್, "ಯಾವಾಗ ಬೇಕಾದರೂ ಆಕ್ಷನ್ ಸಿನಿಮಾ ನೋಡಲು ನಾನು ಸಿದ್ಧ. ಆ ರೀತಿಯ ಸಿನಿಮಾಗಳು ನನಗೆ ತುಂಬಾ ಇಷ್ಟ. ಹಾರರ್ ಹೊರತುಪಡಿಸಿ ಉಳಿದ ಎಲ್ಲ ಜಾನರ್‌ಗಳ ಸಿನಿಮಾಗಳನ್ನೂ ಆಸ್ವಾದಿಸುತ್ತೇನೆ," ಎಂದಿದ್ದರು.

'ರಾಮಾಯಣ' ಟ್ರೇಲರ್‌ಗೆ ಭರ್ಜರಿ ಪ್ರತಿಕ್ರಿಯೆ ಸದ್ಯ ಯಶ್ ಅಭಿನಯದ 'ರಾಮಾಯಣ: ಭಾಗ 1' ಚಿತ್ರದ ಟ್ರೇಲರ್ ದೇಶ-ವಿದೇಶಗಳಲ್ಲಿ ಭಾರೀ ಸದ್ದು ಮಾಡುತ್ತಿದೆ. ನಿರ್ದೇಶಕ ನಿತೇಶ್ ತಿವಾರಿ ನಿರ್ದೇಶನದ ಈ ಪೌರಾಣಿಕ ಚಿತ್ರದಲ್ಲಿ ಯಶ್ ಲಂಕಾಧಿಪತಿ ರಾವಣನಾಗಿ ಕಾಣಿಸಿಕೊಂಡಿದ್ದು, ಅವರ ಪಾತ್ರದ ಮೊದಲ ಝಲಕ್‌ಗೇ ಸಿನಿಪ್ರಿಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಚಿತ್ರದಲ್ಲಿ ರಣ್‌ಬೀರ್ ಕಪೂರ್ ರಾಮನಾಗಿ, ಸಾಯಿ ಪಲ್ಲವಿ ಸೀತೆಯಾಗಿ,



ಸನ್ನಿ ಡಿಯೋಲ್ ಹನುಮಂತನಾಗಿ ಹಾಗೂ ರವಿ ದುಬೆ ಲಕ್ಷ್ಮಣನಾಗಿ ನಟಿಸಿದ್ದಾರೆ.

ಹಾಲಿವುಡ್‌ನ ಖ್ಯಾತ ಸಂಗೀತ ನಿರ್ದೇಶಕ ಹ್ಯಾನ್ಸ್ ಜಿಮ್ಮರ್ ಹಾಗೂ ಆಸ್ಕರ್ ವಿಜೇತ ಎ.ಆರ್. ರೆಹಮಾನ್ ಸಂಗೀತ ನೀಡಿರುವುದು ಚಿತ್ರದ ಮತ್ತೊಂದು ವಿಶೇಷ. ಇನ್ನು ಯಶ್ ಅಭಿನಯದ ಮತ್ತೊಂದು ಬಹುನಿರೀಕ್ಷಿತ ಸಿನಿಮಾ 'ಟಾಕ್ಸಿಕ್: ಎ ಫೇರಿ ಟೇಲ್ ಫಾರ್ ಗ್ರೋನ್-ಅಪ್ಸ್' ಕೂಡ ಬಿಡುಗಡೆಯ ನಿರೀಕ್ಷೆಯಲ್ಲಿದ್ದು, ಈ ಎರಡು ಸಿನಿಮಾಗಳ ಮೂಲಕ ಯಶ್ ಮತ್ತೊಮ್ಮೆ ಭಾರತೀಯ ಚಿತ್ರರಂಗದಲ್ಲಿ ಹೊಸ ದಾಖಲೆ ಬರೆಯುವ ವಿಶ್ವಾಸ ಅಭಿಮಾನಿಗಳಲ್ಲಿದೆ.

ತಮಿಳುನಾಡಿನಿಂದ ಜಲ್ಲಿ, ಕಲ್ಲು ಪೂರೈಕೆ ಸ್ಥಗಿತ: ಅತ್ತಿಬೆಲೆಯಲ್ಲಿ ಟಿಪ್ಪರ್, ಲಾರಿ ಮಾಲೀಕರ ಪ್ರತಿಭಟನೆ

ಅತ್ತಿಬೆಲೆ: ತಮಿಳುನಾಡಿನಿಂದ ಕರ್ನಾಟಕಕ್ಕೆ ಸರಬರಾಜಾಗುತ್ತಿದ್ದ ಜಲ್ಲಿ, ಕಲ್ಲು ಹಾಗೂ ಇತರೆ ಕಲ್ಲಿನ ಉತ್ಪನ್ನಗಳ ಪೂರೈಕೆಯನ್ನು ತಮಿಳುನಾಡು ಸರ್ಕಾರ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿರುವುದನ್ನು ಖಂಡಿಸಿ, ಟಿಪ್ಪರ್ ಲಾರಿ ಮಾಲೀಕರ ಸಂಘ, ಆರ್‌ಎಂಸಿ ಲಾರಿ ಮಾಲೀಕರ ಸಂಘ ಹಾಗೂ ಹಾಲೋ ಬ್ಲಾಕ್ ಲಾರಿ ಮಾಲೀಕರ ಸಂಘಗಳ ಒಕ್ಕೂಟದ ವತಿಯಿಂದ' ಅತ್ತಿಬೆಲೆ ಗಡಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ತಮಿಳುನಾಡಿನಿಂದ ಕಲ್ಲು ಮತ್ತು ಜಲ್ಲಿ ಪೂರೈಕೆ ಸ್ಥಗಿತ' ಗೊಂಡಿರುವುದರಿಂದ ಬೆಂಗಳೂರು ಸೇರಿದ'ಂತೆ ಗಡಿ ಭಾಗದ ಜಿಲ್ಲೆಗಳಲ್ಲಿ



ನಡೆಯುತ್ತಿರುವ ನಿರ್ಮಾಣ ಕಾಮಗಾರಿಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಅಲ್ಲದೆ, ಟಿಪ್ಪರ್ ಹಾಗೂ ಲಾರಿ ಮಾಲೀಕರು ಮತ್ತು ಈ ಉದ್ಯಮವನ್ನು ಅವಲಂಬಿಸಿರುವ ಕಾರ್ಮಿಕರು ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನಾಕಾರರು ಆತಂಕ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಟಿಪ್ಪರ್ ಲಾರಿ ಮಾಲೀಕರ ಸಂಘದ ಮುಖ್ಯಸ್ಥರಾದ ಆರ್. ಗೋಪಾಲ್ ರೆಡ್ಡಿ ಹಾಗೂ ಎಸ್.ವಿ. ಟಿ. ಲೋಕೇಶ್ ರೆಡ್ಡಿ, ಕರ್ನಾಟಕದ ಟಿಪ್ಪರ್ ಮತ್ತು ಲಾರಿ ಮಾಲೀಕರು ಕಾನೂನುಬದ್ಧವಾಗಿ ತಮಿಳುನಾಡು ಸರ್ಕಾರಕ್ಕೆ ಅಗತ್ಯವಿರುವ ರಾಯಲ್ಟಿ ಸೇರಿದಂತೆ ತೆರಿಗೆಗಳನ್ನು ಪಾವತಿಸಿ ಜಲ್ಲಿ, ಕಲ್ಲು ಹಾಗೂ ಇತರೆ ಕಲ್ಲಿನ ಉತ್ಪನ್ನಗಳನ್ನು ಕರ್ನಾಟಕಕ್ಕೆ ಸಾಗಿಸುತ್ತಿದ್ದಾರೆ. ಆದರೆ, ಯಾವುದೇ ಮುನ್ಸೂಚನೆ ಇಲ್ಲದೆ ಪೂರೈಕೆ ಸ್ಥಗಿತಗೊಳಿಸಿರುವುದರಿಂದ ನೂರಾರು ಟಿಪ್ಪರ್ ಹಾಗೂ ಲಾರಿ ಮಾಲೀಕರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ತಮಿಳುನಾಡಿನಿಂದ ಕಲ್ಲಿನ ಉತ್ಪನ್ನಗಳ ಪೂರೈಕೆ ಸ್ಥಗಿತ'ದಿಂದ ನಿರ್ಮಾಣ ಕ್ಷೇತ್ರದ ಮೇಲೂ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ಆದ್ದರಿಂದ ಕರ್ನಾಟಕದ ಮುಖ್ಯಮಂತ್ರಿ ಅವರು ತಮಿಳುನಾಡು ಮುಖ್ಯಮಂತ್ರಿಗಳೊಂದಿಗೆ ತಕ್ಷಣ ಮಾತುಕತೆ ನಡೆಸಿ, ಸಮಸ್ಯೆಯನ್ನು ಬಗೆಹರಿಸಿ ಕರ್ನಾಟಕಕ್ಕೆ ಜಲ್ಲಿ, ಕಲ್ಲು ಹಾಗೂ ಇತರೆ ಕಲ್ಲಿನ ಉತ್ಪನ್ನಗಳ ಪೂರೈಕೆ ಪುನರಾರಂಭವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಅದ್ದೂರಿಯಾಗಿ ಆರಂಭಗೊಂಡ 23ನೇ ವರ್ಷದ ಗ್ರಾಮ ದೇವತೆಗಳ ಉತ್ಸವ

ಆನೇಕಲ್ ವಿಧಾನಸಭಾ ಕ್ಷೇತ್ರದ ಅತ್ತಿಬೆಲೆಯಲ್ಲಿ 23ನೇ ವರ್ಷದ ಗ್ರಾಮ ದೇವತೆಗಳ ಉತ್ಸವ ಹಾಗೂ ಅಣ್ಣಮ್ಮ ದೇವಿಯ ಊರ ಹಬ್ಬಕ್ಕೆ ಅದ್ದೂರಿ ಚಾಲನೆ ದೊರೆತಿದೆ.



ಜುಲೈ 30ರಿಂದ ಆಗಸ್ಟ್ 3ರವರೆಗೆ ಗ್ರಾಮಸ್ಥರ ಸಮ್ಮುಖದಲ್ಲಿ ಶ್ರದ್ಧಾಭಕ್ತಿಯಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಇದರ ಅಂಗವಾಗಿ ಇಂದು ಬೆಂಗಳೂರು ನಗರ ದೇವತೆಯಾದ ಅಣ್ಣಮ್ಮ ದೇವಿಯ ಉತ್ಸವ ಮೂರ್ತಿಯನ್ನು ಶಾಸ್ತ್ರೋಕ್ತವಾಗಿ ಅತ್ತಿಬೆಲೆಗೆ ಕರೆತರಲಾಯಿತು.

ಅಣ್ಣಮ್ಮ ದೇವಿಯ ಉತ್ಸವ ಮೂರ್ತಿ ಅತ್ತಿಬೆಲೆಗೆ ಆಗಮಿಸುತ್ತಿದ್ದಂತೆ ಮಹಿಳೆಯರು ಹಾಗೂ ಗ್ರಾಮಸ್ಥರು ಆರತಿ ಬೆಳಗಿ, ಪೂರ್ಣಕುಂಭದೊಂದಿಗೆ ಭವ್ಯ ಸ್ವಾಗತ ಕೋರಿದರು. ಬಳಿಕ ಅಣ್ಣಮ್ಮ ದೇವಿಯ ಉತ್ಸವ ಮೂರ್ತಿಯನ್ನು ಪೂರ್ಣಕುಂಭ ಹಾಗೂ ಕಳಸದೊಂದಿಗೆ ಮೆರವಣಿಗೆ ಮೂಲಕ ಅತ್ತಿಬೆಲೆ ಪಟಾಲಮ್ಮ ದೇವಾಲಯದವರೆಗೆ ಕರೆದೊಯ್ಯಲಾಯಿತು.ನಂತರ ಪಟಾಲಮ್ಮ ದೇವಾಲಯದ ಆವರಣದಲ್ಲಿ ಅಣ್ಣಮ್ಮ ದೇವಿಯ ಉತ್ಸವ ಮೂರ್ತಿಯನ್ನು ಶಾಸ್ತ್ರೋಕ್ತವಾಗಿ ಪ್ರತಿಷ್ಠಾಪಿಸಲಾಯಿತು. ಇದೇ ವೇಳೆ ಗ್ರಾಮ ದೇವತೆಗಳ ಉತ್ಸವ ಮೂರ್ತಿಗಳನ್ನೂ ಸಹ ವಿಧಿವಿಧಾನಗಳೊಂದಿಗೆ ಪ್ರತಿಷ್ಠಾಪಿಸಲಾಯಿತು.

ಕಾರ್ಯಕ್ರಮದಲ್ಲಿ ಅಣ್ಣಮ್ಮ ದೇವಿ ಸೇವಾ ಸಮಿತಿ, ಪಟಾಲಮ್ಮ ದೇವಿ ಸೇವಾ ಸಮಿತಿ ಹಾಗೂ ಮಾರಮ್ಮ ದೇವಿ ಸೇವಾ ಸಮಿತಿಯ ಪದಾಧಿಕಾರಿಗಳು, ಗ್ರಾಮಸ್ಥರು ಮತ್ತು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಸರ್ಕಾರಿ ಆಸ್ಪತ್ರೆಗೆ ಬಂದ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಿದ್ದೇನೆ

(ವರದಿ:-ಸಂತೋಷ ಗುಬ್ಬಿ)

ಸೂರ್ಯಪ್ರಗತಿನ್ಯೂಸ್.ಕಾಂ

ಗುಬ್ಬಿ:- ಒಂದು ವರ್ಷ ಐದು ತಿಂಗಳು ಸೇವೆ ಸಲ್ಲಿಸಿ ವರ್ಗಾವಣೆಗೊಂಡ ಕೀಲು ಮತ್ತು ಮೂಳೆ ತಜ್ಞರಾದ ಡಾ!! ಜಗದೀಶ್ ರವರಿಗೆ ಬೀಳ್ಕೊಡುಗೆ ಸಮಾರಂಭ

ತಾಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಒಂದು ವರ್ಷ ಐದು ತಿಂಗಳು ಸೇವೆ ಸಲ್ಲಿಸಿ ಜನಮನ್ನಣೆ ಪಡೆದು ಹಾಸನ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಯಾಗಿ ವರ್ಗಾವಣೆ ಹೊಂದಿರುವ ಕೀಲು ಮತ್ತು ಮೂಳೆ ತಜ್ಞರಾದ ಡಾ!! ಜಗದೀಶ್ ರವರಿಗೆ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಸನ್ಮಾನಿಸಿ ಗೌರವಿಸಲಾಯಿತು.

ನಂತರ ಮಾತನಾಡಿದ ಡಾ!! ಜಗದೀಶ್ ರವರು ತುಮಕೂರು ಜಿಲ್ಲೆಯ ಗುಬ್ಬಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸಿರುವುದು ನನಗೆ ತೃಪ್ತಿ ತಂದಿದೆ. ಹಾಸನ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಯಾಗಿ ಹೆಚ್ಚಿನ ಜವಾಬ್ದಾರಿ ನನ್ನದಾಗಿದೆ ಹಾಗಾಗಿ ಮುಂಬರುವ ದಿನಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸಹಾಯ ಮಾಡುತ್ತೇನೆ.. ಅದೇ ರೀತಿ ಆಸ್ಪತ್ರೆಗೆ ಬಂದ ರೋಗಿಗಳಿಗೆ



ಉತ್ತಮ ಚಿಕಿತ್ಸೆ ನೀಡಿದ್ದೇನೆ ಹಾಗೂ ನನ್ನ ಸೇವಾ ಅವಧಿಯಲ್ಲಿ ಬಡ ಕುಟುಂಬಗಳಿಗೆ ಹಣ ಸಹಾಯ ಹಾಗೂ ವಿಶೇಷ ಚೇತನರು ಹಾಗೂ ವಯೋ ವೃದ್ಧರಿಗೆ ವಿಶೇಷವಾಗಿ ಸಹಾಯ ಹಸ್ತ ಹಾಗೂ ಸರ್ಕಾರದ ಸೇವೆಯ ಬಗ್ಗೆ ತಿಳಿಸಿದ್ದೇನೆ ಆಸ್ಪತ್ರೆಗೆ ಬಂದಂತಹ ರೋಗಿಗಳಿಗೆ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇದ್ದಲ್ಲಿ ಸಹಕಾರ ನೀಡಿದ್ದೇನೆ ಎಂದರು.

ಗ್ರಾಮೀಣ ಭಾಗಗಳಿಂದ ಅಪಘಾತಕ್ಕೆ ಒಳಗಾಗಿ ಚಿಕಿತ್ಸೆಗೆ ಬಂದಾಗ ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇದ್ದಂತ ಸಂದರ್ಭದಲ್ಲಿ ಹಣದ ಸಹಾಯ ಮಾಡಿ ಇತರೆ ವೈದ್ಯರ ಸಲಹೆಯನ್ನು ಸೂಚಿಸಿದ್ದೇನೆ.

ನಾನು ರೋಗಿಗಳಿಗೆ ಕೊಟ್ಟ ಪ್ರೀತಿ ನನ್ನ ವರ್ಗಾವಣೆ ಸುದ್ದಿ ತಿಳಿದು ರೋಗಿಗಳು ಹಾಗೂ ಸಾರ್ವಜನಿಕರು ನನಗೆ ಸನ್ಮಾನಿಸಿ ಗೌರವಿಸಿರುವುದು ಸಂತೋಷವಾಗಿದೆ ನನಗೆ ಗೌರವಿಸಿ ಸನ್ಮಾನಿಸಿದ ಎಲ್ಲರಿಗೂ ಧನ್ಯವಾದಗಳು ತಿಳಿಸಿದ್ದಾರೆ.

ಜೊತೆಯಲ್ಲಿ ಸೇವೆ ಸಲ್ಲಿಸಿದ ವೈದ್ಯರ ಮಾತು ಆಸ್ಪತ್ರೆಗೆ ರೋಗಿಗಳು ಬಂದಂತಹ ಸಂದರ್ಭದಲ್ಲಿ ಪ್ರೀತಿ ವಿಶ್ವಾಸದಿಂದ ಮಾತನಾಡಿಸಿ ಉತ್ತಮ ಚಿಕಿತ್ಸೆ ನೀಡುವುದರ ಜೊತೆಗೆ ಎಲ್ಲರ ವಿಶ್ವಾಸ' ಪಡೆಯುತ್ತಿದ್ದರು. ಅದೇ ರೀತಿ ನಮ್ಮಗಳ ಜೊತೆಯಲ್ಲಿ ಸಂತೋಷವಾಗಿ ದಿನ ಕಳೆಯುತ್ತಿದ್ದರು ಹಾಸನ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಯಾಗಿ ವರ್ಗಾವಣೆಗೊಂಡಿರುವುದು ಸಂತೋಷಕರವಾಗಿದೆ ಅವರ ಮುಂಬರುವ ದಿನಗಳು ಸಂತೋಷವಾಗಿರಲಿ ಎಂದು ಹಾರೈಸುತ್ತೇವೆ.

'ಮನುಷ್ಯ ತನ್ನನ್ನು ತಾನು ತಿಳಿಯುವ ಪ್ರಯತ್ನ ಮಾಡಬೇಕು'

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಉನ್ನತಿಯ ಜೀವನ ಸಾಧ್ಯವಾಗಬೇಕೆಂದರೆ ಮನುಷ್ಯ ತನ್ನನ್ನು ತಾನು ತಿಳಿಯುವ ಪ್ರಯತ್ನ ಮಾಡಬೇಕು. ಸ್ವಧ್ಯಾಯ ಪ್ರತಿಯೊಂದು ಜೀವಿಗೂ ಅವಶ್ಯಕ ಎಂದು ಆಚಾರ್ಯಶ್ರೀ 108 ಪ್ರಮುಖ್ ಸಾಗರ್‌ಜೀ ಮಹಾರಾಜ್ ಸ್ವಾಮೀಜಿ ಸಂದೇಶ ನೀಡಿದರು.

ಚಾತುರ್ಮಾಸ ಕಳಸ ಸ್ಥಾಪನೆ ಅಂಗವಾಗಿ ಶುಕ್ರವಾರ ನಗರದ ಜೈನ ಭವನದಲ್ಲಿ ನಡೆದ ವೀರ ಶಾಸನ ಜಯಂತಿ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಅವರು, ಜೈನ ಧರ್ಮವು ಎಲ್ಲಾ ಜೀವಿಗಳ ಕಲ್ಯಾಣ ಬಯಸುತ್ತದೆ. ಅಹಿಂಸೆ, ಪರಸ್ಪರ ಶಾಂತಿ, ಸೌಹಾರ್ದಯುತ ಜೀವನ ಜೈನಧರ್ಮದ ಸಂದೇಶವಾಗಿದೆ ಎಂದು ತಿಳಿಸಿದರು.



24ನೇ ತೀರ್ಥಂಕರರಾದ ಮಹಾವೀರರ ಉಪದೇಶ ಅನುಷ್ಠಾನಗೊಂಡ ದಿನವನ್ನು ವೀರಶಾಸನ ದಿವಸನ್ನಾಗಿ ಆಚರಿಸುತ್ತಿದ್ದೇವೆ. ಪ್ರತಿಯೊಂದು ಜೀವಿಗೂ ಮಹಾವೀರರ ಸಂದೇಶಗಳು ಪ್ರಸ್ತುತ ದಿನಕ್ಕೂ ಅನ್ವಯವಾಗುತ್ತವೆ. ಸರ್ವಜೀವಿಯ ಒಳಿತಿಗೆ ಮಹಾವೀರರ ಸಾರ್ವಕಾಲಿಕ ಸಂದೇಶಗಳನ್ನು ಸಮಾಜದ ಪ್ರತಿಯೊಬ್ಬರೂ ಪಾಲನೆ ಮಾಡಿದರೆ ಎಲ್ಲರೂ ಶಾಂತಿ, ನೆಮ್ಮದಿಯಿಂದ ಬಾಳಲು ಸಾಧ್ಯವಾಗುತ್ತದೆ ಎಂದರು.

ಇದಕ್ಕೂ ಮೊದಲು ನಗರದ ಚಿಕ್ಕಪೇಟೆಯ ಜಿನ ಮಂದಿರ' ದಿಂದ ಜೈನ್ ಭವನ'ದವರೆಗೆ ಸಾಗರ್ ಜಿ, ಮಹಾರಾಜ ಸ್ವಾಮೀಜಿಗಳ ನೇತೃತ್ವದಲ್ಲಿ ಧ್ವಜಾ ಶೋಭಾಯಾತ್ರೆ ವೈಭವದಿಂದ ನಡೆಯಿತು. ಸಮಾಜದ ಹಲವು ಗಣ್ಯರು ಶೋಭಾಯಾತ್ರೆಯಲ್ಲಿ ಭಾಗವಹಿಸಿದ್ದರು. ಭಕ್ತರು 500ಕ್ಕೂ ಹೆಚ್ಚು ಧ್ವಜಗಳ ಪ್ರದರ್ಶನದೊಂದಿಗೆ ಆಗಮಿಸಿದರು.

ತುಮಕೂರು ನಗರಕ್ಕೆ ಚಿರತೆ ಬಂದಿದೆಯಂತೆ ಎಚ್ಚರ



ತುಮಕೂರು ನಗರದ ದೇವರಾಯಪಟ್ಟಣ ಮತ್ತು ಎಚ್ ಎಮ್ ಟಿ ಭಾಗದಲ್ಲಿ ಚಿರತೆಯೊಂದು ಕಂಡು ಬಂದಿದ್ದು ಎಚ್ ಎಮ್ ಟಿ ಕಾಂಪೌಂಡ್ ಒಳಗೆ ಒಂದು ಕುರಿಯನ್ನು ಕೊಂದಿರುತ್ತದೆ ಎಂಬ ಮಾಹಿತಿ ಇದೆ ಹೀಗಾಗಿ ಸಾರ್ವಜನಿಕರು ಮತ್ತು ಮಕ್ಕಳ ಭದ್ರತಾ ದೃಷ್ಟಿಯಿಂದ ಅರಣ್ಯ ಇಲಾಖೆಗೆ ಮಾಹಿತಿ ನೀಡಲಾಗಿದ್ದು ದೇವರಾಯಪಟ್ಟಣದ ಆಂಜನೇಯ ದೇವಸ್ಥಾನದ ಹತ್ತಿರ ಚಿರತೆಯನ್ನು ಸೆರೆ ಹಿಡಿಯಲು ಬೋನ್ ಹಿಡಿಸಲಾಗಿರುತ್ತದೆ ಆದ್ದರಿಂದ ಸಾರ್ವಜನಿಕರು ಮತ್ತು ಮಕ್ಕಳು ರಾತ್ರಿ ವೇಳೆ ಜಾಗ್ರತೆಯಿಂದ ಓಡಾಡಬೇಕೆಂದು ಅರಣ್ಯ ಅಧಿಕಾರಿಗಳು ಮಾಹಿತಿಯಲ್ಲಿ ತಿಳಿಸಿದ್ದಾರೆ.

ಸಾಲದ ಬಾಧೆಯಿಂದ ಮನನೊಂದು ರೈತ ವಿಷ ಸೇವಿಸಿ ಆತ್ಮಹತ್ಯೆ

ಸೂರ್ಯಪ್ರಗತಿನ್ಯೂಸ್.ಕಾಂ




ಪಾವಗಡ: ಸಾಲ ತೀರಿಸಲು ಆಗದೆ ಮಾನಸಿಕ ನೊಂದಿದ್ದ ರೈತನೊಬ್ಬರು ವಿಷ ಸೇವಿಸಿ ಮೃತಪಟ್ಟ ಘಟನೆ ಪಾವಗಡ ತಾಲ್ಲೂಕಿನ ಹೊಟ್ಟೆ ಬೋಮ್ಮನಹಳ್ಳಿ ಗ್ರಾಮದಲ್ಲಿ ಗುರುವಾರ ತಡರಾತ್ರಿ ನಡೆದಿದೆ.

ಮೃತರನ್ನು ಹೊಟ್ಟೆ ಬೋಮ್ಮನಹಳ್ಳಿ ಗ್ರಾಮದ ಅಂಜೀನಪ್ಪ ಬಿನ್ ಸಣ್ಣಕದರಪ್ಪ, 70 ಎಂದು ಗುರುತಿಸಲಾಗಿದೆ. ಇವರು ಆದಿಕರ್ನಾಟಕ ಸಮುದಾಯಕ್ಕೆ ಸೇರಿದವರಾಗಿದ್ದು, ಕೃಷಿಯನ್ನೇ ನಂಬಿ ಜೀವನ ನಡೆಸುತ್ತಿದ್ದರು.

ಪೊಲೀಸ್ ಮಾಹಿತಿ ಪ್ರಕಾರ, ಅಂಜೀನಪ್ಪನವರು ಹಲವು ವರ್ಷಗಳ ಹಿಂದೆ ಕೊಡಿಗೇಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಿಂದ ರೂ. 50,000 ಸಾಲ ಪಡೆದಿದ್ದರು. ಸಾಲ ಮರುಪಾವತಿಗೆ ಆಗದೆ ಇದ್ದಿದ್ದರಿಂದ ಮಾನಸಿಕ ಒತ್ತಡದಲ್ಲಿದ್ದರು ಎನ್ನಲಾಗಿದೆ.

ಜು.30 ರಂದು ಸಂಜೆ ಮನೆಯಲ್ಲಿ ಅಸ್ವಸ್ಥರಾದ ಅವರನ್ನು ಕುಟುಂಬಸ್ಥರು ಮೊದಲು ಲಿಂಗದಹಳ್ಳಿ ಆಸ್ಪತ್ರೆಗೆ, ನಂತರ ಪಾವಗಡ ಸರ್ಕಾರಿ ಆಸ್ಪತ್ರೆಗೆ ಮತ್ತು ಹೆಚ್ಚಿನ ಚಿಕಿತ್ಸೆಗಾಗಿ ತುಮಕೂರು ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗ ಮಧ್ಯೆ ಜು.31 ರ ಬೆಳಗಿನ ಜಾವ 3 ಗಂಟೆ ಸುಮಾರಿಗೆ ಮೃತಪಟ್ಟರು. ಮೃತದೇಹವನ್ನು ಪಾವಗಡ ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ. ಈ ಸಂಬಂಧ ಮೃತರ ಪತ್ನಿ ಅಂಜೀನಮ್ಮ, 70 ಅವರು ಪಾವಗಡ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪೊಲೀಸರು U.D.R. No. 08/2026, ಕಲಂ 194 ಃಒಖಖ ರೀತ್ಯಾ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ. ಸರ್ಕಾರದಿಂದ ಸೂಕ್ತ ಪರಿಹಾರ ಮತ್ತು ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದು ಮೃತರ ಕುಟುಂಬಸ್ಥರು ಆಗ್ರಹಿಸಿದ್ದಾರೆ.

319 KAS ಹುದ್ದೆಗಳ ನೇಮಕಾತಿಗೆ ಅಧಿಸೂಚನೆ:



27ನೇ ಸಾಲಿನ ಕೆಎಎಸ್ ಸೇರಿದಂತೆ 319 ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗೆ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಆ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ಆಕಾಂಕ್ಷಿಗಳಿಗೆ ಗುಡ್ ನ್ಯೂಸ್ ನೀಡಲಾಗಿದೆ.

ಈ ಕುರಿತ ಸಂಪೂರ್ಣ ಮಾಹಿತಿ ಕರ್ನಾಟಕ ಲೋಕಸೇವಾ ಆಯೋಗವು (ಏಕಖಅ) 2026–27ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ (ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ') ಒಟ್ಟು 319 ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಅಧಿಕೃತ ನೇಮಕಾತಿ ಅಧಿಸೂಚನೆಯನ್ನು ಪ್ರಕಟಿಸಿದೆ. ಆ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ಆಕಾಂಕ್ಷಿಗಳಿಗೆ ಗುಡ್ ನ್ಯೂಸ್ ನೀಡಿದೆ.

319 ಹುದ್ದೆಗಳು

ಗ್ರೂಪ್ 'ಎ' ವಿಭಾಗದ 117 ಹುದ್ದೆಗಳು ಹಾಗೂ ಗ್ರೂಪ್ 'ಬಿ' ವಿಭಾಗದ 202 ಹುದ್ದೆಗಳಿವೆ. ಗ್ರೂಪ್ 'ಎ' ನಲ್ಲಿ ಸಹಾಯಕ ಆಯುಕ್ತರು, ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು, ಇಸಿಒ ಸೇರಿದಂತೆ ಪ್ರಮುಖ ಹುದ್ದೆಗಳಿದ್ದರೆ, ಗ್ರೂಪ್ 'ಬಿ'ನಲ್ಲಿ ತಹಶೀಲ್ದಾರ್, ವಾಣಿಜ್ಯ ತೆರಿಗೆ ಅಧಿಕಾರಿ, ಮುಖ್ಯಾಧಿಕಾರಿ ಮುಂತಾದ ಹುದ್ದೆಗಳಿವೆ. ಒಟ್ಟು ಹುದ್ದೆಗಳಲ್ಲಿ 297 ಮೂಲ ವೃಂದ ಹಾಗೂ 22 ಹೈದರಾಬಾದ್ ಕರ್ನಾಟಕಕ್ಕೆ ಸೇರಿವೆ.

ಅರ್ಜಿ ಸಲ್ಲಿಸಲು ಕೊನೆ ದಿನಾಂಕ ಯಾವಾಗ?

ಅರ್ಹ ಅಭ್ಯರ್ಥಿಗಳು ಆಗಸ್ಟ್ 1 ರಿಂದ ಆಗಸ್ಟ್ 31ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಪೂರ್ವಭಾವಿ ಪರೀಕ್ಷೆಯನ್ನು ನವೆಂಬರ್ 15 ರಂದು ನಡೆಸಲು ತಾತ್ಕಾಲಿಕವಾಗಿ ದಿನಾಂಕ ನಿಗದಿಪಡಿಸಲಾಗಿದೆ.

ಇನ್ನು ಮುಖ್ಯ ಪರೀಕ್ಷೆಗಳು 2027 ಫೆಬ್ರವರಿ 12 ರಿಂದ 18ರ ವರೆಗೆ ನಡೆಯಲಿದ್ದು, ಏಪ್ರಿಲ್ 27 ರಂದು ಮೇನ್ಸ್ ಪರೀಕ್ಷೆ ಫಲಿತಾಂಶ ಪ್ರಕಟವಾಗಲಿದೆ. ಮೇ 10ರಿಂದ 31ರವರೆಗೆ ಸಂದರ್ಶನ ನಡೆಯಲಿದ್ದು, ಜೂನ್ 5ರಂದು ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟವಾಗಲಿದೆ.

ಅರ್ಜಿ ಶುಲ್ಕವಾಗಿ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ 600 ರೂ. ಪ್ರವರ್ಗ 2ಂ, 2ಃ, 3ಂ, 3ಃ ಅಭ್ಯರ್ಥಿಗಳಿಗೆ 300 ರೂ, ಮಾಜಿ ಸೈನಿಕರಿಗೆ 50 ರೂ ನಿಗದಿಪಡಿಸಲಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಅರ್ಹ ಅಭ್ಯರ್ಥಿಗಳು ಕೊನೆಯ ದಿನಾಂಕದವರೆಗೂ ಕಾಯದೆ ಮುಂಚಿತವಾಗಿಯೇ ಕೆಪಿಎಸ್‌ಸಿ ಅಧಿಕೃತ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

ಇಂದು ಸಚಿ ಆಸ್ಪತ್ರೆಯಲ್ಲಿ "ನ್ಯೂರೋಸರ್ಜರಿ"

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಬೆಂಗಳೂರಿನ ಹೆಸರಾಂತ ಎಂ.ಎಸ್. ರಾಮಯ್ಯ ನರವಿಜ್ಞಾನ ಕ್ಲಿನಿಕ್ ಈಗ ನಗರದ ಶಿರಾರಸ್ತೆಯ ಎಸ್.ವಿ ಮಾಲ್ ಹತ್ತಿರದ ಸಚಿ ಆಸ್ಪತ್ರೆಯಲ್ಲಿ ಬೆಂಗಳೂರಿನ ಎಂ.ಎಸ್. ರಾಮಯ್ಯ ಮೆಮೋರಿಯಲ್ ಆಸ್ಪತ್ರೆಯ ಪ್ರತಿ ತಿಂಗಳ 1ನೇ ಮತ್ತು 3 ನೇ ಶನಿವಾರ ಆ 1 ರಂದು (ಇಂದು) ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಎಂ.ಎಸ್.ರಾಮಯ್ಯ ಆಸ್ಪತ್ರೆಯ ನ್ಯೂರೋಸರ್ಜರಿ ವೈದ್ಯರಾದ ಡಾ.ವಿನಾಯಕ ಜಿ.ಜೆರವರು ಲಭ್ಯವಿರುತ್ತಾರೆ.

ನ್ಯೂರೋಸರ್ಜರಿ ಸಂಬಂಧಿಸಿದ ಕಾಯಿಲೆಗಳಾದ ತಲೆನೋವು, ಮೂರ್ಛೆ ರೋಗ, ಕೈಕಾಲುಗಳಲ್ಲಿ ದುರ್ಬಲತೆ, ನಡಿಗೆ ಅಡಚಣೆಗಳು, ಬೆನ್ನು ಮತ್ತು ಕುತ್ತಿಗೆ ನೋವು, ಮರಗಟ್ಟುವಿಕೆ, ಕೈಗಳು ಮತ್ತು ಕಾಲುಗಳ ಪ್ಯಾರೆಸ್ಥೀಷಿಯಾ, ದೃಷ್ಟಿ ಸಮಸ್ಯೆಗಳು, ಸಮತೋಲನ ಸಮಸ್ಯೆ, ತಲೆಸುತ್ತು, ಹಾರ್ಮೋನ್ ಅಸಮತೋಲನ, ನಡಿಗೆ ಅಡಚಣೆಗಳು ಸಮಸ್ಯೆಗೆ ಚಿಕಿತ್ಸೆಯನ್ನು ನೀಡಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಾಣಿಗಾಗಿ ಟಿ.ಎಸ್.ರಾಜೇಶ್ 6364344024, 8884442161



ಎಂಪ್ರೆಸ್ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು–2026–27ನೇ ಸಾಲಿನ ಶೈಕ್ಷಣಿಕ ಸಾಂಸ್ಕೃತಿಕ ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆ, ರೇಂಜರ್ಸ್ ಮತ್ತು ರೋವರ್ಸ್ ಭಾರತೀಯ ಸೇವಾ ದಳ ಉದ್ಘಾಟನೆ, ಪ್ರತಿಭಾ ಪುರಸ್ಕಾರ ಹಾಗೂ ಕಲಾಮೃತ ಫೌಂಡೇಷನ್ ಆಹಾರ ವಿತರಣಾ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಎಂಪ್ರೆಸ್ ಕಾಲೇಜಿನ ಆಡಿಟೋರಿಯಂನಲ್ಲಿ ನಡೆಯಿತು. ದಿವ್ಯ ಸಾನಿಧ್ಯವನ್ನು ರಾಮಕೃಷ್ಣ ಸೇವಾಶ್ರಮದ ಅಧ್ಯಕ್ಷರಾದ ಶ್ರೀ ಜಪಾನಂದಜೀ ಮಹಾರಾಜ್ ಅವರು ವಹಿಸಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಅನ್ನಪೂರ್ಣ, ಕಲಾಮೃತ ಫೌಂಡೇಷನ್‌ನ ಅಧ್ಯಕ್ಷ ಟಿ.ಎನ್. ಮಧುಕರ್, ಕಾರ್ಯದರ್ಶಿ ಬಿ.ಆರ್.ಉಮೇಶ್, ಖಜಾಂಚಿ ಎಸ್.ಪಿ. ಚಿದಾನಂದ್, ನೇತತಜ್ಞರಾದ ಡಾ.ಛಾಯಾದೇವಿ, ಮಂಜುಳ ಎನ್., ಪಾರ್ವತಮ್ಮ, ನವೀನ್ ಕುಮಾರ್ ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ಮೊಬೈಲ್ ,ದುಶ್ಚಟಗಳಿಗೆ ಬಲಿಯಾಗಬೇಡಿ; ಪುಸ್ತಕದ ಕಡೆ ಗಮನ ಕೊಡಿ

ಸೂರ್ಯಪ್ರಗತಿನ್ಯೂಸ್.ಕಾಂ



ಮಧುಗಿರಿ:–ಓದಿದ ಶಾಲೆಗಳಿಗೆ ಹೆಸರನ್ನು ತರುವ ಮೂಲಕ ವಿದ್ಯಾರ್ಥಿಗಳು ಸತ್ಪ್ರಜೆಗಳಾಗಿ ಭವಿಷ್ಯವನ್ನು ರೂಪಿಸಿಕೊಳ್ಳಿ ಎಂದು ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ತಿಳಿಸಿದರು ಅವರು ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಏರ್ಪಡಿಸಿದ್ದ 2026 –2027 ನೇ ಸಾಲಿನ ಸಾಂಸ್ಕೃತಿಕ ಕ್ರೀಡಾ ಚಟುವಟಿಕೆಗಳ ಸಮಾರಂಭ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಈ ಕಾಲೇಜಿನ ಅಭಿವೃದ್ಧಿಗಾಗಿ, ಮೂಲಸೌಕರ್ಯಕ್ಕಾಗಿ ಶಾಸಕರು ಸುಮಾರು 60 ಲಕ್ಷ ಅನುದಾನವನ್ನ ಕೊಟ್ಟಿದ್ದಾರೆ. ಜೊತೆಗೆ ನಾನು ಕೂಡ ಒಂದುವರೆ ತಿಂಗಳ ಒಳಗಾಗಿ ಕಂಪ್ಯೂಟರ್ಸ್ ಹಾಗು ಟೇಬಲ್ ಗಳನ್ನು ಕಾಲೇಜಿಗೆ ನನ್ನ ವೈಯುಕ್ತಿಕವಾಗಿ ಕೊಡಲು ಸಿದ್ಧನಿದ್ದೇನೆ ಎಂದು ಹೇಳಿದರು. ಮಕ್ಕಳಿಗೆ ವಿದ್ಯಾಭ್ಯಾಸದ ಜೊತೆಗೆ ಕ್ರೀಡೆಯು ಮುಖ್ಯವಾಗುತ್ತದೆ.

ವಿದ್ಯಾರ್ಥಿಗಳು ಮೊಬೈಲ್ ಹಾಗೂ ದುಶ್ಚಟಗಳಿಗೆ ಬಲಿಯಾಗಬೇಡಿ. ಪಠ್ಯಪುಸ್ತಕದ ಕಡೆ ಗಮನ ಕೊಡಿ. ಹಾಗೂ ಗುರುಹಿರಿಯರ ಮಾತನ್ನು ಪಾಲಿಸಿ ಎಂದು ಹೇಳಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ ವಕೀಲರು, ಕವಿಗಳು ಆದ ಬಿದಲೋಟಿ ರಂಗನಾಥ್ ಮಾತನಾಡಿ ಇಂದು ಶಿಕ್ಷಣ ಸಂಸ್ಥೆಗಳು ವ್ಯಾಪಾರಿಕರಣ ಗೊಳ್ಳುತ್ತಿವೆ. ಆ ನಿಟ್ಟಿನಲ್ಲಿ ಬಡ ವಿದ್ಯಾರ್ಥಿಗಳಾದ ನೀವುಗಳು ಹಣಕ್ಕೆ ಸವಾಲಾಗಿ ಪೈಪೋಟಿಯಂತೆ ಅಂಕಗಳನ್ನು ಗಳಿಸುವ ಉನ್ನತ ಕೋರ್ಸ್‌ಗಳಿಗೆ ಸಿದ್ದರಾಗಿ. ಕನ್ನಡ ಶಾಲೆಗಳು ಮತ್ತು ಕಾಲೇಜುಗಳು ಇಂದು ಅಳಿವಿನಂಚಿನಲ್ಲಿ ಇರುವುದು ನೋವಿನ ಸಂಗತಿ. ಆ ಕನ್ನಡ ಶಾಲೆಗಳು ಮತ್ತು ಕಾಲೇಜುಗಳು ಉಳಿಯಬೇಕೆಂದರೆ ತಾವುಗಳು ಹೆಚ್ಚು ಹೆಚ್ಚು ಸರ್ಕಾರಿ ಕಾಲೇಜು ಮತ್ತು ಶಾಲೆಗಳಿಗೆ ಪ್ರವೇಶ ಪಡೆಯುವ ಮೂಲಕ ಉಳಿಸಿಕೊಳ್ಳುವ ಅನಿವಾರ್ಯತೆ ಇದೆ ಎಂದರು. ಪ್ರತಿಯೊಬ್ಬ ಮಗುವಿಗೂ ಗುಣಮಟ್ಟದ ಶಿಕ್ಷಣ ಮತ್ತು ಸಮಾನ ಶಿಕ್ಷಣ ಸಿಗಬೇಕು. ಇದು ಕೇವಲ ಅಂಕ ಗಳಿಸುವುದಲ್ಲ ಬದುಕಿನ ಕೌಶಲವನ್ನು ಕಲಿಸುವುದಿದೆ. ಆದ್ದರಿಂದ ಮಕ್ಕಳು ಮೊಬೈಲ್ ನಿಂದ ದೂರವಿದ್ದು, ಪತ್ರಿಕೆಗಳನ್ನು, ಪುಸ್ತಕಗಳನ್ನು ಓದುವ ಅಭ್ಯಾಸವನ್ನು ರೂಢಿಸಿಕೊಳ್ಳಿ. ವಿದ್ಯಾರ್ಥಿಗಳಾದ ನೀವುಗಳು ಕನಸು ಮತ್ತು ಗುರಿ ಇದ್ದ ಮನುಷ್ಯ ಯಶಸ್ವಿಯ ಹಾದಿಯನ್ನು ತುಳಿಯುತ್ತಾನೆ ಎಂದರು.

ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ತುಂಗೋಟಿ ರಾಮಣ್ಣ ಮಾತನಾಡಿ ಶಾಲಾ ಕಾಲೇಜುಗಳ ಕಟ್ಟಡ ಸುಸಜ್ಜಿತವಾಗಿದ್ದರೆ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ. ಸರ್ಕಾರಿ ಪದವಿ ಕಾಲೇಜಿನಲ್ಲಿ ಬಿಸಿ ಊಟ ಕೊಡುವಂತೆ ಪದವಿಪೂರ್ವ ಕಾಲೇಜಿನ ಮಕ್ಕಳಿಗೂ ಬಿಸಿಯೂಟ ಕೊಡುವಂತೆ ಮಾನ್ಯ ಶಾಸಕರಲ್ಲಿ ಮನವಿ ಮಾಡಿಕೊಳ್ಳುತ್ತೇನೆ ಎಂದರು. ಮಕ್ಕಳು ಕೀಳರಿಮೆಯನ್ನು ಬಿಟ್ಟು ಓದಿನ ಕಡೆ ಗಮನ ಕೊಡಿ ಎಂದರು. ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯ ಕಲೀಲ್ ಅಹಮದ್ ಮಾತನಾಡಿ ಮಕ್ಕಳಿಗೆ ಓದಲು ಒತ್ತಡ ಹಾಕಬೇಡಿ ವಿದ್ಯಾರ್ಥಿಗೆ ವಿದ್ಯೆಯಷ್ಟೇ ವಿನಯವು ಮುಖ್ಯ ಎಂದರು. ಪುರಸಭೆ ಮಾಜಿ ಅಧ್ಯಕ್ಷ ಲಾಲ ಪೇಟೆ ಮಂಜುನಾಥ್, ಮಾಜಿ ಪುರಸಭಾ ಸದಸ್ಯರಾದ ಎಮ್ ಪ್ರಾಂಶುಪಾಲರ ವೇದಮೂರ್ತಿ,ಶ್ರೀಧರ್, ಹರ್ಷ, ಉಪನ್ಯಾಸಕರದ ಹೊನ್ನೇಶ್, ಸಂಗೀತ, ಸತ್ಯನಾರಾಯಣ, ಹೇಮ ಕೆ. ಆರ್ ಪ್ರಾಣೇಶ್ ಕುಮಾರ್, ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ನಟ ಶ್ರೀನಗರ ಕಿಟ್ಟಿಗೆ ಸಿದ್ಧಶ್ರೀ ಪ್ರಶಸ್ತಿ ಪ್ರಧಾನ



ಸೂರ್ಯಪ್ರಗತಿನ್ಯೂಸ್ ತುಮಕೂರು: ಚಿಕ್ಕನಾಯಕನಹಳ್ಳಿ ತಾಲೂಕು ಹಂದನಕೆರೆಯ ಶ್ರೀ ಗುರುಗಿರಿ ಸಿದ್ದೇಶ್ವರ ಕ್ಷೇತ್ರದಡಾ. ರುದ್ರಾರಾಧ್ಯ ಸ್ವಾಮೀಜಿಅವರು ಚಲನಚಿತ್ರ ನಟ ಶ್ರೀನಗರ ಕಿಟ್ಟಿಅವರಿಗೆ ಸಿದ್ಧಶ್ರೀ ಪ್ರಶಸ್ತಿ ನೀಡಿ ಗೌರವಿಸಿದರು.

ಗುರುಪೂರ್ಣಿಮೆ ಅಂಗವಾಗಿ ಮಠದಲ್ಲಿ ನಡೆದ ಸಮಾರಂಭದಲ್ಲಿ ಸ್ವಾಮೀಜಿ ಪ್ರಶಸ್ತಿ ಪ್ರದಾನ ಮಾಡಿದರು.ಈ ಸಂದರ್ಭದಲ್ಲಿಮುಖ್ಯಮಂತ್ರಿಡಿ. ಕೆ.ಶಿವಕುಮಾರ್ ಅವರ ಆಪ್ತ ಸಹಾಯಕರಾಜಶೇಖರ್, ತಿಪಟೂರಿನ ಮುಖಂಡ ವಿ ಯೋಗೀಶ್, ಚಲನಚಿತ್ರನಿರ್ದೇಶಕಕಿಶನ್ ರಾವ್, ವಿಜಯ್‌ಕುಮಾರ್, ಕಿರುತೆರೆ ನಟರಾದದಯಾನಂದ್ ಸಾಗರ್, ಶೃತಿ ಪಾಟೀಲ್ , ಹಂದನಕೆರೆಗ್ರಾಮದರೇವಣ್ಣ, ನಾಗಣ್ಣ, ಬಸವರಾಜು, ಗವಿರಂಗಯ್ಯ, ಗುಡಿಗೌಡರಾದರಂಗನಾಥ್ ಮೊದಲಾದವರು ಹಾಜರಿದ್ದರು. ನಂತರ ನಟ ಶ್ರೀನಗರ ಕಟ್ಟಿ ಹಾಗೂ ಕಲಾವಿದರು ಬೆಟ್ಟದ ಮೇಲಿನ ಗುರುಗಿರಿ ಸಿದ್ದೇಶ್ವರ ಹಾಗೂ ದುರ್ಗಾದೇವಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ವಿಶೇಷ ಮತಪಟ್ಟಿ ಪರಿಷ್ಕರಣೆ ಉಪವಿಭಾಗಾಧಿಕಾರಿ ಪರಿಶೀಲನೆ



ಸೂರ್ಯಪ್ರಗತಿನ್ಯೂಸ್ ಮಧುಗಿರಿ : ತಾಲ್ಲೂಕಿನಲ್ಲಿ ವಿಶೇಷ ಮತಪಟ್ಟಿ ಪರಿಷ್ಕರಣೆ ಕಾರ್ಯವು ಪ್ರಗತಿಯಲ್ಲಿದ್ದು ಈವರೆಗೂ ಶೇಕಡಾ 89 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ ತಿಳಿಸಿದರು.ತಾಲೂಕಿನ ಕೊಟಗಾರಲಹಳ್ಳಿ ಗ್ರಾಮಪಂಚಾಯತಿಗೆ ಭೇಟಿ ನೀಡಿ ಬಿಎಲ್ ಒ ಗಳ ಕಾರ್ಯವೈಖರಿ ಪರಿಶೀಲಿಸಿ ಮಾತನಾಡುತ್ತಾ ಅರ್ಹ ಮತದಾರರು ಮತಪಟ್ಟಿಯಿಂದ ಹೊರಗುಳಿಯಬಾರದು. ಆಸಕ್ತಿ ವಹಿಸಿ ಎಸ್.ಐ.ಆರ್ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು. ಇಲ್ಲಿಯವರೆಗೂ ಸಂಪರ್ಕಕ್ಕೆ ಸಿಗದವರನ್ನು ಕಂದಾಯಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಅವರನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕು ಎಂದುಬಿ.ಎಲ್.ಒ ಗಳಿಗೆ ಸಲಹೆ ನೀಡಿದರು. ಇದೇ ವೇಳೆ ಹೊನ್ನಾಪುರ ಸ.ಹಿ.ಪ್ರಾ.ಶಾಲೆಯಲ್ಲಿ ಈವರ್ಷದಿಂದ ನೂತನವಾಗಿ ಎಲ್ ಕೆಜಿ ಮತ್ತು ಯುಕೆಜಿ ಆರಂಭವಾಗಿದ್ದು ಶಾಲೆಗೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಪಿಡಿಒ ದಯಾನಂದ್, ವಿಎ ಪ್ರಸನ್ನಕುಮಾರ್, ಗ್ರಾ.ಪಂ ಮಾಜಿ ಅಧ್ಯಕ್ಷ ನರಸಿಂಹಯ್ಯ, ಪಾಂಡುರಂಗಪ್ಪ, ಬಡಿಗೊಂಡನಹಳ್ಳಿ ದಿನೇಶ್ , ಸೇರಿದಂತೆ ಬಿ.ಎಲ್ ಒ ಗಳಾದ ತಿಮ್ಮಯ್ಯ, ರೂಪಾ ಹಾಗೂ ಗ್ರಾ.ಪಂ ನೌಕರ ವರ್ಗ, ಗ್ರಾಮಸ್ಥರು ಹಾಜರಿದ್ದರು.

ಶ್ರೀ ಸಿದ್ಧಾರ್ಥ ಇಂಜಿನಿಯರಿಂಗ್ ಕಾಲೇಜಿನ ಹೆಮ್ಮೆಯ ಸಾಧನೆಗೆ – ವರ್ಷದ ಅತ್ಯುತ್ತಮ ಯೋಜನೆ ಪ್ರಶಸ್ತಿಯ ಗರಿ

ಸೂರ್ಯಪ್ರಗತಿನ್ಯೂಸ್.ಕಾಂ



ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಪ್ರಾಯೋಜಕತ್ವದ ರಾಜ್ಯಮಟ್ಟದ ಯೋಜನಾ ಸ್ಪರ್ಧೆಯಲ್ಲಿ ಶ್ರೀ ಸಿದ್ಧಾರ್ಥ ಇಂಜಿನಿಯರಿಂಗ್ ಕಾಲೇಜಿನ ಮಾಹಿತಿ ವಿಜ್ಞಾನ ಮತ್ತು ಎಂಜಿನಿಯರಿಂಗ್ ವಿಭಾಗ ಸತತ ಎರಡನೇ ಬಾರಿಗೆ ರಾಜ್ಯಮಟ್ಟ "ಅತ್ಯುತ್ತಮ ಯೋಜನೆ" ಪ್ರಶಸ್ತಿಯನ್ನು ಪಡೆದುಕೊಂಡಿದೆ.

"ಜ್ಞಾನೇತ್ರ– ದೃಷ್ಟಿಹೀನರಿಗೆ ಪಥ ಸಂಚಲನದ ಮಾರ್ಗ ಸಹಾಯಕ್ಕಾಗಿ ಎಡ್ಜ್–ಎಐ–ಚಾಲಿತ ಸ್ಮಾರ್ಟ್‌ಫೋನ್ ಫ್ರೇಮ್‌ವರ್ಕ್" ಎಂಬ ಶೀರ್ಷಿಕೆಯ ಯೋಜನೆಯನ್ನು ಪ್ರೊ. ವಾಣಿ ಬಿ.ವಿ. ಅವರ ಮಾರ್ಗದರ್ಶನದಲ್ಲಿ ತುಮಕೂರಿನ ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ವಿದ್ಯಾರ್ಥಿಗಳು ಅಭಿವೃದ್ಧಿಪಡಿಸಿದ್ದಾರೆ. ಇದನ್ನು ನಾಗಮಂಗಲದ ಆದಿಚುಂಚನಗಿರಿಯ ಬಿ.ಜಿ. ನಗರದಲ್ಲಿ ನಡೆದ 'ರಾಜ್ಯ ಮಟ್ಟದ ಪೋಸ್ಟರ್ ಪ್ರಸ್ತುತಿ ಮತ್ತು ಪ್ರದರ್ಶನ'ದಲ್ಲಿ ಸಾದರಪಡಿಸಿ "ವರ್ಷದ ಅತ್ಯುತ್ತಮ ಯೋಜನೆ' ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಆದಿಚುಂಚನಗಿರಿ ಮಠ ಪೀಠಾಧ್ಯಕ್ಷರಾದ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ಪ್ರಶಸ್ತಿ ಮತ್ತು ಪ್ರಮಾಣ ಪತ್ರವನ್ನು ವಿತರಿಸಿದರು.

ಶ್ರೀ ಸಿದ್ಧಾರ್ಥ ಇಂಜಿನಿಯರಿಂಗ್ ಕಾಲೇಜಿನ ಹೃತಿಕ್, ಎಂ ಎಂ ಪ್ರತೀಕ್, ಐಶ್ವರ್ಯ ಮತ್ತು ದೀಪಿಕಾ ಅವರನ್ನು ಒಳಗೊಂಡ ತಂಡ ಪ್ರಾಜೆಕ್ಟ್ ಪ್ರದರ್ಶನವನ್ನು ಮಾಡಿದೆ. ಶ್ರೀಕಂಠಸ್ವಾಮಿ, ಎಸ್‌ಎಸ್‌ಐಟಿಯ ಎಸ್‌ಪಿಪಿ ಸಂಯೋಜಕರಾದ ಡಾ. ತಿಲಕ್‌ಚಂದ್ರ ಅವರು ವಿದ್ಯಾರ್ಥಿಗಳ ಸಂಶೋಧನೆಗೆ ಬೆನ್ನೆಲುಬಾಗಿದ್ದರು.

ಸತತ ಎರಡನೇ ವರ್ಷ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಪ್ರಶಸ್ತಿಯಲ್ಲಿ ಈ ಅತ್ಯುತ್ತಮ ಯೋಜನೆಯನ್ನು ಪಡೆಯುವಲ್ಲಿ ಅವರ ಪ್ರಯತ್ನಗಳು ಮತ್ತು ಭಾಗವಹಿಸುವಿಕೆಗಾಗಿ ಮಾಹಿತಿ ವಿಜ್ಞಾನ ಮತ್ತು ಎಂಜಿನಿಯರಿಂಗ್ ವಿಭಾಗದ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳು, ಮಾರ್ಗದರ್ಶಕ ಡಾ. ವಾಣಿ, ವಿಭಾಗದ ಮುಖ್ಯಸ್ಥ ಡಾ. ಅನ್ನಪೂರ್ಣ ಅವರು ಬೆಂಬಲದಿಂದಾಗಿ ಈ ಪ್ರಶಸ್ತಿ ಬಂದಿದೆ ಎಂದು ಹರ್ಷ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಯೋಜನಾ ಪ್ರದರ್ಶನದಲ್ಲಿ ನಮ್ಮ ಅತ್ಯುತ್ತಮ ಯೋಜನಾ ಪ್ರಶಸ್ತಿಗೆ ನಿರಂತರ ಪ್ರೋತ್ಸಾಹ, ಬೆಂಬಲ ಮತ್ತು ಮಾರ್ಗದರ್ಶನವು ವಿದ್ಯಾರ್ಥಿಗಳಿಗೆ ಪ್ರೇರಣೆಯ ಉತ್ತಮ ಮೂಲವಾಗಿದೆ. ಕೆಎಸ್‌ಸಿಎಸ್‌ಟಿ ವಿದ್ಯಾರ್ಥಿ ಯೋಜನಾ ಕಾರ್ಯಕ್ರಮದ (ಎಸ್‌ಪಿಪಿ) 2025 26 ರ 49 ನೇ ಸರಣಿಯಲ್ಲಿ ನಮ್ಮ ಸಂಸ್ಥೆಯು ಗಮನಾರ್ಹ ಮೈಲಿಗಲ್ಲು ಸಾಧಿಸಿರುವುದ ಸಂತೋಷ ಮತ್ತು ಹೆಮ್ಮೆಯ ಸಂಗತಿ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ. ಎಂ.ನಡಕಟ್ಟಿ ಸಂತಸ ಹಂಚಿಕೊಂಡಿದ್ದಾರೆ.

ಕುಲಾಧಿಪತಿಗಳ ಮೆಚ್ಚುಗೆ:

ಈ ಪ್ರತಿಷ್ಠಿತ ಮನ್ನಣೆ ನಮ್ಮ ಸಂಸ್ಥೆಗೆ ಬಹಳ ಹೆಮ್ಮೆಯ ವಿಷಯವಾಗಿದೆ. ಈ ಯಶಸ್ಸನ್ನು ಸಾಧಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ವಿದ್ಯಾರ್ಥಿಗಳನ್ನು ಅಭಿನಂದಿಸಿರುವ ಸಾಹೇ ವಿವಿ ಕುಲಾಧಿಪತಿಗಳಾದ ಡಾ.ಜಿ.ಪರಮೇಶ್ವರ್, ಕಾಲೇಜಿನ ಪ್ರಾಧ್ಯಾಪಕರ ನಿರಂತರ ಪ್ರೋತ್ಸಾಹ, ಬೆಂಬಲ ಮತ್ತು ಪ್ರೇರಣೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇಂತಹ ಯಶಸ್ಸನ್ನು ಸಾಧಿಸಲು ವಿದ್ಯಾರ್ಥಿಗಳ ನಿಜವಾದ ಸಮರ್ಪಣೆ, ಪ್ರಯತ್ನಗಳು ಮತ್ತು ಕೌಶಲ್ಯ ಕಾರಣವಾಗಿದೆ ಎಂದು ಸಾಹೇ ವಿವಿಯ ಕುಲಪತಿ ಡಾ. ನಿಂಗೇಗೌಡ ಮತ್ತು ಕುಲಸಚಿವ ಡಾ.ಅಶೋಕ ಮೆಹ್ತಾ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಇಂದು "ಜಿಲ್ಲಾ ಮಟ್ಟದ ವ್ಯಸನ ಮುಕ್ತ ದಿನಾಚರಣೆ"

ತುಮಕೂರು: ಶ್ರೀ ಮ.ನಿ.ಪ್ರ.ಡಾ: ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಪೊಲೀಸ್ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲ್ಲೂಕು ಆಡಳಿತ ಹಾಗೂ ಡಾ: ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಹಯೋಗದಲ್ಲಿ ಆಗಸ್ಟ್ 1ರಂದು ಬೆಳಗ್ಗೆ 10.30 ಗಂಟೆಗೆ ನಗರದ ತುಮಕೂರು ವಿಶ್ವವಿದ್ಯಾನಿಲಯದ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ "ಜಿಲ್ಲಾ ಮಟ್ಟದ ವ್ಯಸನ ಮುಕ್ತ ದಿನಾಚರಣೆ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕೊರಟಗೆರೆ ತಾಲ್ಲೂಕು ಕ್ಷೇತ್ರ ಸಿದ್ದರಬೆಟ್ಟ ಬಾಳೆಹೊನ್ನೂರು ಮಠದ ಮಠಾಧ್ಯಕ್ಷರಾದ ಶ್ರೀ ಶ್ರೀ ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು. ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ಹಾಗೂ ಸಂಸದ ವಿ. ಸೋಮಣ್ಣ ಅವರ ಘನ ಉಪಸ್ಥಿತಿಯಲ್ಲಿ ಉಪ ಮುಖ್ಯಮಂತ್ರಿ ಹಾಗೂ ಕಂದಾಯ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಚಿವ ಡಾ: ಜಿ. ಪರಮೇಶ್ವರ ಕಾರ್ಯಕ್ರಮವನ್ನು ಉದ್ಘಾಟಿಸುವರು. ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅಧ್ಯಕ್ಷತೆವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲೆಯ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು, ಗಣ್ಯರು ಭಾಗವಹಿಸುವರು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಹಿಮಂತರಾಜು ಜಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

"ಪತ್ರಕರ್ತರ ಸಂಘದಿಂದ ಸಮಾಜಮುಖಿ ಕಾರ್ಯಕ್ರಮ; ಎಂ. ಬಸವರಾಜಪ್ಪ

ಸೂರ್ಯಪ್ರಗತಿನ್ಯೂಸ್.ಕಾಂ




ತಿಪಟೂರು : ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತಿಪಟೂರು ಮತ್ತು ರೋಟರಿ ಸಂಸ್ಥೆ ವತಿಯಿಂದ ಇಂಥ ಜನೋಉಪಯೋಗ ಕಾರ್ಯಕ್ರಮ ಸಮಾಜಮುಖಿ ಕಾರ್ಯಕ್ರಮಗಳು ಹಮ್ಮಿಕೊಂಡಿರುವುದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷರಾದ ಬಸವರಾಜಪ್ಪ ತಿಳಿಸಿದರು.

ನಗರದ ರೋಟರಿ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತಿಪಟೂರು ತಾಲೂಕು ಘಟಕ ಹಾಗೂ ರೋಟರಿ ಸಹಯೋಗದೊಂದಿಗೆ ಈಶ್ವರ್ ಮಲ್ಪೆ ತಂಡದವರೊಂದಿಗೆ ಉಚಿತ ಶ್ರವಣ ತಪಾಸಣೆ ಮತ್ತು ಶ್ರವಣ ಯಂತ್ರಕ್ಕೆ ಸಹಾಯಧನ ಹಾಗೂ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂಥ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಹೆಮ್ಮೆಯ ಸಂಗತಿ ಇದರ ಸದುಪಯೋಗವನ್ನು ಎಲ್ಲಾ ಸಾರ್ವಜನಿಕರು ಪಡೆದು ಕೊಳ್ಳಬೇಕು ಮತ್ತು ತಾಲೂಕು ಘಟಕದ ವತಿಯಿಂದ ಮತ್ತಷ್ಟೂ ಕಾರ್ಯಕ್ರಮಗಳು ಮೂಡಿ ಬರಲಿ ಎಂದು ಆಶಿಸಿದರು.

ತಜ್ಞವೈದ್ಯರಾದ ಪವನ್ ಮಾತನಾಡಿ ಕಿವಿಯು ಮನುಷ್ಯನ ದೇಹದಲ್ಲಿ ಪ್ರಮುಖವಾದ ಅಂಗವಾಗಿದೆ ಕಿವಿಗೆ ಮೂರು ಭಾಗಗಳಿಂದ ಶಬ್ದವು ನರಗಳ ಮೂಲಕ ಮೆದುಳಿಗೆ ತಲುಪುತ್ತದೆ. ಶಬ್ದವು ತಲುಪಲು ಸಾಧ್ಯವಾಗದೆ ಇದ್ದಾಗ ಶ್ರವಣ ದೋಷ ಉಂಟಾಗುತ್ತದೆ ಕೆಲವರಿಗೆ ಯಂತ್ರಗಳ ಆಳವಡಿಕೆ ಮೂಲಕ ಹಾಗೂ ಕೆಲವರಿಗೆ ಶಸ್ತ್ರಚಿಕಿತ್ಸೆಯಿಂದ ಶ್ರವಣದೋಷವನ್ನು ಗುಣಪಡಿಸ ಬಹುದಾಗಿದೆ ಎಂದರು

ಈಶ್ವರ್ ಮಲ್ಪೆ ತಂಡದ ಸಂಯೋಜಕ ಲವ ಬಂಗೇರಾ ಮಾತನಾಡಿ ಪಚೇಂದ್ರೀಯಗಳಲ್ಲಿ ಕಿವಿ ಕಣ್ಣು ಮುಖ್ಯವಾಗಿವೆ ಕಣ್ಣು ಕಾಣಿಸುವುದಿಲ್ಲ ಪ್ರಪಂಚವೇ ಕಾಣುವುದಿಲ್ಲ ಕಿವಿ ಕೇಳುವುದಿಲ್ಲಾ ಎಂದರೆ ಪ್ರಪಂಚದಿಂದ ದೂರ ಉಳಿದಂತಾಗುತ್ತದೆ ಆದ್ದರಿಂದ ಕಾಲ ಕಾಲಕ್ಕೆ ತಪಾಸಣೆ ಒಳಗಾಗಬೇಕು. ಈಶ್ವರ್ ಮಲ್ಪೆ ತಂಡದಿಂದ 141 ನೇ ತಪಾಸಣಾ ಶಿಬಿರವನ್ನು ತಿಪಟೂರಿನಲ್ಲಿ ಆಯೋಜಿಸಿರುವುದು ಖುಷಿ ತಂದಿದೆ ಎಂದರು. ಶಿಬಿರದಲ್ಲಿ 40ಕ್ಕೂ ಹೆಚ್ಚು ಮಂದಿಗೆ ತಪಾಸಣೆ ನಡೆಸಿ ಸೂಕ್ತ ಮಾರ್ಗದರ್ಶನ ನೀಡಲಾಯಿತು. ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ನೂತನ ಅಧ್ಯಕ್ಷರಾದ ಪ್ರಕಾಶ್ ಕ್ಯಾತನಹಳ್ಳಿ, ಉದಯ ರವಿ ಸಹಕಾರಿ ಸಂಘದ ಅಧ್ಯಕ್ಷರಾದ ಕೆ ಎಂ ರಾಜಣ್ಣ, ಮಕ್ಕಳ ಸಾಹಿತ್ಯ ಪರಿಷತ್ತಿನ ಮಂಜಪ್ಪ, ಪತ್ರಕರ್ತರ ಸಂಘದ ಅಧ್ಯಕ್ಷರಾದ ದಯಾನಂದ್ ಟಿ ಎಸ್, ಪ್ರಧಾನ ಕಾರ್ಯದರ್ಶಿ ಸಿದ್ದೇಶ್ವರ ಸಿಎನ್ , ಖಜಾಂಚಿ ಕುಮಾರಸ್ವಾಮಿ , ಉಪಾಧ್ಯಕ್ಷರಾದ ಪ್ರಶಾಂತ್ ಕೆ ಆರ್, ನಿರ್ದೇಶಕರುಗಳಾದ ಕಿರಣ್ ಕುಮಾರ್, ಮನೋಹರ್, ಹಿರಿಯ ಸದಸ್ಯರಾದ ಆನಂದ್, ಮಂಜುನಾಥ್, ಮಿಥುನ್, ರವಿ, ಮೋಹನ್ ಕುಮಾರ್. ಹಾಗೂ ರೋಟರಿ ಸಂಸ್ಥೆಯ ಪದಾಧಿಕಾರಿಗಳು ಇನ್ನು ಮುಂತಾದವರು ಹಾಜರಿದ್ದರು"

'ಸಮಾಜ ಮುಖಿ ಕಾರ್ಯಗಳಲ್ಲಿ ಮಹಿಳೆಯರು ಮುಂದೆ ಬರಲಿ'



ರೋಟರಿಯ ಸೇವಾ ಚಟುವಟಿಕೆಗೆ ಚಾಲನೆ ನೀಡಿದ ಸಿದ್ಧಲಿಂಗ ಸ್ವಾಮೀಜಿ

ತುಮಕೂರು: ಈಗಿನ ಸಮಾಜ ಕೇವಲ ಪುರುಷ ಪ್ರಧಾನವಷ್ಟೇ ಆಗಿರದೆ, ಪುರುಷ ಮತ್ತು ಸ್ತ್ರೀ ಸಮಾನವಾದ ಪ್ರಧಾನ ಸಮಾಜವಾಗಬೇಕಿದೆ. ಮಹಿಳೆಯರು ಸಾಧನೆ ಮಾಡಲು, ಸಮಾಜ ಮುಖಿಯಾಗಿ ಕಾರ್ಯ ನಿರ್ವಹಿಸಲು ಮುಂದೆ ಬರಬೇಕು ಎಂದು ಸಿದ್ದಗಂಗಾ ಮಠಾಧ್ಯಕ್ಷರಾದ ಸಿದ್ಧಲಿಂಗ ಸ್ವಾಮೀಜಿ ತಿಳಿಸಿದರು.

ನಗರದ ರೋಟರಿ ಬಾಲ ಭವನದಲ್ಲಿ ನಡೆದ ಸಮಾರಂಭದಲ್ಲಿ ರೋಟರಿ ತುಮಕೂರು ಅಧ್ಯಕ್ಷೆ ಭಾಗ್ಯಲಕ್ಷ್ಮಿ ನಾಗರಾಜ್ ಅವರ ಅವಧಿಯ ಕಾರ್ಯ ಚಟುವಟಿಕೆಗಳ ಮೊದಲ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಆಶೀರ್ವದಿಸಿದ ಸ್ವಾಮೀಜಿ, ರೋಟರಿಯಂತಹ ವಿಶ್ವವ್ಯಾಪಿ ಸೇವಾ ಸಂಘಟನೆಯ ನೇತೃತ್ವ ವಹಿಸಿ ಸಮಾಜಮುಖಿ ಚಟುವಟಿಕೆಗಳಲ್ಲಿ ಮಹಿಳೆಯರು ಸಕ್ರಿಯವಾಗಿ ತೊಡಗಿಸಿ ಕೊಳ್ಳುತ್ತಿರುವುದು ಅಧ್ಯಕ್ಷೆ ಭಾಗ್ಯಲಕ್ಷ್ಮಿ ಅವರು ಉದಾಹರಣೆಯಾಗಿದ್ದಾರೆ ಎಂದರು.

ಪ್ರಕೃತಿ, ಶಿಕ್ಷಣ, ಆರೋಗ್ಯ, ಸಮಾಜ ಹೀಗೆ ನಾನಾ ಕ್ಷೇತ್ರಗಳಲ್ಲಿ ಸಾಧ್ಯವಾದಷ್ಟೂ ಒಳ್ಳೆಯ ಕೆಲಸಗಳನ್ನು ಮಾಡುವಧ್ಯೆಯ ಹೊಂದಿ ಅದರ ಅನುಷ್ಠಾನಕ್ಕೆ ಶ್ರಮಿಸಿ ಸಮಾಜಕ್ಕೆ ಉದಾತ್ತ ಕೊಡುಗೆ ನೀಡುತ್ತಿದ್ದಾರೆ.ನಾವು ಮನುಷ್ಯರು ಬರುತ್ತೇವೆ, ಹೋಗುತ್ತೇವೆ. ಆದರೆ ನಾವಿರುವಾಗ ಸಮಾಜಕ್ಕೆ ಏನು ಮಾಡಿದೆವು ಎಂಬುದು ಮುಖ್ಯವಾಗುತ್ತದೆ. ಎಂದು ಸಂಸ್ಥೆಯ ಚಟುವಟಿಕಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ರೋಟರಿ ಎಂಬುದು ಒಂದು ಸಂಸ್ಥೆಯಲ್ಲ. ಇದು ಕುಟುಂಬ. ಇದು ನಮ್ಮದೆಂಬ ಭಾವನೆಯಿಂದ ಬಂದು ಸೇರುವುದು. ಇದು ನಮ್ಮದೆಂಬ ಭಾವನೆಯಿಂದ ಬಂದು ಸೇರುವುದು ಮುಂದಿನ ಪೀಳಿಗೆಗೆ ಸಂಸ್ಕಾರವನ್ನು ಕಲಿಸುತ್ತದೆ. ಎಂದು ಹಾರೈಸಿದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.